

Volume : 9 | Issue : 161
ಸಂಪುಟ : ೯ | ಸಂಚಿಕೆ : ೧೬೧
September : 11 : 2026 : Friday
ಸೆಪ್ಟಂಬರ್ : 11 : 2026 : ಶುಕ್ರವಾರ

www.VIKRAMAVAHINI.com

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

# ವಿಕ್ರಮ ವಾಹಿನಿ

ಪುಟ 4 ₹2 || ಕನ್ನಡ ದಿನಪತ್ರಿಕೆ ||
VIKRAMA VAHINI
PRGI NO: KARKAN/2018/78481



ಮಯೋಸೈಟಿಸ್ ಅನಾರೋಗ್ಯದ ಬಳಿಕ ಚಿತ್ರರಂಗ ತೊರೆಯಲು ನಿರ್ಧರಿಸಿದ್ದರೂ, ನಿರ್ದೇಶಕ ರಾಜ್ ನಿಡಿಮೋರು ಅವರ ಒತ್ತಾಯದ ಮೇರೆಗೆ 'ಮಾ ಇಂಟ ಬಂಗಾರಂ' ಚಿತ್ರದ ಮೂಲಕ ಮತ್ತೆ ಬಣ್ಣದ ಲೋಕಕ್ಕೆ ಮರಳಿದ್ದಾರೆ. ನೂರು ಕೋಟಿ ರೂ. ಗಳಿಕೆಯೊಂದಿಗೆ ಯಶಸ್ವಿ ಕಮ್‌ಬ್ಯಾಕ್ ಮಾಡಿದ ಸಮಂತಾ.

ಬಳ್ಳಾರಿಯಲ್ಲಿ 'ಬಳ್ಳಾರಿ ಚಲೋ' ಪಾದಯಾತ್ರೆಗೆ ತೆರೆ | ಪುಟ 3

ಬ್ರಿಟಿಷರ ವಿರುದ್ಧ 'ರಣಬಾಲಿ'ಯಾಗಿ ದೇವರಕೊಂಡ ಅಬ್ಬರ | ಪುಟ 4

## ■ ಸುದ್ದಿ ಚುಟುಕು

### ಸಿನಿಮಾ ಟಿಕೆಟ್ ಮೇಲಿನ ಶೇ.2 ಸೆಸ್ ನೋಟಿಸ್ ರದ್ದು

● ವಿಕ್ರಮ ವಾಹಿನಿ । ಬೆಂಗಳೂರು

ಚಿತ್ರಮಂದಿರಗಳು ಹಾಗೂ ಮಲ್ಟಿಪ್ಲೆಕ್ಸ್‌ಗಳಲ್ಲಿ ಸಿನಿಮಾ ಟಿಕೆಟ್ ದರದ ಮೇಲೆ ಶೇ.2ರಷ್ಟು ಸೆಸ್ ಸಂಗ್ರಹಿಸುವಂತೆ ಕಾರ್ಮಿಕ ಇಲಾಖೆ ಹೊರಡಿಸಿದ್ದ ನೋಟಿಸ್‌ಗಳನ್ನು ಹೈಕೋರ್ಟ್ ರದ್ದುಪಡಿಸಿದೆ.

ಸಿನಿಮಾ ಹಾಗೂ ಸಾಂಸ್ಕೃತಿಕ ಕಾರ್ಯಕರ್ತರ ಕಲ್ಯಾಣ ಯೋಜನೆಗಳಿಗೆ ಅನುದಾನ ಒದಗಿಸುವ ಉದ್ದೇಶದ ಕರ್ನಾಟಕ ಚಲನಚಿತ್ರ ಮತ್ತು ಸಾಂಸ್ಕೃತಿಕ ಕಾರ್ಮಿಕರ ಕಲ್ಯಾಣ ಅಧಿನಿಯಮ–2024ರಡಿ ಸೆಸ್ ವಸೂಲಿ ಸೂಚಿಸಲಾಗಿತ್ತು. ಇದನ್ನು ಪ್ರಶ್ನಿಸಿ ಮಲ್ಟಿಪ್ಲೆಕ್ಸ್ ಅಸೋಸಿಯೇಷನ್ ಆಫ್ ಇಂಡಿಯಾ, ಪಿವಿಆರ್ ಐನಾಕ್ಸ್ ಲಿಮಿಟೆಡ್ ಹಾಗೂ ಶಂತನು ಪೈ ಸಲ್ಲಿಸಿದ್ದ ಅರ್ಜಿಯನ್ನು ವಿಚಾರಣೆ ನಡೆಸಿದ ನ್ಯಾಯಮೂರ್ತಿ ಹೆಚ್.ಟಿ. ನರೇಂದ್ರಪ್ರಸಾದ್ ಅವರ ಏಕಸದಸ್ಯ ಪೀಠ ಈ ಆದೇಶ ನೀಡಿದೆ.

ಕಾಯ್ದೆ ಜಾರಿಗೆ ಸಂಬಂಧಿಸಿದಂತೆ ಸರ್ಕಾರ ಈವರೆಗೆ ಅಧಿಕೃತ ಗೆಜೆಟ್ ಅಧಿಸೂಚನೆ ಹೊರಡಿಸಿಲ್ಲ. ಹೀಗಿರುವಾಗ ಕಾಯ್ದೆ ಜಾರಿಯಲ್ಲಿದೆ ಎಂದು ಪರಿಗಣಿಸಿ ಸೆಸ್ ವಸೂಲಿ ಮಾಡಲು ಸಾಧ್ಯವಿಲ್ಲ ಎಂದು ನ್ಯಾಯಪೀಠ ಸ್ಪಷ್ಟಪಡಿಸಿತು. ಆಗಸ್ಟ್ 29ರಂದು ಹೊರಡಿಸಿದ್ದ ಸೆಸ್ ವಸೂಲಿ ಕಚೇರಿ ಆದೇಶವನ್ನು ಸರ್ಕಾರ ಈಗಾಗಲೇ ವಾಪಸ್ ಪಡೆದಿರುವುದನ್ನೂ ನ್ಯಾಯಪೀಠ ಪರಿಗಣಿಸಿತು.

ಜಾರಿಗೆ ಬರದ ಕಾಯ್ದೆಯ ಆಧಾರದ ಮೇಲೆ ಸೆಸ್ ವಸೂಲಿಗೆ ನೀಡಿದ್ದ ನೋಟಿಸ್‌ಗಳನ್ನು ರದ್ದುಪಡಿಸಲಾಗುವುದು ಎಂದು ನ್ಯಾಯಪೀಠ ಆದೇಶಿಸಿತು.

### ವೈದ್ಯನಿಗೆ ಕ್ರಿಪ್ಟೋ ವಂಚನೆ: ರೂ 4.47 ಕೋಟಿ ಪಂಗನಾಮ

● ವಿಕ್ರಮ ವಾಹಿನಿ । ಬೆಂಗಳೂರು

ಕ್ರಿಪ್ಟೋ ಕರೆನ್ಸಿ ಹೂಡಿಕೆಯಲ್ಲಿ ಭಾರಿ ಲಾಭದ ಆಮಿಷವೊಡ್ಡಿ ನಗರದ 50 ವರ್ಷದ ವೈದ್ಯರೊಬ್ಬರಿಗೆ ಸೈಬರ್ ವಂಚಕರು ರೂ 4.47 ಕೋಟಿ ವಂಚಿಸಿರುವ ಘಟನೆ ಬೆಳಕಿಗೆ ಬಂದಿದೆ.

ದೊಡ್ಡ ದುನಸಂದ್ರದ ನಿವಾಸಿಯಾಗಿರುವ ವೈದ್ಯರನ್ನು ಕಳೆದ ತಿಂಗಳು ಆಯುಷಿ ಶರ್ಮಾ ಎಂಬಾಕೆ ವಾಟ್ಸಾಪ್ ಮೂಲಕ ಸಂಪರ್ಕಿಸಿ, ಕ್ರಿಪ್ಟೋ ಟ್ರೇಡಿಂಗ್‌ನಲ್ಲಿ ಹೂಡಿಕೆ ಮಾಡಿದರೆ ಹೆಚ್ಚಿನ ಲಾಭ ಗಳಿಸಬಹುದು ಎಂದು ನಂಬಿಸಿದ್ದಾಳೆ. ಬಳಿಕ ಟ್ರೇಡಿಂಗ್ ಅನಾಲಿಸ್ಟ್ ಎಂದು ಪರಿಚಯಿಸಿಕೊಂಡ ವಿಜಯ್ ಅನಂತ್ ಎಂಬಾತನ ಮೊಬೈಲ್ ಸಂಖ್ಯೆ ನೀಡಿದ್ದಾಳೆ.

ಆತನ ಮೂಲಕ 'ಕಾಯಿನ್ ಟಿಆರ್‌ಎಸ್ ಟ್ರಾನ್ಸಾಕ್ಷನ್' ಹೆಸರಿನ ವಾಟ್ಸಾಪ್ ಗುಂಪಿಗೆ ವೈದ್ಯರನ್ನು ಸೇರಿಸಲಾಗಿತ್ತು. ಗುಂಪಿನಲ್ಲಿ ಭಾರಿ ಲಾಭ ಗಳಿಸಿರುವುದಾಗಿ ತೋರಿಸುವ ನಕಲಿ ಸ್ಕ್ರೀನ್‌ಶಾಟ್‌ಗಳನ್ನು ಹಂಚಿಕೊಂಡು ನಂಬಿಕೆ ಮೂಡಿಸಲಾಗಿತ್ತು. ಬಳಿಕ ನಕಲಿ ಟ್ರೇಡಿಂಗ್ ವೇದಿಕೆಯ ಲಿಂಕ್ ಕಳುಹಿಸಿ ನೋಂದಣಿ ಮಾಡಿಸಲಾಗಿತ್ತು.

ವಂಚಕರ ಸೂಚನೆಯಂತೆ ಆ.23ರಿಂದ ಸೆ.3ರವರೆಗೆ ವಿವಿಧ ಬ್ಯಾಂಕ್ ಖಾತೆಗಳಿಗೆ ಹಂತ ಹಂತವಾಗಿ ವೈದ್ಯರು ರೂ 4.47 ಕೋಟಿ ವರ್ಗಾಯಿಸಿದ್ದರು. ನಕಲಿ ವೇದಿಕೆಯಲ್ಲಿ ರೂ 14 ಕೋಟಿ ಲಾಭ ಗಳಿಸಿರುವುದಾಗಿ ತೋರಿಸಲಾಗಿತ್ತು. ಆದರೆ, ಲಾಭದ ಹಣ ಹಿಂಪಡೆಯಲು ಸಾಧ್ಯವಾಗಿರಲಿಲ್ಲ.

ತಕ್ಷಣ ಸೈಬರ್ ಕ್ರೈಂ ಸಹಾಯವಾಣಿ 1930ಗೆ ಕರೆ ಮಾಡಿ ದೂರು ನೀಡಿದ್ದು, ಕೇಂದ್ರ ವಿಭಾಗದ ಸೈಬರ್ ಕ್ರೈಂ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ವಂಚನೆಗೆ ಬಳಸಿದ ಬ್ಯಾಂಕ್ ಖಾತೆಗಳನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಿ ಆರೋಪಿಗಳ ಪತ್ತೆಗೆ ಪೊಲೀಸರು ತನಿಖೆ ನಡೆಸುತ್ತಿದ್ದಾರೆ.

ರಾಜ್ಯದಲ್ಲಿ ಜುಲೈ ಅಂತ್ಯದವರೆಗೆ ಮಾಹಿತಿ ತಂತ್ರಜ್ಞಾನ ಕಾಯ್ದೆಯಡಿ 7,063 ಸೈಬರ್ ಅಪರಾಧ ಪ್ರಕರಣಗಳು ದಾಖಲಾಗಿದ್ದು, ಈ ಪೈಕಿ 1,350 ಪ್ರಕರಣಗಳು ಟ್ರೇಡಿಂಗ್ ಮೂಲಕ ಹೂಡಿಕೆ ಮಾಡಿಸಿಕೊಂಡು ವಂಚಿಸಿದ ಪ್ರಕರಣಗಳಾಗಿವೆ ಎಂದು ಪೊಲೀಸ್ ಇಲಾಖೆ ತಿಳಿಸಿದೆ.

**ಎಚ್ಚರಿಕೆ:** ತ್ವರಿತ ಹಾಗೂ ಖಚಿತ ಲಾಭದ ಆಮಿಷವೊಡ್ಡುವ ಅಪರಿಚಿತ ವಾಟ್ಸಾಪ್, ಟೆಲಿಗ್ರಾಂ ಸಂದೇಶಗಳನ್ನು ನಂಬಬಾರದು. ನಕಲಿ ಟ್ರೇಡಿಂಗ್ ಗುಂಪುಗಳು, ಸ್ಕ್ರೀನ್‌ಶಾಟ್‌ಗಳು ಹಾಗೂ ಅಪರಿಚಿತ ಲಿಂಕ್‌ಗಳ ಬಗ್ಗೆ ಎಚ್ಚರಿಕೆ ವಹಿಸಬೇಕು. ಒಟಿಪಿ, ಪಾಸ್‌ವರ್ಡ್, ಬ್ಯಾಂಕ್ ವಿವರ ಸೇರಿದಂತೆ ಯಾವುದೇ ವೈಯಕ್ತಿಕ ಮಾಹಿತಿಯನ್ನು ಅಪರಿಚಿತರಿಗೆ ನೀಡಬಾರದು. ವಂಚನೆಗೊಳಗಾದ ತಕ್ಷಣ 1930ಕ್ಕೆ ದೂರು ನೀಡುವಂತೆ ಪೊಲೀಸರು ಸಲಹೆ ನೀಡಿದ್ದಾರೆ.

# ಪ್ಯಾಕೆಟ್ ಆಹಾರಕ್ಕೆ ಎಚ್ಚರಿಕೆ ಇರಲಿ: ಸುಪ್ರೀಂ

**ಅಧಿಕ ಉಪ್ಪು, ಸಕ್ಕರೆ ಹಾಗೂ ಕೊಬ್ಬಿನಂಶ ಹೊಂದಿರುವ ಪ್ಯಾಕ್ ಮಾಡಿದ ಆಹಾರಗಳ ಕುರಿತು ಗ್ರಾಹಕರಿಗೆ ಮುನ್ನೆಚ್ಚರಿಕೆ ನೀಡಲು ಪ್ಯಾಕೆಟ್‌ನ ಮುಂಭಾಗದಲ್ಲೇ ಎಚ್ಚರಿಕೆ ಲೇಬಲ್ ಅಳವಡಿಸುವುದು ರಾಷ್ಟ್ರೀಯ ಹಿತಾಸಕ್ತಿಯ ವಿಚಾರ ಎಂದು ಸುಪ್ರೀಂ ಕೋರ್ಟ್ ಅಭಿಪ್ರಾಯಪಟ್ಟಿದೆ. ಮಕ್ಕಳ ಆರೋಗ್ಯದ ಬಗ್ಗೆಯೂ ಕಳವಳ ವ್ಯಕ್ತಪಡಿಸಿರುವ ನ್ಯಾಯಪೀಠ, ಈ ಕುರಿತು ಎಫ್‌ಎಸ್‌ಎಸ್‌ಎಐನಿಂದ ಹೆಚ್ಚಿನ ವಿವರಗಳನ್ನು ಕೋರಿದೆ.**

● ವಿಕ್ರಮ ವಾಹಿನಿ । ನವದೆಹಲಿ

ಉಪ್ಪು, ಸಕ್ಕರೆ ಹಾಗೂ ಕೊಬ್ಬಿನಂಶ ಅಧಿಕವಾಗಿರುವ ಪ್ಯಾಕ್ ಮಾಡಿದ ಆಹಾರ ಉತ್ಪನ್ನಗಳ ಪ್ಯಾಕೆಟ್‌ನ ಮುಂಭಾಗದಲ್ಲೇ ಎಚ್ಚರಿಕೆ ಲೇಬಲ್ ಅಳವಡಿಸುವ ವಿಚಾರವನ್ನು 'ರಾಷ್ಟ್ರೀಯ ಹಿತಾಸಕ್ತಿ'ಯ ವಿಷಯವಾಗಿ ಪರಿಗಣಿಸುವಂತೆ ಸುಪ್ರೀಂ ಕೋರ್ಟ್ ಗುರುವಾರ ಆಹಾರ ಸುರಕ್ಷತಾ ಕ್ಷೇತ್ರದ ಎಲ್ಲ ಪಾಲುದಾರರಿಗೆ ಸೂಚಿಸಿದೆ.

ನ್ಯಾಯಮೂರ್ತಿಗಳಾದ ಜೆ.ಬಿ. ಪಾರ್ದಿವಾಲಾ ಮತ್ತು ಕೆ. ವಿನೋದ್ ಚಂದ್ರನ್ ಅವರ ಪೀಠವು '3ಎಸ್ ಆ್ಯಂಡ್ ಅವರ್ ಹೆಲ್ತ್ ಸೊಸೈಟಿ' ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿತು. ಮಕ್ಕಳ ಆರೋಗ್ಯದ ಬಗ್ಗೆ ವಿಶೇಷ ಕಳವಳ ವ್ಯಕ್ತಪಡಿಸಿದ ನ್ಯಾಯಪೀಠ, ಬೆಳೆಯುತ್ತಿರುವ ಮಕ್ಕಳ ಆರೋಗ್ಯದ ಮೇಲೆ ಅತಿಯಾಗಿ ಸಂಸ್ಕರಿಸಿದ ಆಹಾರ ಬೀರುವ ಪರಿಣಾಮವನ್ನು ಗಂಭೀರವಾಗಿ



ಪರಿಗಣಿಸುವಂತೆ ತಿಳಿಸಿತು.

ಭಾರತೀಯ ಆಹಾರ ಸುರಕ್ಷತೆ ಮತ್ತು ಮಾನದಂಡಗಳ ಪ್ರಾಧಿಕಾರ (ಎಫ್‌ಎಸ್‌ಎಸ್‌ಎಐ) ಈಗಾಗಲೇ ಸ್ಯಾಚುರೇಟೆಡ್ ಕೊಬ್ಬು, ಸಕ್ಕರೆ ಮತ್ತು ಉಪ್ಪಿನಂಶ ಹೆಚ್ಚಿರುವ ಪ್ಯಾಕ್ ಮಾಡಿದ ಆಹಾರಗಳಿಗೆ ಪ್ಯಾಕೆಟ್‌ನ ಮುಂಭಾಗದಲ್ಲಿ ಕೆಂಪು ಬಣ್ಣದ ಎಚ್ಚರಿಕೆ ಲೇಬಲ್ ಅಳವಡಿಸುವ ಪ್ರಸ್ತಾವನೆ ಸಲ್ಲಿಸಿದೆ.

ಆದರೆ, ಸಸ್ಯಾಹಾರಿ ಮತ್ತು ಮಾಂಸಾಹಾರಿ ಆಹಾರಗಳನ್ನು ಗುರುತಿಸಲು ಈಗಾಗಲೇ ಕ್ರಮವಾಗಿ ಹಸಿರು ಮತ್ತು ಕೆಂಪು ಬಣ್ಣಗಳನ್ನು ಬಳಸುತ್ತಿರುವುದರಿಂದ, ಅತಿ ಸಂಸ್ಕರಿಸಿದ ಆಹಾರಗಳಿಗೆ ಎಚ್ಚರಿಕೆ ನೀಡಲು ಪರ್ಯಾಯ ಬಣ್ಣ ಬಳಸುವ ಸಾಧ್ಯತೆಯ ಬಗ್ಗೆಯೂ ವಿಚಾರಣೆ ವೇಳೆ ಚರ್ಚೆ ನಡೆಯಿತು.

ಪ್ಯಾಕೆಟ್‌ನ ಹಿಂಭಾಗದಲ್ಲಿ ಪೌಷ್ಟಿಕಾಂಶದ ವಿವರಗಳನ್ನು ನೀಡಲಾಗುತ್ತಿದ್ದರೂ, ನಿಗದಿತ ಮಿತಿಗಿಂತ ಹೆಚ್ಚು ಸಕ್ಕರೆ, ಉಪ್ಪು ಅಥವಾ ಕೊಬ್ಬಿನಂಶವಿದ್ದರೆ ಅದನ್ನು ಗ್ರಾಹಕರು ಸುಲಭವಾಗಿ ಗುರುತಿಸುವಂತಿರುವ ಮಾರ್ಗಸೂಚಿಗಳಿವೆಯೇ ಎಂಬುದನ್ನು ಸ್ಪಷ್ಟಪಡಿಸುವಂತೆ ಎಫ್‌ಎಸ್‌ಎಸ್‌ಎಐಗೆ ನ್ಯಾಯಪೀಠ ಸೂಚಿಸಿತು.

ಪ್ರಕರಣಕ್ಕೆ ಸಂಬಂಧಿಸಿದ ವಿವರವಾದ ಆದೇಶವನ್ನು ಶೀಘ್ರದಲ್ಲೇ ಅಪ್‌ಲೋಡ್ ಮಾಡುವುದಾಗಿ ತಿಳಿಸಿದ ನ್ಯಾಯಪೀಠ, ಮುಂದಿನ ವಿಚಾರಣೆಯನ್ನು ಸೆ.28ಕ್ಕೆ ನಿಗದಿಪಡಿಸಿದೆ.

ನ್ಯಾಯಪೀಠವು ಗ್ರಾಹಕರು ಪ್ಯಾಕೆಟ್‌ನ ಮುಂಭಾಗದಲ್ಲೇ ಉತ್ಪನ್ನದಲ್ಲಿರುವ ಸಕ್ಕರೆ, ಉಪ್ಪು ಮತ್ತು ಕೊಬ್ಬಿನ ಪ್ರಮಾಣದ ಬಗ್ಗೆ ಸ್ಪಷ್ಟ ಮಾಹಿತಿ ಪಡೆಯುವಂತಿರಬೇಕು ಎಂದು ಅಭಿಪ್ರಾಯಪಟ್ಟಿತು. ಇಂತಹ ಲೇಬಲ್‌ಗಳು ಗ್ರಾಹಕರು ಆರೋಗ್ಯಕರ ಆಹಾರ ಆಯ್ಕೆ ಮಾಡಿಕೊಳ್ಳಲು ನೆರವಾಗುವುದರ ಜತೆಗೆ, ಆಹಾರ ತಯಾರಕರು ಉತ್ಪನ್ನಗಳಲ್ಲಿನ ಅತಿಯಾದ ಸಕ್ಕರೆ, ಉಪ್ಪು ಮತ್ತು ಕೊಬ್ಬಿನಂಶವನ್ನು ಕಡಿಮೆ ಮಾಡಲು ಉತ್ತೇಜನ ನೀಡಬಹುದು ಎಂದು ಪೀಠ ಸೂಚಿಸಿತು.



ಗುರುವಾರ ಬೆಂಗಳೂರು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಸರ್ಕಾರದ 100 ದಿನಗಳ ಸಾಧನೆ ಹಿನ್ನೆಲೆಯಲ್ಲಿ ಆಯೋಜಿಸಿದ್ದ 'ದೃಢ ಕರ್ನಾಟಕದ ಸಂಕಲ್ಪ' ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಸಚಿವರು, ರೈತರು, ವಿದ್ಯಾರ್ಥಿಗಳು, ಪೌರಕಾರ್ಮಿಕರು, ಆಶಾ ಕಾರ್ಯಕರ್ತೆಯರು ಮತ್ತು ಮಹಿಳೆಯರೊಂದಿಗೆ ದೀಪ ಪ್ರಜ್ವಲಿಸುವ ಮೂಲಕ ಚಾಲನೆ ನೀಡಿದರು. ಇದೇ ಸಂದರ್ಭದಲ್ಲಿ ಸರ್ಕಾರದ 100 ದಿನಗಳ ಸಾಧನೆ ಬಿಂಬಿಸುವ ಪುಸ್ತಕ ಬಿಡುಗಡೆಗೊಳಿಸಲಾಯಿತು.

## ಇಡಿ ರೈಡ್, ಜಾರಕಿಹೊಳಿ ಹೇಳಿದ್ದೇನು?

● ವಿಕ್ರಮ ವಾಹಿನಿ । ಬೆಂಗಳೂರು

ವಿದೇಶಿ ಹೂಡಿಕೆ ಆರೋಪದ ಹಿನ್ನೆಲೆಯಲ್ಲಿ ಸಚಿವ ಸತೀಶ್ ಜಾರಕಿಹೊಳಿ ಅವರ ಬೆಂಗಳೂರು ಹಾಗೂ ಬೆಳಗಾವಿ ನಿವಾಸ, ಕಚೇರಿಗಳಲ್ಲಿ ಜಾರಿ ನಿರ್ದೇಶನಾಲಯ (ಇಡಿ) ನಡೆಸಿದ ಸತತ 37 ಗಂಟೆಗಳ ಪರಿಶೀಲನೆ ಬುಧವಾರ ಮುಕ್ತಾಯಗೊಂಡಿದೆ. ಪರಿಶೀಲನೆ ವೇಳೆ ಪತ್ತೆಯಾದ ನಗದು ಹಾಗೂ ಕೆಲವು ದಾಖಲೆಗಳನ್ನು ಇಡಿ ಅಧಿಕಾರಿಗಳು ಕೊಂಡೊಯ್ದಿದ್ದಾರೆ.

ಪರಿಶೀಲನೆ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಸತೀಶ್ ಜಾರಕಿಹೊಳಿ, ಮನೆಯಲ್ಲಿ ಪತ್ತೆಯಾದ ನಗದು ನಮ್ಮದೇ ಎಂದು ಅಧಿಕಾರಿಗಳಿಗೆ ತಿಳಿಸಿದ್ದು, ಅದಕ್ಕೆ ಸಂಬಂಧಿಸಿದ ದಾಖಲೆಗಳನ್ನು ನೀಡುವುದಾಗಿ ಹೇಳಿದರು. ವಿದೇಶಿ ಹೂಡಿಕೆ ಕುರಿತು ವಿದೇಶಿ ವಿನಿಮಯ ನಿರ್ವಹಣಾ ಕಾಯ್ದೆ (ಎಫ್‌ಇಎಂಎ) ಅಡಿ ಪರಿಶೀಲನೆ ನಡೆಸಲಾಗಿದೆ. ಅಧಿಕಾರಿಗಳು ವಿಚಾರಣೆಗೆ ಕರೆದರೆ ಹಾಜರಾಗಿ ಅಗತ್ಯ ಮಾಹಿತಿ ನೀಡುವುದಾಗಿ ತಿಳಿಸಿದರು.

ಇಡಿ ಪರಿಶೀಲನೆಯ ಹಿಂದೆ ರಾಜಕೀಯ ಕಾರಣವಿರಬಹುದು ಎಂಬ ಅನುಮಾನವಿದೆ. ಕಾಂಗ್ರೆಸ್ ನಾಯಕರನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಲಾಗುತ್ತಿದೆ ಎಂದು ಆರೋಪಿಸಿದ ಅವರು, ತನಿಖೆ ನ್ಯಾಯಯುತವಾಗಿ ನಡೆಯಲಿದೆ ಎಂಬ ವಿಶ್ವಾಸವಿದೆ ಎಂದರು. ಸಿಕ್ಕ ನಗದನ್ನು ಕಾನೂನುಬದ್ಧವಾಗಿ ತಾವು ಕ್ಲೈಮ್ ಮಾಡಿಕೊಳ್ಳುವುದಾಗಿ ಸ್ಪಷ್ಟಪಡಿಸಿದರು.

# ಕಳಪೆ ಶೂ ವಿತರಣೆ: ಉಪಲೋಕಾಯುಕ್ತರ ಸುಮೊಟೊ ತನಿಖೆ

● ವಿಕ್ರಮ ವಾಹಿನಿ । ಬೆಂಗಳೂರು

ಸರ್ಕಾರಿ ಶಾಲಾ ಮಕ್ಕಳಿಗೆ ವಿತರಿಸಿರುವ ಉಚಿತ ಶೂಗಳು ಕಳಪೆಯಾಗಿದ್ದು, ಕೆಲವೇ ದಿನಗಳಲ್ಲಿ ಹರಿದುಹೋಗಿವೆ ಎಂಬ ಮಾಧ್ಯಮ ವರದಿಗಳ ಹಿನ್ನೆಲೆಯಲ್ಲಿ ಉಪಲೋಕಾಯುಕ್ತರು ಸ್ವಯಂಪ್ರೇರಿತವಾಗಿ (ಸುಮೊಟೊ) ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸಲು ಆದೇಶಿಸಿದ್ದಾರೆ.

ಉಪಲೋಕಾಯುಕ್ತ–1 ಕೆ.ಎನ್. ಫಣೀಂದ್ರ ಅವರು ಪ್ರಕರಣ ದಾಖಲಿಸಿಕೊಳ್ಳುವಂತೆ ಸೂಚಿಸಿದ್ದು, ತಮ್ಮ ವ್ಯಾಪ್ತಿಗೆ ಬರುವ 15 ಜಿಲ್ಲೆಗಳ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳ ವಿರುದ್ಧ ಪ್ರಾಥಮಿಕ ತನಿಖೆ ನಡೆಸುವಂತೆ ನಿರ್ದೇಶಿಸಿದ್ದಾರೆ. ಆಯಾ ಜಿಲ್ಲೆಗಳ ಲೋಕಾಯುಕ್ತ ವಿಭಾಗದ ಪೊಲೀಸ್ ವರಿಷ್ಠಾಧಿಕಾರಿಗಳು ತನಿಖೆ ನಡೆಸಿ, ಸಂಬಂಧಿತ ದಾಖಲೆಗಳೊಂದಿಗೆ ಎರಡು ವಾರಗಳಲ್ಲಿ ಪ್ರಾಥಮಿಕ ವರದಿ ಸಲ್ಲಿಸುವಂತೆ ಸೂಚಿಸಲಾಗಿದೆ.

ಸರ್ಕಾರಿ ಶಾಲಾ ಮಕ್ಕಳಿಗೆ ಶೂ–ಸಾಕ್ಸ್



ಯೋಜನೆಯಡಿ ವಿತರಿಸಲಾದ ಶೂಗಳು ಒಂದೇ ವಾರದಲ್ಲಿ ಹರಿದುಹೋಗಿರುವುದು ಹಾಗೂ ಹೊಲಿಗೆ ಕಿತ್ತುಬಂದಿರುವ ಕುರಿತು ಮಾಧ್ಯಮಗಳಲ್ಲಿ ವರದಿಗಳು ಪ್ರಕಟವಾಗಿದ್ದವು. ಈ ಹಿನ್ನೆಲೆಯಲ್ಲಿ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ಉಪಲೋಕಾಯುಕ್ತರು ಸ್ವಯಂಪ್ರೇರಿತವಾಗಿ ವಿಚಾರಣೆ ಕೈಗೆತ್ತಿಕೊಂಡಿದ್ದಾರೆ.

ಇದೇ ವಿಚಾರವಾಗಿ ವಿರೋಧ ಪಕ್ಷದ ನಾಯಕ ಆರ್. ಅಶೋಕ ಅವರು ಸುದ್ದಿಗೋಷ್ಠಿ ನಡೆಸಿ ಸರ್ಕಾರದ ವಿರುದ್ಧ ಆರೋಪ ಮಾಡಿದ್ದರು.

ಬಡ ಹಾಗೂ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ಮಕ್ಕಳಿಗೆ ನೀಡುವ ಉಚಿತ ಶೂ–ಸಾಕ್ಸ್ ಯೋಜನೆಯಲ್ಲೂ ಕಮಿಷನ್ ಪಡೆದಿರುವ ಆರೋಪ ಕೇಳಿಬಂದಿದ್ದು, ರಾಯಚೂರು, ತುಮಕೂರು, ಬಳ್ಳಾರಿ ಸೇರಿದಂತೆ ಹಲವು ಜಿಲ್ಲೆಗಳಲ್ಲಿ ವಿತರಿಸಿದ ಶೂಗಳು ಕೆಲವೇ ದಿನಗಳಲ್ಲಿ ಹಾಳಾಗಿವೆ ಎಂದು ಆರೋಪಿಸಿದ್ದರು. ಕಳಪೆ ಶೂ ಪೂರೈಸಿದ ಗುತ್ತಿಗೆದಾರರನ್ನು ಕಪ್ಪುಪಟ್ಟಿಗೆ ಸೇರಿಸುವಂತೆಯೂ ಆಗ್ರಹಿಸಿದ್ದರು.

ಕಳಪೆ ಗುಣಮಟ್ಟದ ಶೂಗಳ ಪೂರೈಕೆ, ವಿತರಣೆ ಹಾಗೂ ಇದಕ್ಕೆ ಸಂಬಂಧಿಸಿದ ಆಡಳಿತಾತ್ಮಕ ಲೋಪಗಳ ಕುರಿತು ತನಿಖೆ ನಡೆಸಲಾಗುವುದು. ಈ ಸಂಬಂಧ ಜಿಲ್ಲಾ ಉಸ್ತುವಾರಿ ಸಚಿವರು, ಶಿಕ್ಷಣ ಸಚಿವರು ಹಾಗೂ ಸಂಬಂಧಪಟ್ಟ ಅಧಿಕಾರಿಗಳಿಗೆ ಅಗತ್ಯ ನಿರ್ದೇಶನ ನೀಡುವ ಬಗ್ಗೆಯೂ ಕ್ರಮ ಕೈಗೊಳ್ಳಲಾಗುವುದು ಎಂದು ಉಪಲೋಕಾಯುಕ್ತರ ಕಚೇರಿ ತಿಳಿಸಿದೆ.

## ಅನುಮತಿಯಿಲ್ಲದೆ 8 ವರ್ಷಗಳಿಂದ ಪಿಜಿ ಕೋರ್ಸ್!

● ವಿಕ್ರಮ ವಾಹಿನಿ । ಗೊಟಗೋಡಿ (ಹಾವೇರಿ)

ಸರ್ಕಾರ ಹಾಗೂ ರಾಜ್ಯಪಾಲರ ಪೂರ್ವಾನುಮೋದನೆ ಪಡೆಯದೆ ಕಳೆದ 8 ವರ್ಷಗಳಿಂದ ನಡೆಸಿಕೊಂಡು ಬಂದಿರುವ ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಎಂಟು ಸ್ನಾತಕೋತ್ತರ (ಪಿಜಿ) ಕೋರ್ಸ್‌ಗಳ ಪ್ರವೇಶಾತಿಯನ್ನು ತಕ್ಷಣದಿಂದಲೇ ಸ್ಥಗಿತಗೊಳಿಸುವಂತೆ ಉನ್ನತ ಶಿಕ್ಷಣ ಇಲಾಖೆ ಆದೇಶಿಸಿದೆ. ಇದರಿಂದ ಈ ಕೋರ್ಸ್‌ಗಳಲ್ಲಿ ವ್ಯಾಸಂಗ ಮಾಡುತ್ತಿರುವ ಹಾಗೂ ಈಗಾಗಲೇ ಪದವಿ ಪಡೆದಿರುವ ನೂರಾರು ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯ ಮತ್ತು ಪದವಿ ಪ್ರಮಾಣಪತ್ರಗಳ ಸಿಂಧುತ್ವದ ಬಗ್ಗೆ ಆತಂಕ ಮೂಡಿದೆ.

ವಿಶ್ವವಿದ್ಯಾಲಯವು ಯಾವುದೇ ಅಧಿಕೃತ ಅನುಮೋದನೆ ಪಡೆಯದೆ 2018–19ನೇ ಸಾಲಿನಿಂದಲೇ ಈ ಕೋರ್ಸ್‌ಗಳನ್ನು ನಡೆಸಿಕೊಂಡು ಬಂದಿರುವುದು ಉನ್ನತ ಶಿಕ್ಷಣ ಇಲಾಖೆ ಪರಿಶೀಲನೆ ವೇಳೆ ಬೆಳಕಿಗೆ ಬಂದಿದೆ. ವಿಶ್ವವಿದ್ಯಾಲಯದ ಆಡಳಿತ ಮಂಡಳಿಯು ಈ ಕೋರ್ಸ್‌ಗಳಿಗೆ ಘಟನೋತ್ತರ ಅನುಮೋದನೆ ನೀಡುವಂತೆ ಇತ್ತೀಚೆಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿತ್ತು. ಪ್ರಸ್ತಾವನೆಯನ್ನು ಪರಿಶೀಲಿಸಿದ ಇಲಾಖೆಗೆ, ಅಗತ್ಯ ಪೂರ್ವಾನುಮತಿ ಇಲ್ಲದೆ ಕೋರ್ಸ್‌ಗಳನ್ನು ಆರಂಭಿಸಿರುವುದು ಗೊತ್ತಾಗಿದೆ.

**ಯಾವೆಲ್ಲ ಕೋರ್ಸ್‌ಗಳಿಗೆ ತಡೆ?:** ಪ್ರವೇಶಾತಿ ಸ್ಥಗಿತಗೊಳಿಸಲಾಗಿರುವ ಎಂಟು ಕೋರ್ಸ್‌ಗಳಲ್ಲಿ ಎಂ.ಎ. ಕನ್ನಡ ಮತ್ತು ಜಾನಪದ, ಎಂ.ಎ. ಇಂಗ್ಲಿಷ್, ಎಂ.ಎ. ಅರ್ಥಶಾಸ್ತ್ರ, ಎಂ.ಎ. ಸಮಾಜಶಾಸ್ತ್ರ, ಮಾಸ್ಟರ್ ಆಫ್ ಸೋಷಿಯಲ್ ವರ್ಕ್ (ಎಂಎಸ್‌ಡಬ್ಲ್ಯು), ಮಾಸ್ಟರ್ ಆಫ್ ಪರ್ಫಾರ್ಮಿಂಗ್ ಆರ್ಟ್ಸ್ (ಎಂಪಿಎ), ಮಾಸ್ಟರ್ ಆಫ್ ವಿಷ್ಯುಯಲ್ ಆರ್ಟ್ಸ್ ಹಾಗೂ ಎಂ.ಎ. ಮಹಿಳಾ ಅಧ್ಯಯನ ಸೇರಿವೆ.

**ಅಧಿನಿಯಮ ಉಲ್ಲಂಘನೆ:** ಕರ್ನಾಟಕ ಜಾನಪದ ವಿಶ್ವವಿದ್ಯಾಲಯ ಅಧಿನಿಯಮದ ನಿಯಮಗಳನ್ನು ಉಲ್ಲಂಘಿಸಿ ಈ ಕೋರ್ಸ್‌ಗಳನ್ನು ಆರಂಭಿಸಲಾಗಿದೆ ಎಂದು ಉನ್ನತ ಶಿಕ್ಷಣ ಇಲಾಖೆ ತಿಳಿಸಿದೆ. ವಿಶ್ವವಿದ್ಯಾಲಯದ ಅಧಿನಿಯಮದ ಪ್ರಕರಣ 43(2)ರ ಅನ್ವಯ ಅಗತ್ಯ ಅನುಮೋದನೆ ಪಡೆಯಬೇಕಿದ್ದರೂ, ಅದನ್ನು ಪಾಲಿಸದೆ ಕೋರ್ಸ್‌ಗಳನ್ನು ನಡೆಸಲಾಗಿದೆ ಎಂದು ಇಲಾಖೆ ಪರಿಶೀಲನೆಯಲ್ಲಿ ಕಂಡುಬಂದಿದೆ.

ಎಂಟು ವರ್ಷಗಳ ಅವಧಿಯಲ್ಲಿ ಈ ಕೋರ್ಸ್‌ಗಳಲ್ಲಿ ನೂರಾರು ವಿದ್ಯಾರ್ಥಿಗಳು ಪ್ರವೇಶ ಪಡೆದು ವ್ಯಾಸಂಗ ಮಾಡಿದ್ದಾರೆ. ಕೆಲವರು ಈಗಾಗಲೇ ಪದವಿ ಪೂರ್ಣಗೊಳಿಸಿ ಪ್ರಮಾಣಪತ್ರಗಳನ್ನೂ ಪಡೆದಿದ್ದಾರೆ. ಇದೀಗ ಕೋರ್ಸ್‌ಗಳೇ ನಿಯಮಬಾಹಿರವಾಗಿ ನಡೆದಿರುವುದು ಬೆಳಕಿಗೆ ಬಂದಿರುವುದರಿಂದ, ಅವರ ಪದವಿಗಳ ಮಾನ್ಯತೆ ಹಾಗೂ ಮುಂದಿನ ಉನ್ನತ ಶಿಕ್ಷಣ ಮತ್ತು ಉದ್ಯೋಗಾವಕಾಶಗಳ ಕುರಿತು ಪ್ರಶ್ನೆಗಳು ಎದುರಾಗಿವೆ.

ಕೋರ್ಸ್‌ಗಳ ಪ್ರವೇಶಾತಿ ಸ್ಥಗಿತಗೊಂಡಿರುವ ಹಿನ್ನೆಲೆಯಲ್ಲಿ, ಈ ವಿಭಾಗಗಳಲ್ಲಿ ಹಲವು ವರ್ಷಗಳಿಂದ ಕಾರ್ಯನಿರ್ವಹಿಸುತ್ತಿರುವ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಯಲ್ಲೂ ಆತಂಕ ಮನೆ ಮಾಡಿದೆ. ಎಂಟು ಕೋರ್ಸ್‌ಗಳಿಗೆ ಸಂಬಂಧಿಸಿದಂತೆ 20ಕ್ಕೂ ಹೆಚ್ಚು ನೌಕರರು ಉದ್ಯೋಗ ಕಳೆದುಕೊಳ್ಳುವ ಭೀತಿ ಎದುರಿಸುತ್ತಿದ್ದಾರೆ ಎನ್ನಲಾಗಿದೆ. 2ನೇ ಪುಟಕ್ಕೆ...

# ಮಾವನ ಕಟ್ಟುನಿಟ್ಟಿಗೆ ಬೇಸತ್ತು ಸೊಸೆಯಿಂದಲೇ ಕೊಲೆ ಸುಪಾರಿ!

**ಪಾರ್ಟಿ, ಖರ್ಚು ಹಾಗೂ ತಡರಾತ್ರಿ ಮನೆಗೆ ಬರುವುದಕ್ಕೆ ಮಾವನ ನಿರ್ಬಂಧದಿಂದ ಬೇಸತ್ತ ಸೊಸೆ, ಮಾಜಿ ಉದ್ಯೋಗಿ ಹಾಗೂ ಮತ್ತೊಬ್ಬನ ನೆರವಿನಿಂದ ಕೊಲೆ ಸಂಚು ರೂಪಿಸಿದ ಆರೋಪ ಕೇಳಿಬಂದಿದೆ. ಕಾನ್ಪುರದ ಉದ್ಯಮಿ ವಿನೀತ್ ಮಿನೋಚಾ ಅವರನ್ನು 26 ಬಾರಿ ಇರಿದು ಹತ್ಯೆ ಮಾಡಲಾಗಿದ್ದು, ಪ್ರಕರಣದಲ್ಲಿ ಸೊಸೆ ಸೇರಿ ಮೂವರನ್ನು ಪೊಲೀಸರು ಬಂಧಿಸಿದ್ದಾರೆ.**



● ವಿಕ್ರಮ ವಾಹಿನಿ । ಕಾನ್ಪುರ

ಪಾರ್ಟಿ ಮಾಡುವುದಕ್ಕೆ ನಿರ್ಬಂಧ, ಖರ್ಚಿಗೆ ಹಣದ ಮೇಲೆ ನಿಗಾ, ತಡರಾತ್ರಿ ಮನೆಗೆ ಬರುವುದಕ್ಕೆ ಆಕ್ಷೇಪ ಹಾಗೂ ಪ್ರತಿಯೊಂದು ಚಟುವಟಿಕೆಯ ಮೇಲೂ ಕಣ್ಗಾವಲು... ಮಾವನ ಈ ಕಟ್ಟುನಿಟ್ಟಿನ ನಿಯಮಗಳಿಂದ ಬೇಸತ್ತ ಸೊಸೆ, ಕೊನೆಗೆ ಅವರನ್ನೇ ಕೊಲೆ ಮಾಡಿಸಲು ಸುಪಾರಿ ನೀಡಿದ ಆರೋಪ ಕೇಳಿಬಂದಿದೆ.

ಉತ್ತರ ಪ್ರದೇಶದ ಕಾನ್ಪುರದ ಇಂದಿರಾ ನಗರ ಪ್ರದೇಶದಲ್ಲಿ ಉದ್ಯಮಿ ವಿನೀತ್ ಮಿನೋಚಾ (60) ಭೀಕರವಾಗಿ ಹತ್ಯೆಗೀಡಾದ ಪ್ರಕರಣವನ್ನು ಪೊಲೀಸರು ಭೇದಿಸಿದ್ದು, ಕೊಲೆ ಸಂಚಿನ ಪ್ರಮುಖ ಆರೋಪಿ ಅವರ ಸೊಸೆ ಶಾಲು ಮಿನೋಚಾ ಸೇರಿದಂತೆ ಮೂವರನ್ನು ಬಂಧಿಸಿದ್ದಾರೆ.

ವಿನೀತ್ ಮಿನೋಚಾ ಅವರು ತಮ್ಮ ನಿವಾಸದಲ್ಲಿ ಶವವಾಗಿ ಪತ್ತೆಯಾಗಿದ್ದರು. ಅವರ ಕತ್ತು ಸೀಳಲಾಗಿದ್ದು, ದೇಹದ ವಿವಿಧ ಭಾಗಗಳಿಗೆ 26 ಬಾರಿ ಇರಿದು ಭೀಕರವಾಗಿ ಹತ್ಯೆ ಮಾಡಲಾಗಿತ್ತು. ಪ್ರಕರಣವನ್ನು ದಾಖಲಿಸಿಕೊಂಡ ಪೊಲೀಸರು ತನಿಖೆ ಆರಂಭಿಸಿದಾಗ, ಮನೆಯಲ್ಲಿ ಯಾವುದೇ ಬೆಲೆಬಾಳುವ ವಸ್ತುಗಳು ಕಳವಾಗದಿರುವುದು ಪ್ರಮುಖ ಸುಳಿವಾಗಿ ಪರಿಣಮಿಸಿತು. ಹೀಗಾಗಿ ಇದು ದರೋಡೆಗಾಗಿ ನಡೆದ ಕೊಲೆ ಅಲ್ಲ ಎಂಬ ಅನುಮಾನ ಪೊಲೀಸರಿಗೆ ಮೂಡಿತ್ತು.

ಕೊಲೆ ನಡೆದ ನಾಲ್ಕೈದು ದಿನಗಳಲ್ಲೇ ತನಿಖೆಯನ್ನು ಚುರುಕುಗೊಳಿಸಿದ ಪೊಲೀಸರು, ಪ್ರಕರಣದ ಹಿಂದೆ ಕುಟುಂಬದವರಿಗೆ ಪರಿಚಿತರಾಗಿದ್ದವರ ಕೈವಾಡ ಇರುವುದನ್ನು ಪತ್ತೆಹಚ್ಚಿದ್ದಾರೆ.

ಅಂತಿಮವಾಗಿ ಉದ್ಯಮಿಯ ಸೊಸೆ ಶಾಲು ಮಿನೋಚಾ, ವಿನೀತ್ ಅವರ ಬಳಿ ಹಿಂದೆ ಕೆಲಸ ಮಾಡುತ್ತಿದ್ದ ಮಾಜಿ ಉದ್ಯೋಗಿ ವಿಶಾಲ್ ಹಾಗೂ ಶಾಲುಗೆ ಪರಿಚಯವಿದ್ದ ನಿರುದ್ಯೋಗಿ ರಾಜ್ ಕಿಶೋರ್ (30) ಅವರನ್ನು ಬಂಧಿಸಲಾಗಿದೆ.

ಪೊಲೀಸರ ವಿಚಾರಣೆ ವೇಳೆ ಶಾಲು, ಮಾವ ವಿನೀತ್ ಮಿನೋಚಾ ಅವರ ಕಟ್ಟುನಿಟ್ಟಿನ ವರ್ತನೆಯಿಂದ ತಾನು ಬೇಸತ್ತಿದ್ದೆ ಎಂದು ಹೇಳಿಕೊಂಡಿದ್ದಾಳೆ ಎನ್ನಲಾಗಿದೆ.

ಮಗ ಮತ್ತು ಸೊಸೆಯ ಖರ್ಚಿನ ಮೇಲೆ ವಿನೀತ್ ನಿರಂತರವಾಗಿ ನಿಗಾ ಇಡುತ್ತಿದ್ದರು. ಅಗತ್ಯವಿಲ್ಲದ ಖರ್ಚುಗಳಿಗೆ ನಿರ್ಬಂಧ ವಿಧಿಸುತ್ತಿದ್ದರು. ಸಣ್ಣಪುಟ್ಟ ಖರ್ಚಿಗೂ ಅವರ ಅನುಮತಿ ಪಡೆಯಬೇಕಾಗಿತ್ತು ಎಂದು ಶಾಲು ವಿಚಾರಣೆ ವೇಳೆ ತಿಳಿಸಿದ್ದಾಳೆ ಎಂದು ಪೊಲೀಸರು ಹೇಳಿದ್ದಾರೆ.

ತಡರಾತ್ರಿ ಮನೆಗೆ ಬರುವುದಕ್ಕೂ ವಿನೀತ್ ಆಕ್ಷೇಪ ವ್ಯಕ್ತಪಡಿಸುತ್ತಿದ್ದರು. ಕುಟುಂಬದ ಸದಸ್ಯರ ಚಟುವಟಿಕೆಗಳ ಮೇಲೂ ಅವರು ಸೂಕ್ಷ್ಮವಾಗಿ ಗಮನಹರಿಸುತ್ತಿದ್ದರು ಎನ್ನಲಾಗಿದೆ. ಇದರಿಂದ ಸೊಸೆಗೆ ಅಸಮಾಧಾನ ಉಂಟಾಗಿತ್ತು ಎಂದು ತನಿಖಾಧಿಕಾರಿಗಳು ತಿಳಿಸಿದ್ದಾರೆ.

ವಿನೀತ್ ಮಿನೋಚಾ ಅವರು ಸಾವಿಗೂ ಸುಮಾರು 15ರಿಂದ 20 ದಿನಗಳ ಮೊದಲು ತಮ್ಮ ಅಪಾರ್ಟ್‌ಮೆಂಟ್‌ನಲ್ಲಿ ಸಿಸಿಟಿವಿ ಕ್ಯಾಮೆರಾಗಳನ್ನು ಅಳವಡಿಸಿದ್ದರು. ಮನೆಯಲ್ಲಿನ ತಮ್ಮ ಖಾಸಗಿತನಕ್ಕೆ ಇದು ಧಕ್ಕೆ ಉಂಟುಮಾಡುತ್ತಿದೆ ಎಂದು ಶಾಲು ಆಕ್ಷೇಪ ವ್ಯಕ್ತಪಡಿಸಿದ್ದರೂ, ವಿನೀತ್ ಅದನ್ನು ಪರಿಗಣಿಸಿರಲಿಲ್ಲ ಎನ್ನಲಾಗಿದೆ. ಈ ಬೆಳವಣಿಗೆಯೂ ಶಾಲುವಿನ ಅಸಮಾಧಾನವನ್ನು ಮತ್ತಷ್ಟು ಹೆಚ್ಚಿಸಿತ್ತು ಎಂದು ಪೊಲೀಸರು ಶಂಕಿಸಿದ್ದಾರೆ.

ವಿನೀತ್ ಅವರ ಬಳಿ ಹಿಂದೆ ಕೆಲಸ ಮಾಡುತ್ತಿದ್ದ ವಿಶಾಲ್ ಅವರಿಗೆ ಮನೆಯ ವ್ಯವಸ್ಥೆ ಮತ್ತು ಉದ್ಯಮಿಯ ದಿನಚರಿ ಬಗ್ಗೆ ಮಾಹಿತಿ ಇತ್ತು ಎನ್ನಲಾಗಿದೆ. ಈ ಹಿನ್ನೆಲೆಯಲ್ಲಿ ಶಾಲು, ವಿಶಾಲ್ ಹಾಗೂ ರಾಜ್ ಕಿಶೋರ್ ಅವರ ನೆರವಿನಿಂದ ಕೊಲೆಯ ಸಂಚು ರೂಪಿಸಿದ್ದಾಳೆ ಎಂದು ಪೊಲೀಸರು ಆರೋಪಿಸಿದ್ದಾರೆ. 2ನೇ ಪುಟಕ್ಕೆ...

www.VIKRAMAVAHINI.com
ಕನ್ನಡ ದಿನಪತ್ರಿಕೆ
PRGI NO: KARKAN/2018/78481
ವಿಕ್ರಮ ವಾಹಿನಿ

# ಬಲಿಷ್ಠ ಕರ್ನಾಟಕಕ್ಕೆ ನವ ಸಂಕಲ್ಪ: ಡಿ.ಕೆ. ಶಿವಕುಮಾರ್

## ಆರೋಗ್ಯ, ಶಿಕ್ಷಣ, ಜಲ ಭದ್ರತೆ, ಹೂಡಿಕೆ, ಉದ್ಯೋಗಕ್ಕೆ ಆದ್ಯತೆ

● ವಿಕ್ರಮ ವಾಹಿನಿ | ಬೆಂಗಳೂರು

ಆರೋಗ್ಯ, ಶಿಕ್ಷಣ, ಜಲ ಭದ್ರತೆ, ಹೂಡಿಕೆ ಮತ್ತು ಆರ್ಥಿಕ ಬಲ, ಬೆಂಗಳೂರು ಅಭಿವೃದ್ಧಿ, ಪ್ರಾದೇಶಿಕ ಸಮತೋಲನ, ಸಾಮಾಜಿಕ ನ್ಯಾಯ, ಬಂಡವಾಳ ಹೂಡಿಕೆ ಹಾಗೂ ಉದ್ಯೋಗಕ್ಕೆ ಆದ್ಯತೆ ನೀಡಿ ಬಲಿಷ್ಠ ಕರ್ನಾಟಕ ನಿರ್ಮಿಸಲು ನವ ಸಂಕಲ್ಪ ಮಾಡಲಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು.

ಮುಖ್ಯಮಂತ್ರಿಯಾಗಿ ಜವಾಬ್ದಾರಿ ವಹಿಸಿಕೊಂಡು 100 ದಿನಗಳು ಪೂರ್ಣಗೊಂಡ ಹಿನ್ನೆಲೆಯಲ್ಲಿ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಗುರುವಾರ ನಡೆದ 'ದೃಢ ಕರ್ನಾಟಕದ ಸಂಕಲ್ಪ: ಶತಕದ ಪಥ, ಪ್ರಗತಿಯ ರಥ' ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸರ್ಕಾರದ ಮುಂದಿನ ಯೋಜನೆಗಳು ಹಾಗೂ ಕಳೆದ ಮೂರು ವರ್ಷಗಳ ಸಾಧನೆಗಳನ್ನು ವಿವರಿಸಿದರು.

ಬಸವಣ್ಣನವರ ತತ್ವದಂತೆ ನುಡಿದಂತೆ ನಡೆಯುವ ಮೂಲಕ ಜನರಿಗೆ ನೀಡಿದ ಭರವಸೆಗಳನ್ನು ಈಡೇರಿಸಲಾಗುತ್ತಿದೆ. ಇದು ತಮ್ಮೊಬ್ಬರ ಸರ್ಕಾರವಲ್ಲ, ರಾಜ್ಯದ ಏಳು ಕೋಟಿ ಜನರ ಸರ್ಕಾರ. ಎಲ್ಲ ವರ್ಗದ ಜನರ ಬದುಕಿನಲ್ಲಿ ಬದಲಾವಣೆ ತರಲು ಸರ್ಕಾರ ಬದ್ಧವಾಗಿದೆ. ಎಲ್ಲ ಶಾಸಕರು ಹಾಗೂ ಸಂಸದರು ಒಟ್ಟಾಗಿ ರಾಜ್ಯದ ಪ್ರಗತಿಗೆ ದುಡಿಯಬೇಕು. ರಾಗ, ದ್ವೇಷ, ಅಸೂಯೆ ಇಲ್ಲದೆ 'ಸರ್ವರಿಗೂ ಸಮಪಾಲು, ಸಮಬಾಳು' ತತ್ವದಡಿ ಕರ್ನಾಟಕದ ಅಭಿವೃದ್ಧಿಯ ರಥ ಮುನ್ನಡೆಸಲಾಗುವುದು ಎಂದರು.

ಆರೋಗ್ಯ ಕ್ಷೇತ್ರದಲ್ಲಿ 'ಗೃಹ ಆರೋಗ್ಯ' ಯೋಜನೆಯಡಿ 88 ಲಕ್ಷ ಮಂದಿಗೆ ಮನೆಗಳಲ್ಲೇ ಆರೋಗ್ಯ ತಪಾಸಣೆ ನಡೆಸಲಾಗಿದೆ. 'ಹೃದಯ ಜ್ಯೋತಿ' ಯೋಜನೆಯಡಿ 21,659 ಹೃದಯಾಘಾತ ಪ್ರಕರಣಗಳನ್ನು ಮುಂಚಿತವಾಗಿ ಪತ್ತೆಹಚ್ಚಲಾಗಿದೆ. ಶಾಲಾ ಮಕ್ಕಳ ಪೌಷ್ಟಿಕತೆ ಹೆಚ್ಚಿಸಲು ವಾರದಲ್ಲಿ ಆರು ದಿನ ಮೊಟ್ಟೆ ವಿತರಿಸಲಾಗುತ್ತಿದೆ ಎಂದು ಹೇಳಿದರು.

ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ರೂ 2.53 ಲಕ್ಷ ಕೋಟಿ ಬಂಡವಾಳ ಹೂಡಿಕೆಯಾಗಿದ್ದು, ವಿದೇಶಿ ಬಂಡವಾಳ ಹೂಡಿಕೆ ಆಕರ್ಷಣೆಯಲ್ಲಿ ಕರ್ನಾಟಕ ದೇಶದಲ್ಲಿ ಎರಡನೇ ಸ್ಥಾನ ಪಡೆದಿದೆ. ಇದರಿಂದ 6 ಲಕ್ಷಕ್ಕೂ ಹೆಚ್ಚು ಉದ್ಯೋಗ ಸೃಷ್ಟಿಯಾಗುವ ಸಾಧ್ಯತೆಯಿದೆ. ರಾಜ್ಯದ ಜಿಡಿಪಿ ರೂ 32.81 ಲಕ್ಷ ಕೋಟಿಗೆ ಏರಿಕೆಯಾಗಿದ್ದು, ಶೇ.8.1ರಷ್ಟು ಪ್ರಗತಿ ಸಾಧಿಸಿದೆ ಎಂದು ಮುಖ್ಯಮಂತ್ರಿ ತಿಳಿಸಿದರು.

### ಭೂರಹಿತರಿಗೆ 5 ಲಕ್ಷ ನಿವೇಶನ:

ಗ್ರಾಮೀಣ ಭಾಗದ ಮನೆರಹಿತ ಪರಿಶಿಷ್ಟ ಜಾತಿ ಹಾಗೂ ಪಂಗಡದವರಿಗೆ ಉಚಿತ ಮನೆ ಮತ್ತು ನಿವೇಶನ ನೀಡಲು ಸರ್ಕಾರ ತೀರ್ಮಾನಿಸಿದೆ. ನಿವೇಶನ ರಹಿತ ಕುಟುಂಬಗಳಿಗೆ 5 ಲಕ್ಷ ನಿವೇಶನ ಹಂಚಿಕೆ, ಪರಿಶಿಷ್ಟರ ವಸತಿ ಪ್ರದೇಶಗಳಲ್ಲಿ ರಸ್ತೆ, ಚರಂಡಿ ಹಾಗೂ ಬೀದಿ ದೀಪಗಳ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗುವುದು. ಪರಿಶಿಷ್ಟ ಜಾತಿ, ಪಂಗಡ, ಹಿಂದುಳಿದ ಹಾಗೂ ಅಲ್ಪಸಂಖ್ಯಾತ ಸಮುದಾಯದ 50 ಸಾವಿರ ಯುವಕರಿಗೆ ಎರಡು ವರ್ಷಗಳಲ್ಲಿ ಸ್ವಯಂ ಉದ್ಯೋಗ ಕಲ್ಪಿಸುವ ಗುರಿ ಹೊಂದಲಾಗಿದೆ ಎಂದರು.

### ರೈತರಿಗೆ 'ನೇಗಿಲ ಯೋಗಿ':

ರೈತರ ನೆರವಿಗಾಗಿ 'ಮುಖ್ಯಮಂತ್ರಿ ನೇಗಿಲ ಯೋಗಿ' ಯೋಜನೆ ಜಾರಿಗೆ ತರಲಾಗಿದ್ದು, ಮೂರು ಎಕರೆಗಿಂತ ಕಡಿಮೆ ಭೂಮಿ ಹೊಂದಿರುವ ರೈತರಿಗೆ ಸಬ್ಸಿಡಿ ದರದಲ್ಲಿ ಉಳುಮೆ ಸೌಲಭ್ಯ ಒದಗಿಸಲಾಗುವುದು. ನಗರದ ವಿದ್ಯಾರ್ಥಿಗಳಿಗೆ ಗ್ರಾಮೀಣ ಬದುಕಿನ ಪರಿಚಯ ಮಾಡಿಕೊಡಲು 'ಗ್ರಾಮಾನುಭವ' ಯೋಜನೆ ಜಾರಿಗೊಳಿಸಲಾಗಿದೆ. ರಸ್ತೆ ಬದಿಯಲ್ಲಿ ತೇಗದ ಸಸಿಗಳನ್ನು ನೆಟ್ಟು ಅವುಗಳ ನಿರ್ವಹಣೆಯ ಜವಾಬ್ದಾರಿಯನ್ನು ರೈತರಿಗೆ ನೀಡಲಾಗುವುದು.

### ಯುವಕರಿಗೆ ಉದ್ಯೋಗದ ಸೇತು:

ಯುವಕರ ಸಬಲೀಕರಣ ಹಾಗೂ ನಾಯಕತ್ವ ಬೆಳೆಸುವ ಉದ್ದೇಶದಿಂದ ಪ್ರತಿ ಪಂಚಾಯಿತಿಯಲ್ಲಿ 'ಭಾರತ ಜೋಡೋ ಯುವ ಸಂಘ' ಸ್ಥಾಪಿಸಲು ಸರ್ಕಾರ ಮುಂದಾಗಿದೆ.
ರಾಜ್ಯದಲ್ಲಿ 10 ಸಾವಿರ ಸಂಘಗಳನ್ನು ಸ್ಥಾಪಿಸಿ, ಪ್ರತಿಯೊಂದಕ್ಕೂ ವಾರ್ಷಿಕ ರೂ 10 ಲಕ್ಷ ಅನುದಾನ ನೀಡಲು ರೂ 1,000 ಕೋಟಿ ಮೀಸಲಿಡಲಾಗಿದೆ. ಕನಿಷ್ಠ 25 ಲಕ್ಷ ಯುವಕರು ನೋಂದಾಯಿಸಿಕೊಳ್ಳುವ ನಿರೀಕ್ಷೆಯಿದೆ.
'ಉದ್ಯೋಗ ನಿಧಿ' ಯೋಜನೆಯಡಿ ಬೆಂಗಳೂರಿನ ಹೊರಗಿನ ಗ್ರಾಮೀಣ ಪ್ರದೇಶಗಳಲ್ಲಿ ಖಾಸಗಿ ಉದ್ಯೋಗ ಸೃಷ್ಟಿಸುವವರಿಗೆ ಪ್ರತಿ ಉದ್ಯೋಗಕ್ಕೆ ರೂ 2,500 ಪ್ರೋತ್ಸಾಹಧನ ನೀಡಲಾಗುವುದು.
'ಯುವ ಉದ್ಯೋಗ ಸೇತು' ಮೂಲಕ ಖಾಸಗಿ ವಲಯದ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಉದ್ಯೋಗ ವಿನಿಮಯ ಕೇಂದ್ರ ಸ್ಥಾಪಿಸಿ, ಕೈಗಾರಿಕೆಗಳಿಗೆ ಅಗತ್ಯವಿರುವ ಕೌಶಲ್ಯಕ್ಕೆ ಅನುಗುಣವಾಗಿ ಯುವಕರಿಗೆ ತರಬೇತಿ ನೀಡಲಾಗುವುದು ಎಂದು ತಿಳಿಸಿದರು.

### ರೂ 43,214 ಕೋಟಿ ಹೂಡಿಕೆಗೆ ಅನುಮೋದನೆ:

ಕೈಗಾರಿಕಾ ಅಭಿವೃದ್ಧಿಗೆ ವೇಗದ ಅನುಮೋದನೆಗೆ ಆದ್ಯತೆ ನೀಡಲಾಗಿದ್ದು, 100 ದಿನಗಳಲ್ಲಿ ರೂ 43,214 ಕೋಟಿ ಹೂಡಿಕೆಗೆ ಅನುಮೋದನೆ ನೀಡಲಾಗಿದೆ. ಹಿಂದುಳಿದ ತಾಲ್ಲೂಕುಗಳಲ್ಲಿ ಹೂಡಿಕೆಗೆ ವೇಗವರ್ಧಕ ಪ್ಯಾಕೇಜ್, ಕೈಗಾರಿಕಾ ಪ್ರದೇಶಗಳ ಬಳಿ ಕಾರ್ಮಿಕರಿಗಾಗಿ ಶ್ರಮಿಕ ನಿವಾಸ ಯೋಜನೆ, ಜವಳಿ ನೀತಿ ಹಾಗೂ ಬಳ್ಳಾರಿ ಜೀನ್ಸ್ ಪಾರ್ಕ್ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲಾಗುತ್ತಿದೆ. ದೊಡ್ಡಬಳ್ಳಾಪುರದಲ್ಲಿ 4 ಸಾವಿರ ಎಕರೆ ಪ್ರದೇಶದಲ್ಲಿ ರೂ 20 ಸಾವಿರ ಕೋಟಿ ವೆಚ್ಚದ ಉತ್ಪಾದನಾ ಕ್ಲಸ್ಟರ್ ನಿರ್ಮಾಣಕ್ಕೆ ಅನುಮತಿ ನೀಡಲಾಗಿದೆ. ವಿದೇಶಿ ಹೂಡಿಕೆದಾರರು ಹಾಗೂ ಅನಿವಾಸಿ ಭಾರತೀಯರನ್ನು ಆಕರ್ಷಿಸಲು ಪ್ರತ್ಯೇಕ ಸಚಿವಾಲಯ ಸ್ಥಾಪಿಸಲಾಗುವುದು ಎಂದರು.

### ಗ್ರಾಮೀಣ ವಿದ್ಯಾರ್ಥಿಗಳಿಗೆ 7.5% ಮೀಸಲಾತಿ:

ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣದಲ್ಲಿ 7.5% ಮೀಸಲಾತಿ ನೀಡಲು ಸರ್ಕಾರ ಮುಂದಾಗಿದೆ. ಗ್ರಾಮೀಣ ಪ್ರದೇಶದ ಪಂಚಾಯಿತಿ ಮಟ್ಟದಲ್ಲಿ 1,000 ಸರ್ಕಾರಿ ಶಾಲೆಗಳನ್ನು ಕೆಪಿಎಸ್ ಶಾಲೆಗಳಾಗಿ ಅಭಿವೃದ್ಧಿಪಡಿಸಲಾಗುವುದು. ವಿಶ್ವ ಬ್ಯಾಂಕ್ ನೆರವಿನೊಂದಿಗೆ ಈ ವರ್ಷ ರಾಜ್ಯದಲ್ಲಿ 1,000 ಶಾಲೆಗಳ ನಿರ್ಮಾಣಕ್ಕೂ ಕ್ರಮ ಕೈಗೊಳ್ಳಲಾಗುವುದು ಎಂದರು.

### ಎಐ ಶಿಕ್ಷಣಕ್ಕೆ ಒತ್ತು:

ರಾಜ್ಯ ಎಐ ಯುಗಕ್ಕೆ ಕಾಲಿಡುತ್ತಿರುವ ಹಿನ್ನೆಲೆಯಲ್ಲಿ ಆಧುನಿಕ ತಂತ್ರಜ್ಞಾನಕ್ಕೆ ಅನುಗುಣವಾಗಿ ಯುವ ಪೀಳಿಗೆಯನ್ನು ಸಿದ್ಧಪಡಿಸಲು ದೇಶದಲ್ಲೇ ಮೊದಲ ಸರ್ಕಾರಿ ಪ್ರಾಯೋಜಿತ ಎಐ ವಿಶ್ವವಿದ್ಯಾಲಯ ಸ್ಥಾಪಿಸಲು ಮುಂದಾಗಿರುವುದಾಗಿ ತಿಳಿಸಿದರು. 6ನೇ ತರಗತಿಯಿಂದಲೇ ಮಕ್ಕಳಿಗೆ ಎಐ ಶಿಕ್ಷಣ ನೀಡಲು ತೀರ್ಮಾನಿಸಲಾಗಿದೆ ಎಂದರು.



### ಆರೋಗ್ಯ, ಪ್ರವಾಸೋದ್ಯಮಕ್ಕೂ ಆದ್ಯತೆ:

ಎಲ್ಲ ತಾಲ್ಲೂಕುಗಳಲ್ಲಿ ಟೆಲಿ-ಐಸಿಯು ಸ್ಥಾಪನೆ, ಆರೋಗ್ಯ ಕ್ಷೇತ್ರದಲ್ಲಿ 'ಆರೋಗ್ಯ ಸ್ಪಂದನ' ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ಜಾರಿಗೊಳಿಸಲಾಗುತ್ತಿದೆ. ರಾಜ್ಯದಲ್ಲಿ 1,000 ರುದ್ರಭೂಮಿಗಳನ್ನು ಅಭಿವೃದ್ಧಿಪಡಿಸಲು ತೀರ್ಮಾನಿಸಲಾಗಿದೆ. ಬೆಂಗಳೂರಿನಾಚೆಗೆ ಕೈಗಾರಿಕಾ ಬೆಳವಣಿಗೆಗೆ 'ಬಿಯಾಂಡ್ ಬೆಂಗಳೂರು' ಪರಿಕಲ್ಪನೆ ಜಾರಿಗೆ ತರಲಾಗುತ್ತಿದೆ. ಕರಾವಳಿ ಹಾಗೂ ಮಲೆನಾಡು ಪ್ರವಾಸೋದ್ಯಮ ನೀತಿ ರೂಪಿಸಲಾಗುತ್ತಿದ್ದು, ಕಲಬುರಗಿ, ಬೆಳಗಾವಿ, ಹುಬ್ಬಳ್ಳಿ-ಧಾರವಾಡ, ಮಂಗಳೂರು ಹಾಗೂ ಮೈಸೂರಿನಲ್ಲಿ ಐದು ಜಾಗತಿಕ ತಂತ್ರಜ್ಞಾನ ಕೇಂದ್ರಗಳನ್ನು ಸ್ಥಾಪಿಸಲಾಗುವುದು ಎಂದರು.

### ಮನೆ ಬಾಗಿಲಿಗೆ ಆಡಳಿತ:

ಜನರು ತಮ್ಮ ಸಮಸ್ಯೆಗಳ ಪರಿಹಾರಕ್ಕಾಗಿ ವಿಧಾನಸೌಧ, ಸಚಿವರು, ಶಾಸಕರ ಕಚೇರಿ ಹಾಗೂ ಸರ್ಕಾರಿ ಕಚೇರಿಗಳಿಗೆ ಅಲೆದಾಡುವುದನ್ನು ತಪ್ಪಿಸಲು ಆಡಳಿತವನ್ನು ಜನರ ಮನೆ ಬಾಗಿಲಿಗೆ ಕೊಂಡೊಯ್ಯಲಾಗುತ್ತಿದೆ. 'ಪ್ರಜಾಸೇವೆ' ಇಲಾಖೆಯಡಿ ಈಗಾಗಲೇ 30 ಸಾವಿರ ಅರ್ಜಿಗಳು ಬಂದಿದ್ದು, ಪಿಂಚಣಿ, ಪೋಡಿ, ಖಾತೆ ಹಾಗೂ ನಿವೇಶನ ಸೇರಿದಂತೆ ವಿವಿಧ ಸಮಸ್ಯೆಗಳ ಕುರಿತು ಜನರು ಮನವಿ ಸಲ್ಲಿಸಿದ್ದಾರೆ. ಈ ಅಭಿಯಾನವನ್ನು ಪ್ರತಿ ಜಿಲ್ಲೆಯಲ್ಲಿ ವಿಸ್ತರಿಸಲು ಸೂಚಿಸಲಾಗಿದೆ ಎಂದು ಹೇಳಿದರು. ರಾಜ್ಯದಾದ್ಯಂತ ಒಂದು ಕೋಟಿಗೂ ಹೆಚ್ಚು ಆಸ್ತಿ ದಾಖಲೆಗಳನ್ನು ಪೋಡಿ ಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ. ಬೆಂಗಳೂರಿನಲ್ಲಿ 26 ಲಕ್ಷ ಆಸ್ತಿ ದಾಖಲೆಗಳನ್ನು ಸ್ಕ್ಯಾನ್ ಮಾಡಿ ಡಿಜಿಟಲೀಕರಣ ಮಾಡಲಾಗುತ್ತಿದೆ. ಸರ್ಕಾರದ ಆರನೇ ಗ್ಯಾರಂಟಿಯಾಗಿ 'ಭೂಮಿ ಗ್ಯಾರಂಟಿ' ಜಾರಿಗೊಳಿಸಲಾಗುತ್ತಿದೆ ಎಂದರು.

### 2037ಕ್ಕೆ ರೂ 1 ಟ್ರಿಲಿಯನ್ ಆರ್ಥಿಕತೆ:

2037ರ ವೇಳೆಗೆ ಕರ್ನಾಟಕದ ಆರ್ಥಿಕತೆಯನ್ನು 1 ಟ್ರಿಲಿಯನ್ ಡಾಲರ್‌ಗೆ ತಲುಪಿಸುವ ಮಹಾ ಸಂಕಲ್ಪ ಹೊಂದಲಾಗಿದೆ. ರಾಜ್ಯದಲ್ಲಿ ಅಪೌಷ್ಟಿಕತೆ, ಮಕ್ಕಳ ಶಾಲಾ ತೊರೆಯುವಿಕೆ ಹಾಗೂ ಬಡತನವನ್ನು ಶೂನ್ಯಕ್ಕೆ ಇಳಿಸುವ ಗುರಿಯನ್ನೂ ಹೊಂದಲಾಗಿದೆ. ಮೇಕೆದಾಟು ಸೇರಿದಂತೆ ರಾಜ್ಯದ ಜಲ ಭದ್ರತೆಗೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು. ಮಹದಾಯಿ ಯೋಜನೆಯ ಅಡೆತಡೆ ನಿವಾರಣೆಗೆ ಮುಂದಿನ ದಿನಗಳಲ್ಲಿ ಹೋರಾಟ ನಡೆಸಲಾಗುವುದು ಎಂದರು.
ಕರ್ನಾಟಕವನ್ನು ಆರ್ಥಿಕವಾಗಿ ಸದೃಢ, ಸಾಮಾಜಿಕವಾಗಿ ಸಶಕ್ತ ಹಾಗೂ ತಂತ್ರಜ್ಞಾನದಲ್ಲಿ ಮುಂಚೂಣಿ ರಾಜ್ಯವನ್ನಾಗಿ ರೂಪಿಸುವುದು ಸರ್ಕಾರದ ಗುರಿಯಾಗಿದೆ.

### ಐದು ಗ್ಯಾರಂಟಿಗಳಿಗೆ ರೂ 1.45 ಲಕ್ಷ ಕೋಟಿ

ಕಳೆದ ಮೂರು ವರ್ಷಗಳಲ್ಲಿ ಐದು ಗ್ಯಾರಂಟಿ ಯೋಜನೆಗಳ ಮೂಲಕ ಜನರಿಗೆ ರೂ 1,45,416 ಕೋಟಿ ನೆರವು ನೀಡಲಾಗಿದೆ. ಗೃಹಲಕ್ಷ್ಮಿ ಯೋಜನೆಯಡಿ 1.24 ಕೋಟಿ ಮಹಿಳೆಯರಿಗೆ ರೂ 76,951 ಕೋಟಿ, ಗೃಹಜ್ಯೋತಿ ಯೋಜನೆಗೆ ರೂ 30,522 ಕೋಟಿ, ಅನ್ನಭಾಗ್ಯಕ್ಕೆ ರೂ 21,054 ಕೋಟಿ, ಶಕ್ತಿ ಯೋಜನೆಗೆ ರೂ 15,735 ಕೋಟಿ ಹಾಗೂ ಯುವನಿಧಿಗೆ ರೂ 1,154 ಕೋಟಿ ವೆಚ್ಚ ಮಾಡಲಾಗಿದೆ ಎಂದು ವಿವರಿಸಿದರು.

ಸರ್ಕಾರ ಇದುವರೆಗೆ 2.70 ಕೋಟಿ ಫಲಾನುಭವಿಗಳ ಖಾತೆಗಳಿಗೆ ರೂ 1,41,210 ಕೋಟಿ ನೇರವಾಗಿ ಜಮೆ ಮಾಡಿದೆ. ಪ್ರಸಕ್ತ ಸಾಲಿನಲ್ಲಿ 28.63 ಲಕ್ಷ ರೈತರಿಗೆ ಶೂನ್ಯ ಮತ್ತು ಕಡಿಮೆ ಬಡ್ಡಿದರದಲ್ಲಿ ರೂ 25,652 ಕೋಟಿ ಸಾಲ ನೀಡಲಾಗಿದೆ. ರೂ 17,073 ಕೋಟಿ ಮೊತ್ತದ 121 ನೀರಾವರಿ ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ ಎಂದರು.

---

### ಸವಿ ವಾಹಿನಿ

ಸಮಯದ ಜೊತೆ ನಡೆಯುವ ಅವಶ್ಯಕತೆಯಿಲ್ಲ.
ಸತ್ಯದ ಜೊತೆ ನಡೆಯಿರಿ.
ಆಗ ಒಂದು ದಿನ ಸಮಯವೇ ನಿಮ್ಮ ಜೊತೆ ನಡೆಯುತ್ತದೆ.

### ದಿನ ಪಂಚಾಂಗ

ಸೆಪ್ಟಂಬರ್, 11-2026, ಶುಕ್ರವಾರ ವರ್ಷ ಋತು, ಶ್ರಾವಣ ಮಾಸ, ಬಹುಳ ಪಕ್ಷ.
ಅಮಾವಾಸ್ಯೆ ತಿಥಿ ಬೆ.8:46
ಪುಬ್ಬ ನಕ್ಷತ್ರ ಮ.2:16
ರಾಹುಕಾಲ ಬೆ 10:44-12:16
ಬೆನಕನ ಅಮಾವಾಸ್ಯೆ, ಕುಶ ಸಂಗ್ರಹಣ, ಪಾಣಿ ಮಂಗಳೂರು ನರಹರಿಪರ್ವತ ತೀರ್ಥ, ವಿಜಯಪುರ । ಉಪ್ಪಲದಿಲ್ಲಿ ಸಂಗಮೇಶ್ವರ ಜಾತ್ರೆ, ಪಿಠೋರಿ ವ್ರತ

### ಆಧ್ಯಾತ್ಮ

## ಹಣಕ್ಕಿಂತ ಶುದ್ಧ ನೀರೇ ಶ್ರೇಷ್ಠ: ನಗರ ವ್ಯಾಮೋಹ ಬಿಟ್ಟು ಹಳ್ಳಿಯಲ್ಲೇ ಇರಿ



● ವಿಕ್ರಮ ವಾಹಿನಿ | ಗೋಕರ್ಣ

ಹಣವಂತರಿಗಿಂತ ಶುದ್ಧ ನೀರನ್ನು ಸೇವಿಸುವವನೇ ನಿಜವಾದ ಯೋಗವಂತ. ಶುದ್ಧ ಗಾಳಿ ಹಾಗೂ ಶುದ್ಧ ನೀರು ಮನುಷ್ಯನ ಮೂಲಭೂತ ಅವಶ್ಯಕತೆ. ಹಾಗಾಗಿ ಅವು ಸಿಗುವಲ್ಲಿಯೇ ವಾಸ ಮಾಡಬೇಕು. ದುಡ್ಡಿಗಿಂತ ಶುದ್ಧ ನೀರು ಅಗತ್ಯ ಎಂಬುದನ್ನು ಸಮಾಜ ಆಲೋಚಿಸಬೇಕು ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.

ಗೋಕರ್ಣದ ಅಶೋಕೆಯ ಮೂಲಮಠದ ಪರಿಸರದಲ್ಲಿ ನಡೆಯುತ್ತಿರುವ 'ಅನ್ನಬ್ರಹ್ಮ ಚಾತುರ್ಮಾಸ್ಯ'ದ ಧರ್ಮಸಭೆಯಲ್ಲಿ 10.09.2026 ರಂದು 'ಅನ್ನಂ ಬ್ರಹ್ಮ' ಮಾಲಿಕೆಯಲ್ಲಿ ನೀರಿನ ಕುರಿತಾಗಿ ಪ್ರವಚನ ಅನುಗ್ರಹಿಸಿದ ಶ್ರೀಗಳು, ಕುಡಿಯಲು ಯೋಗ್ಯವಾಗಿರದ ನೀರು ಸಿಗದಿರುವುದು ನಗರ ಜೀವನದ ದೊಡ್ಡ ಅನರ್ಥವಾಗಿದ್ದು, ಯೋಜನಾ ರಹಿತವಾದ ನಗರ ನಿರ್ಮಾಣದಿಂದಾಗಿ ನಗರಗಳು ಕೇವಲ ಮನುಷ್ಯರು ಗುಂಪುಗುಂಪಾಗಿ ಇರುವಂತೆ ಮಾಡಿರುವ ವ್ಯವಸ್ಥೆಗಳಷ್ಟೇ ಆಗಿ ಮಾರ್ಪಟ್ಟಿದೆ. ಹಣದ ಆಸೆಗೆ ನದಿ, ಕೆರೆಗಳನ್ನು ಮುಚ್ಚಿ ನಗರದ ನಿರ್ಮಾಣವನ್ನು ಮಾಡಲಾಗಿದ್ದು, ನಗರಗಳಲ್ಲಿ ಮನುಷ್ಯನ ಮಾಲಿನ್ಯದ ಹರಿವು ಹಾಗೂ ಕಾರ್ಖಾನೆಗಳ ತ್ಯಾಜ್ಯಗಳ ನದಿ ನಿರ್ಮಾಣವಾಗಿದೆ. ಈ ತ್ಯಾಜ್ಯಗಳೆಲ್ಲವೂ ನದಿಯನ್ನು ಸೇರುತ್ತಿದ್ದು, ನೀರಿನ ಪಾತ್ರಗಳನ್ನು ಮಲಿನಗೊಳಿಸುತ್ತಿವೆ. ಈ ಕಾರಣಗಳಿಂದಾಗಿಯೇ ಆಧುನಿಕ ವಿಜ್ಞಾನವು ನದಿ ನೀರು ಬಳಕೆಗೆ ಯೋಗ್ಯವಲ್ಲ ಎನ್ನುತಿದೆ ಎಂದು ನಗರ ಜೀವನದ ಕುರಿತಾಗಿ ವಿಷಾದ ವ್ಯಕ್ತಪಡಿಸಿದರು.

ಆಚಾರ್ಯ ಸುಶ್ರುತರು ಮಳೆಯ ನೀರು ಸಿಗದೇ ಇದ್ದರೆ ಅಥವಾ ಸಂಗ್ರಹ ಖಾಲಿಯಾದರೆ ಭೂಮಿಯ ನೀರನ್ನು ಸೇವಿಸಲು ಸೂಚಿಸಿದ್ದಾರೆ. ಹಾಗೂ ಭೂಮಿಯ ನೀರಿನಲ್ಲಿ ಬಾವಿ, ನದಿ, ಕೆರೆ, ಬೆಟ್ಟದ ನೀರು ಸೇರಿದಂತೆ ಏಳು ವಿಧಗಳನ್ನು ಗುರುತಿಸಿದ್ದು, ಇವುಗಳ ಗುಣಾವಗುಣಗಳನ್ನು ವಿಮರ್ಶಿಸಿದ್ದಾರೆ. ಹಾಗೆಯೇ ಕರಾವಳಿ - ಮಲೆನಾಡಿನ ನೀರಿಗಿಂತ ಬಯಲು ಸೀಮೆಯ ನೀರು ಸೇವನೆಗೆ ಯೋಗ್ಯ. ಬಯಲು ಸೀಮೆಯ ನೀರಿಗಿಂತ ಅರೆ ಮಲೆನಾಡಿನ ನೀರು ಉತ್ತಮ ಎಂದು ಆಯುರ್ವೇದ ಸೂಚಿಸಿದೆ. ಮಣ್ಣಿನ ಬಣ್ಣದ ಆಧಾರದ ಮೇಲೆ ನೀರಿನ ರುಚಿಯೂ ಬೇರೆಬೇರೆಯಾಗುತ್ತದೆ ಹಾಗೂ ಋತುಗಳನ್ನು ಆಧರಿಸಿಯೂ ನೀರಿನ ಗುಣ ಧರ್ಮ ಬದಲಾಗುತ್ತದೆ ಎಂದು ವಿವಿಧ ನೀರಿನ ಮೂಲಗಳ ಕುರಿತಾಗಿ ವಿವರಿಸಿದರು.

ಕಳೆದ ಮೂರು ದಿನಗಳಿಂದ ನಡೆಯುತ್ತಿದ್ದ ಶುಕ್ಲ ಯಜುರ್ವೇದ ಪಾರಾಯಣವು ಇಂದು ಸಮಾಪನಗೊಂಡಿತು. ಪಾರಾಯಣವನ್ನು ಮಾಡಿದ ವೇದ ವಿದ್ವಾಂಸರು ಶ್ರೀಗಳಿಂದ ಆಶೀರ್ವಾದ ಪಡೆದರು. ಸುಬ್ರಹ್ಮಣ್ಯ ಹೆಗಡೆ ಕಣ್ಣಿ ಕುಟುಂಬದವರು ಗುರುಭಿಕ್ಷಾ ಸೇವೆ ಸಮರ್ಪಿಸಿದರು. ಡಾ.ಜಿ.ಎಲ್. ಹೆಗಡೆ, ಶ್ರೀಕಾಂತ್ ಪಂಡಿತ್, ಹೇರಂಭ ಶಾಸ್ತ್ರಿ, ದಿನಪ್ರಧಾನರಾಗಿ ಸಾದಂಗಾಯ ರಾಮಚಂದ್ರ ಭಟ್ ದಂಪತಿಗಳು ಉಪಸ್ಥಿತರಿದ್ದರು.

ಕರ್ಕಿ ಜ್ಞಾನೇಶ್ವರಿ ದೈವಜ್ಞ ಮಠದ ಚಾತುರ್ಮಾಸ್ಯ ಸಮಿತಿಯ ಅಧ್ಯಕ್ಷ ಅರುಣ್ ಕುಮಾರ್ ಮತ್ತು ತಂಡದವರು ಸುವಸ್ತುಗಳನ್ನು ಸಮರ್ಪಿಸಿ, ಶ್ರೀಗಳ ಆಶೀರ್ವಾದ ಪಡೆದರು.

ಕನ್ನಡ ವೈಶ್ಯವಾಣಿ ಸಮಾಜದಿಂದ ಸ್ವರ್ಣಪಾದುಕಾ ಪೂಜೆ : ಶ್ರೀಮಠದ ಗುರುಪರಂಪರೆಗೆ ಕನ್ನಡ ವೈಶ್ಯವಾಣಿ ಸಮಾಜ ಬಂಧುಗಳು ಸ್ವರ್ಣಪಾದುಕಾ ಪೂಜೆಯನ್ನು ಸಮರ್ಪಿಸಿ, ಶ್ರೀಗಳ ಆಶೀರ್ವಾದವನ್ನು ಪಡೆದರು. ಚಂದ್ರಕಾಂತ ಶೆಟ್ಟಿ ಮುಂತಾದವರು ಉಪಸ್ಥಿತರಿದ್ದರು.

---




ಗುರುವಾರ ನಡೆದ ಬಸವ ಸಮಿತಿಯ 62ನೇ ಸಂಸ್ಥಾಪನಾ ದಿನಾಚರಣೆ ಹಾಗೂ ಮಾಜಿ ಉಪರಾಷ್ಟ್ರಪತಿ ಬಿ.ಡಿ. ಜತ್ತಿ ಅವರ 114ನೇ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಬಸವ ಸಮಿತಿ ಅಧ್ಯಕ್ಷ ಅರವಿಂದ ಜತ್ತಿ (ಎಡ ತುದಿ) ಮಾತನಾಡಿದರು. ವೇದಿಕೆಯಲ್ಲಿ ಶ್ರೀ ಸುತ್ತೂರು ಮಠದ ಶಿವರಾತ್ರೇಶ್ವರ ಸ್ವಾಮೀಜಿ, ಶ್ರೀ ಬೇಲಿಮಠದ ಸ್ವಾಮೀಜಿ, ಬಸವ ಸಮಿತಿ ಉಪಾಧ್ಯಕ್ಷ ಶ್ರೀ ಪ್ರಭುದೇವ ಚಿಗಟೇರಿ ಹಾಗೂ ಶ್ರೀ ದಾಸೋಹ ಪ್ರಶಸ್ತಿ ಪುರಸ್ಕೃತ ಮಧುಸೂಧನ ಸಾಯಿ ಉಪಸ್ಥಿತರಿದ್ದರು.

## ಮಾವನ ಕಟ್ಟುನಿಟ್ಟಿಗೆ ಬೇಸತ್ತು ಸೊಸೆಯಿಂದಲೇ ಕೊಲೆ ಸುಪಾರಿ!

1ನೇ ಪುಟದಿಂದ

ಕೊಲೆ ನಡೆದ ಬಳಿಕ ಯಾವುದೇ ಬೆಲೆಬಾಳುವ ವಸ್ತುಗಳನ್ನು ಕೊಂಡೊಯ್ಯದೇ ಆರೋಪಿಗಳು ಪರಾರಿಯಾಗಿದ್ದರು. ಇದರಿಂದ ದರೋಡೆ ಉದ್ದೇಶದ ಕೊಲೆ ಎಂಬ ಸಾಧ್ಯತೆಯನ್ನು ಪೊಲೀಸರು ಆರಂಭದಲ್ಲೇ ತಳ್ಳಿಹಾಕಿ, ಪರಿಚಿತರ ಮೇಲೂ ತನಿಖೆ ಕೇಂದ್ರೀಕರಿಸಿದ್ದರು.

ಬಂಧಿತ ಆರೋಪಿಗಳ ವಿಚಾರಣೆ ಮುಂದುವರಿದಿದ್ದು, ಕೊಲೆಗೆ ಬಳಸಿದ ಆಯುಧ, ಸುಪಾರಿ ಹಣದ ವ್ಯವಹಾರ ಹಾಗೂ ಹತ್ಯೆಯ ಸಂಚು ರೂಪಿಸಿದ ಸಂಪೂರ್ಣ ವಿಧಾನದ ಕುರಿತು ಪೊಲೀಸರು ಹೆಚ್ಚಿನ ಮಾಹಿತಿ ಕಲೆಹಾಕುತ್ತಿದ್ದಾರೆ.

---


## ಅನುಮತಿಯಿಲ್ಲದೆ 8 ವರ್ಷಗಳಿಂದ ಪಿಜಿ ಕೋರ್ಸ್!

1ನೇ ಪುಟದಿಂದ

ಈ ಕುರಿತು ಪ್ರತಿಕ್ರಿಯಿಸಿರುವ ಜಾನಪದ ವಿಶ್ವವಿದ್ಯಾಲಯದ ಕುಲಸಚಿವ ಗುರುಪ್ರಸಾದ್, ಸರ್ಕಾರದ ಆದೇಶದ ಹಿನ್ನೆಲೆಯಲ್ಲಿ ಎಂಟು ಕೋರ್ಸ್‌ಗಳ ಪ್ರವೇಶಾತಿಯನ್ನು ತಡೆಹಿಡಿಯಲಾಗಿದೆ. ಮುಂದಿನ ಕ್ರಮ ಹಾಗೂ ವಿದ್ಯಾರ್ಥಿಗಳ ಹಿತರಕ್ಷಣೆಗೆ ಸಂಬಂಧಿಸಿದಂತೆ ಸರ್ಕಾರ ನೀಡುವ ನಿರ್ದೇಶನದಂತೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

ಜಾನಪದ ಕಲೆ, ಜಾನಪದ ವಿಜ್ಞಾನ, ಸಾಹಿತ್ಯ, ಪ್ರವಾಸೋದ್ಯಮ ಹಾಗೂ ಬುಡಕಟ್ಟು ಅಧ್ಯಯನಗಳಂತಹ ವಿಶೇಷ ವಿಷಯಗಳ ಅಧ್ಯಯನಕ್ಕಾಗಿ ಸ್ಥಾಪನೆಯಾದ ವಿಶ್ವವಿದ್ಯಾಲಯವು ತನ್ನ ವ್ಯಾಪ್ತಿಯನ್ನು ಮೀರಿ ಸಾಮಾನ್ಯ ಸ್ನಾತಕೋತ್ತರ ಕೋರ್ಸ್‌ಗಳನ್ನು ಅಗತ್ಯ ಅನುಮೋದನೆ ಇಲ್ಲದೆ ಆರಂಭಿಸಿರುವುದು ಇದೀಗ ಗಂಭೀರ ಆಡಳಿತಾತ್ಮಕ ಲೋಪವಾಗಿ ಹೊರಹೊಮ್ಮಿದೆ. ಸರ್ಕಾರದ ಮುಂದಿನ ನಿರ್ಧಾರ ವಿದ್ಯಾರ್ಥಿಗಳ ಶೈಕ್ಷಣಿಕ ಭವಿಷ್ಯಕ್ಕೆ ನಿರ್ಣಾಯಕವಾಗಲಿದೆ.

ಜೊತೆಗೆ, ಅನುಮೋದನೆ ಇಲ್ಲದೆ ಇಷ್ಟು ವರ್ಷಗಳ ಕಾಲ ಕೋರ್ಸ್‌ಗಳನ್ನು ನಡೆಸಲು ಕಾರಣವಾದ ಆಡಳಿತಾತ್ಮಕ ಲೋಪದ ಕುರಿತು ಸಮಗ್ರ ಪರಿಶೀಲನೆ ನಡೆಸಿ, ಹೊಣೆಗಾರರ ವಿರುದ್ಧ ಕ್ರಮ ಕೈಗೊಳ್ಳಬೇಕೆಂಬ ಒತ್ತಾಯವೂ ಕೇಳಿಬಂದಿದೆ.



ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಸರ್ಕಾರದ ನೂರು ದಿನಗಳ ಸಂಭ್ರಮದ ಅಂಗವಾಗಿ ಬೆಂಗಳೂರಿನ ವಿಧಾನಸೌಧವನ್ನು ವಿದ್ಯುದ್ದೀಪಗಳು, ಲೇಸರ್ ಕಿರಣಗಳು ಹಾಗೂ 3ಡಿ ಮ್ಯಾಪಿಂಗ್ ಪ್ರದರ್ಶನಗಳಿಂದ ಆಕರ್ಷಕವಾಗಿ ಅಲಂಕರಿಸಲಾಗಿತ್ತು. ವಿಧಾನಸೌಧದ ಪೂರ್ವದ್ವಾರದ ಬೃಹತ್ ಪರದೆಯಲ್ಲಿ ಸರ್ಕಾರದ ಅಭಿವೃದ್ಧಿ ಕಾರ್ಯಗಳು ಹಾಗೂ ಪಂಚ ಗ್ಯಾರಂಟಿ ಯೋಜನೆಗಳ ಯಶೋಗಾಥೆಯನ್ನು ಹಾಡು, ಧ್ವನಿ ಮತ್ತು ಬೆಳಕಿನ ಪ್ರದರ್ಶನದ ಮೂಲಕ ಬಿಂಬಿಸಲಾಯಿತು. ಇದೇ ವೇಳೆ ಮೈಸೂರು ಅರಮನೆ, ಕೃಷ್ಣರಾಜಸಾಗರ ಅಣೆಕಟ್ಟು, ತುಂಗಭದ್ರಾ ಮತ್ತು ಆಲಮಟ್ಟಿ ಜಲಾಶಯ ಸೇರಿದಂತೆ ರಾಜ್ಯದ ಹಲವು ಐತಿಹಾಸಿಕ ಹಾಗೂ ಪಾರಂಪರಿಕ ಕಟ್ಟಡಗಳು ವಿದ್ಯುದ್ದೀಪಾಲಂಕಾರದಿಂದ ಕಂಗೊಳಿಸಿದವು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಶ್ರಯದಲ್ಲಿ ನಡೆದ ಈ ವಿಶೇಷ ಅಲಂಕಾರ ಕಾರ್ಯಕ್ರಮ ಸಾರ್ವಜನಿಕರ ಗಮನ ಸೆಳೆಯಿತು.

## ಕ್ವಿಜ್ ಗೆದ್ದವರಿಗೆ ಪವಿತ್ರ ಕಾಶಿ-ಪ್ರಯಾಗ್ ಯಾತ್ರೆ : 20 ಮಂದಿಗೆ ಉಚಿತ ವಿಮಾನ ಪ್ರಯಾಣದ ಸೌಭಾಗ್ಯ

● ವಿಕ್ರಮ ವಾಹಿನಿ | ಬೆಂಗಳೂರು

ಮಹಾ ಶಿವರಾತ್ರಿ ಅಂಗವಾಗಿ ವಿಜಯನಗರದಲ್ಲಿ ಆಯೋಜಿಸಲಾಗಿದ್ದ ಕ್ವಿಜ್ ನಲ್ಲಿ ವಿಜೇತರಾದ 20 ಮಂದಿಗೆ ನೀಡಿದ್ದ ಭರವಸೆಯಂತೆ ಪವಿತ್ರ ಕಾಶಿ–ಪ್ರಯಾಗಕ್ಕೆ ಉಚಿತ ವಿಮಾನಯಾತ್ರೆ ಕಲ್ಪಿಸಲಾಗಿದ್ದು, ವಿಜೇತ 20 ಮಂದಿಗೆ ವಿಮಾನ ಟಿಕೆಟ್‌ಗಳನ್ನು ವಿತರಿಸಿ, ಪವಿತ್ರ ಯಾತ್ರೆಗೆ ಶುಭ ಹಾರೈಸಿ ಬೀಳ್ಕೊಡಲಾಯಿತು.

ಇದೇ ವರ್ಷದ ಫೆಬ್ರವರಿ 15ರಂದು ವಿಜಯನಗರದಲ್ಲಿ ಅಹೋರಾತ್ರಿ ನಡೆದ ಅದ್ದೂರಿ ಮಹಾ ಶಿವರಾತ್ರಿ ಕಾರ್ಯಕ್ರಮದಲ್ಲಿ ವಿಜಯನಗರ ಹಾಗೂ ಗೋವಿಂದರಾಜನಗರ ವಿಧಾನಸಭಾ ಕ್ಷೇತ್ರಗಳ ಸಾರ್ವಜನಿಕರಿಗಾಗಿ ವಿಶೇಷ ರಸಪ್ರಶ್ನೆ ಸ್ಪರ್ಧೆ ಆಯೋಜಿಸಲಾಗಿತ್ತು. ವಿಜೇತರಾದ 20 ಮಂದಿಗೆ ಕಾಶಿ–ಪ್ರಯಾಗ್ ನಂತಹ ಪವಿತ್ರ ಕ್ಷೇತ್ರಗಳಿಗೆ ಉಚಿತ ವಿಮಾನಯಾತ್ರೆ ಕಲ್ಪಿಸುವುದಾಗಿ ಭರವಸೆ ನೀಡಲಾಗಿತ್ತು.

ವಿಜಯನಗರ ಕ್ಷೇತ್ರದ ಶಾಸಕ ಎಂ. ಕೃಷ್ಣಪ್ಪ ಅವರು ಇಂದು 20 ಮಂದಿ ರಸಪ್ರಶ್ನೆ ವಿಜೇತರಿಗೆ ವಿಮಾನ ಟಿಕೆಟ್‌ಗಳನ್ನು ವಿತರಿಸಿದರು. ವಿಜೇತರು ಕಾಶಿ–ಪ್ರಯಾಗಕ್ಕೆ ತೆರಳಿ ಪವಿತ್ರ ಕ್ಷೇತ್ರಗಳ ದರ್ಶನ ಪಡೆಯುವಂತೆ ಹಾರೈಸಿದರು. ವಿಶೇಷ ಯಾತ್ರೆಗೆ ವಿಜಯನಗರದ ಯುವ ನಾಯಕರಾದ ಪ್ರದೀಪ್ ಕೃಷ್ಣ ಅವರು ಸಂಪೂರ್ಣ ಮಾರ್ಗದರ್ಶನ ನೀಡುತ್ತಿದ್ದು, ಪ್ರಯಾಣದ ಆರಂಭದಿಂದ ಅಂತ್ಯದವರೆಗೆ ಅಗತ್ಯವಿರುವ ಎಲ್ಲ ವ್ಯವಸ್ಥೆಗಳನ್ನು ಉಚಿತವಾಗಿ ಕಲ್ಪಿಸಿದ್ದಾರೆ. ವಿಮಾನ ಟಿಕೆಟ್, ಪ್ರಯಾಣ, ವಸತಿ, ಊಟ ಸೇರಿದಂತೆ ಯಾತ್ರೆಗೆ ಸಂಬಂಧಿಸಿದ ಎಲ್ಲಾ ಖರ್ಚು, ವೆಚ್ಚವನ್ನು ಎಂ. ಕೃಷ್ಣಪ್ಪ ಅವರು ಭರಿಸುತ್ತಿದ್ದಾರೆ.

ಬೀಳ್ಕೊಡುಗೆ ಕಾರ್ಯಕ್ರಮದಲ್ಲಿ ರಸಪ್ರಶ್ನೆ ವಿಜೇತರು ಸಂತಸ ವ್ಯಕ್ತಪಡಿಸಿ, ತಮಗೆ ನೀಡಿದ್ದ ಭರವಸೆಯನ್ನು ಈಡೇರಿಸಿದ ಶಾಸಕರಾದ ಎಂ. ಕೃಷ್ಣಪ್ಪ ಹಾಗೂ ಯಾತ್ರೆಯ ಸಂಪೂರ್ಣ ಜವಾಬ್ದಾರಿ ವಹಿಸಿಕೊಂಡಿರುವ ಪ್ರದೀಪ್ ಕೃಷ್ಣ ಅವರಿಗೆ ಕೃತಜ್ಞತೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಗೋವಿಂದರಾಜನಗರ ಕ್ಷೇತ್ರದ ಶಾಸಕ ಪ್ರಿಯಕೃಷ್ಣ, ನೀಲಕಂಠಪ್ಪ, ಕಲಾವಿದರಾದ ಮಿಮಿಕ್ರಿ ಗೋಪಿ, ಮಿಮಿಕ್ರಿ ದಯಾನಂದ, ಹಾಸ್ಯ ಸಾಹಿತಿ ಎಂ.ಎಸ್. ನರಸಿಂಮಮೂರ್ತಿ, ಎಂ. ಉದಯ್ ಹಾಗೂ ಪ್ರಜಾವಲ್ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

ಬೆಂಗಳೂರು ಜಾಣಜಾಣೆಯರ ಸಂಸ್ಥೆಯಿಂದ ಆಯೋಜಿಸಿದ್ದ ಈ ಕಾರ್ಯಕ್ರಮದಲ್ಲಿ ಮಾತನಾಡಿದ ಸಂಸ್ಥೆಯ ಎಂ. ಉದಯ್, "ನುಡಿದಂತೆ ನಡೆದು ಭರವಸೆಯನ್ನು ಈಡೇರಿಸಿರುವುದು ಸಂತಸದ ಸಂಗತಿ. ಕಾಶಿ–ಪ್ರಯಾಗದಂತಹ ಪವಿತ್ರ ಕ್ಷೇತ್ರಗಳ ದರ್ಶನಕ್ಕೆ ಉಚಿತ ವಿಮಾನಯಾತ್ರೆಯ ಅವಕಾಶ ಕಲ್ಪಿಸಿರುವುದು ಅವಿಸ್ಮರಣೀಯ ಅನುಭವ " ಎಂದು ತಿಳಿಸಿದರು.

# ಬ್ರಾಹ್ಮಣರ ಏಳಿಗೆಗಾಗಿ ವಿಶೇಷಪೂಜೆ, ಹೋಮ

● ವಿಕ್ರಮ ವಾಹಿನಿ | ಬೆಂಗಳೂರು

ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಗಾಯಿತ್ರಿ ಭವನದಲ್ಲಿ ಬ್ರಾಹ್ಮಣ ಸಮುದಾಯ ಏಳಿಗೆಗಾಗಿ ಮತ್ತು ಮಹಾಸಭಾದ ಶ್ರೇಯೋಭಿವೃದ್ಧಿಗಾಗಿ ಮೂರು ದಿನಗಳ ಕಾಲ ಮಹಾ ಸುದರ್ಶನ ಹೋಮ, ಅಘೋರಾಸ್ತ್ರ ಹೋನ, ಜಾತವೇದಾಸೆ ಹೋಮ, ಭಾಗ್ಯ ಸೂಕ್ತ ಹೋಮ, ಐಕ್ಯಮತ್ಯ ಸೂಕ್ತ ಹೋಮ ವಿಶೇಷ ಪೂಜೆ ಮತ್ತು ಪ್ರಸಾದ ವಿನಿಯೋಗ ಕಾರ್ಯಕ್ರಮ.



ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಅಧ್ಯಕ್ಷರಾದ ಎಸ್.ರಘುನಾಥ್ ರವರ ನೇತೃತ್ವದಲ್ಲಿ ವಿಶೇಷಪೂಜೆ ಮತ್ತು ಹೋಮ ಕಾರ್ಯಕ್ಕೆ ಪೂಜೆ ಸಲ್ಲಿಸಿ ಚಾಲನೆ ನೀಡಿದರು.ವರದಾಚಾರ್ ತಂತ್ರಿಗಳು, ಸುಧಾಮಚಾರ್, ನರಸಿಂಹಚಾರ್ ಮತ್ತು ಅರ್ಚಕರು ಪಾಲ್ಗೊಂಡಿದ್ದರು.

ಎಲ್ಲ ಸಮಾಜವನ್ನು ಸುಖ, ಶಾಂತಿ ನೆಮ್ಮದ್ದಿಗಾಗಿ ಲೋಕ ಸಮಸ್ತ ಸುಖಿನೋ ಭವಂತು ಎಂದು ಶ್ರಮಿಸುವವರು ಬ್ರಾಹ್ಮಣ ಸಮಾಜ ಅವರ ಜೀವನದಲ್ಲಿ ಬರುವ ಸಂಕಷ್ಟಗಳು ದೂರವಾಗಲಿ ಮತ್ತು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಸದೃಡವಾಗಿ ಬೆಳಯಲಿ ಎಂದು ಹೋಮ, ವಿಶೇಷ ಪೂಜೆಯನ್ನು ಮೂರು ದಿನಗಳ ಕಾಲ ನಡೆಯುತ್ತಿದೆ.

ಮಹಾ ಸುದರ್ಶನ ಹೋಮ ಮಹಾಸಭಾ ಜಾಗದಲ್ಲಿ ಯಾವುದೇ ತಂತ್ರಗಳು, ಕೆಟ್ಟ ದೃಷ್ಟಿ ಬೀಳದಿರಲು ,ದುರ್ಗ ಶಕ್ತಿಯ ದೋಷ ಪರಿಹಾರಕ್ಕಾಗಿ ಮತ್ತು ಅಘೋರಾಸ್ತ್ರ ಪೇತ, ಭೂತ ಭಾಧೆಯಿಂದ ಮುಕ್ತಿ ಪಡೆಯಲು ಭಾಗ್ಯ ಸೂಕ್ತ ಹೋಮದಿಂದ ಲಕ್ಷ್ಮೀ ದೇವಿ ಕೃಪಕಟಾಕ್ಷ ಸಿಗಲಿ ಎಂದು ಐಕ್ಯಮತ್ಯ ಸೂಕ್ತ ಹೋಮದಿಂದ ಸಂಘದಲ್ಲಿ ಎಲ್ಲರು ಸಹೋದರರಂತೆ, ಸಂಘಟಿತರಾಗಿ ಮಹಾಸಭಾದ ಬೆಳವಣಿಗೆ ಶ್ರಮಿಸಲು ಸಹಕಾರಿಯಾಗುತ್ತದೆ. ಗಾಯಿತ್ರಿ ಹೋಮದಿಂದ ಬಂದ ಸಂಕಷ್ಟಗಳು, ಮುಂದೆ ಬರುವ ಸಂಕಷ್ಟಗಳ ನಿವಾರಣೆಗಾಗಿ ಹೋಮ ಮಾಡಲಾಗುತ್ತಿದೆ.

ಹಿರಿಯ ಉಪಾಧ್ಯಕ್ಷರಾದ ಆರ್.ಲಕ್ಷ್ಮಿಕಾಂತ್, ವಿಪ್ರ ಮುಖಂಡರುಗಳಾದ ಎನ್.ಎಲ್.ಚಿದಾನಂದ, ಸತ್ಯಪ್ರಕಾಶ್, ಪ್ರಹ್ಲಾದ್ ಬಾಬು, ಎಲ್.ಪುರುಷೋತ್ತಮ್ ಜಿಲ್ಲಾ ಪ್ರತಿನಿಧಿಗಳಾದ ಕೆ.ಎನ್.ರವಿಕುಮಾರ್, ಎಸ್.ಎಸ್.ಪ್ರಸಾದ್, ಪಿ.ಆರ್.ಪ್ರಕಾಶ್, ನಾಗೇಶ್, ರಾಜಶೇಖರ್, ದಿಲೀಪ್, ಸತೀಶ್ ಉರಾಳ್, ಮತ್ತು ರಾಮ್ ಪ್ರಸಾದ್, ಜೆ.ಹೆಚ್.ಆನಿಲ್ ಕುಮಾರ್, ರಥಯಾತ್ರೆ ಸುರೇಶ್ ರವರು ವಿಪ್ರ ಭಾಂದವರು ಭಾಗವಹಿಸಿದ್ದರು.

## ‘ಖರ್ಗೆ ಕುಟುಂಬಕ್ಕೆ ಹೈಕೋರ್ಟ್ ಕ್ಲೀನ್‌ಚಿಟ್ ನೀಡಿಲ್ಲ’

● ವಿಕ್ರಮ ವಾಹಿನಿ | ಬೆಂಗಳೂರು

ಸಿದ್ಧಾರ್ಥ ವಿಹಾರ ಟ್ರಸ್ಟ್‌ಗೆ ಸಂಬಂಧಿಸಿದ ಭೂಹಂಚಿಕೆ ಪ್ರಕರಣದಲ್ಲಿ ಹೈಕೋರ್ಟ್ ನೀಡಿರುವ ಆದೇಶವನ್ನು ಕಾಂಗ್ರೆಸ್ ನಾಯಕರು ‘ಕ್ಲೀನ್‌ಚಿಟ್’ ಎಂದು ಬಿಂಬಿಸಿಕೊಳ್ಳುತ್ತಿರುವುದು ಸಾರ್ವಜನಿಕರನ್ನು ದಾರಿ ತಪ್ಪಿಸುವ ಪ್ರಯತ್ನ ಎಂದು ವಿಧಾನಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್. ರವಿಕುಮಾರ್ ಆರೋಪಿಸಿದ್ದಾರೆ.



ಹೈಕೋರ್ಟ್ ವಿಚಾರಣಾ ನ್ಯಾಯಾಲಯದ ಪ್ರಕ್ರಿಯಾತ್ಮಕ ಲೋಪವನ್ನು ಸರಿಪಡಿಸಿ, ಭಾರತೀಯ ನಾಗರಿಕ ಸುರಕ್ಷಾ ಸಂಹಿತೆಯ (ಬಿಎನ್‌ಎಸ್‌ಎಸ್) ಸೂಕ್ತ ನಿಯಮಗಳಡಿ ಹೊಸ ಪ್ರಮಾಣಪತ್ರದೊಂದಿಗೆ ಪ್ರಕರಣವನ್ನು ಮರುಪರಿಶೀಲಿಸುವಂತೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ನಿರ್ದೇಶಿಸಿದೆ. ಆದರೆ ಪ್ರಕರಣದ ಮೂಲ ಆರೋಪಗಳನ್ನು ಅಥವಾ ತನಿಖೆಯ ಅಗತ್ಯವನ್ನು ಸಂಪೂರ್ಣವಾಗಿ ವಜಾಗೊಳಿಸಿಲ್ಲ ಎಂದು ಅವರು ಹೇಳಿಕೆಯಲ್ಲಿ ತಿಳಿಸಿದ್ದಾರೆ.

**‘ವಿಚಾರಣೆ ಇನ್ನೂ ಬಾಕಿ’**

ಯಾರಿಗೂ ಆರೋಪಮುಕ್ತಿಯಾಗಿದೆ ಎಂದು ಹೇಳಲು ಸಾಧ್ಯವಿಲ್ಲ. ಹೊಸ ಕಾನೂನಿನಡಿ ಅಗತ್ಯ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಿ ಪ್ರಕರಣವನ್ನು ಮರುಪರಿಶೀಲಿಸುವಂತೆ ವಿಚಾರಣಾ ನ್ಯಾಯಾಲಯಕ್ಕೆ ಸೂಚಿಸಲಾಗಿದೆ. ಹೀಗಿರುವಾಗ ಕಾಂಗ್ರೆಸ್ ನಾಯಕರು ಯಾವ ಆಧಾರದ ಮೇಲೆ ಸಂಭ್ರಮಾಚರಣೆ ಮಾಡುತ್ತಿದ್ದಾರೆ ಎಂದು ರವಿಕುಮಾರ್ ಪ್ರಶ್ನಿಸಿದ್ದಾರೆ. ದೇವನಹಳ್ಳಿ ಏರೋಸ್ಪೇಸ್ ಪಾರ್ಕ್‌ನಲ್ಲಿ ಕೆಐಎಡಿಬಿಗೆ ಸೇರಿದ ಐದು ಎಕರೆ ಸಿಎ ನಿವೇಶನವನ್ನು ಕೌಟುಂಬಿಕ ಟ್ರಸ್ಟ್‌ಗೆ ಹಂಚಿಕೆ ಮಾಡಿರುವುದು ಅಕ್ರಮ ಎಂದು ಬಿಜೆಪಿ ಆರೋಪಿಸಿತ್ತು. ಪ್ರಕರಣ ಬೆಳಕಿಗೆ ಬಂದ ಬಳಿಕ ಜಮೀನನ್ನು ವಾಪಸ್ ನೀಡಿರುವುದೇ ಅಕ್ರಮದ ಗಂಭೀರತೆಯನ್ನು ತೋರಿಸುತ್ತದೆ ಎಂದು ಅವರು ಹೇಳಿದ್ದಾರೆ.

**‘ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಲಿ’**

ಪ್ರಕರಣದ ಮರುಪರಿಶೀಲನೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಅಧಿಕಾರದಲ್ಲಿದ್ದರೆ ಸಾಕ್ಷ್ಯಗಳ ಮೇಲೆ ಪ್ರಭಾವ ಬೀರುವ ಸಾಧ್ಯತೆ ಇದೆ. ಆದ್ದರಿಂದ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ರವಿಕುಮಾರ್ ಆಗ್ರಹಿಸಿದ್ದಾರೆ. ರಾಜ್ಯದ ಆಸ್ತಿಯನ್ನು ಕೌಟುಂಬಿಕ ಆಸ್ತಿಯಂತೆ ಬಳಸಿಕೊಳ್ಳಲಾಗಿದೆ ಎಂಬ ಆರೋಪದ ವಿರುದ್ಧ ಬಿಜೆಪಿ ಕೊನೆಯವರೆಗೂ ಹೋರಾಟ ನಡೆಸಲಿದೆ. ಪ್ರಕರಣ ತಾರ್ಕಿಕ ಅಂತ್ಯ ಕಾಣುವವರೆಗೆ ಕಾನೂನಾತ್ಮಕ ಹಾಗೂ ರಾಜಕೀಯ ಹೋರಾಟ ಮುಂದುವರಿಯಲಿದೆ ಎಂದು ಎನ್. ರವಿಕುಮಾರ್ ತಿಳಿಸಿದ್ದಾರೆ.

## ಅಪೆಕ್ಸ್ ಬ್ಯಾಂಕ್ ಚುನಾವಣೆ: ಡಿಕೆಶಿ ಮೇಲುಗೈ

● ವಿಕ್ರಮ ವಾಹಿನಿ | ಬೆಂಗಳೂರು

ರಾಜ್ಯ ಅಪೆಕ್ಸ್ ಬ್ಯಾಂಕ್ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಬಣ ಮೇಲುಗೈ ಸಾಧಿಸಿದೆ. ಶಿವಕುಮಾರ್ ಅವರ ಆಪ್ತ ಸಂಬಂಧಿ ಹಾಗೂ ವಿಧಾನಪರಿಷತ್ ಸದಸ್ಯ ಎಸ್. ರವಿ ಅಧ್ಯಕ್ಷರಾಗಿ, ರಾಯಚೂರು ಜಿಲ್ಲೆಯ ಶರಣಗೌಡ ಪಾಟೀಲ್ ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಇದರೊಂದಿಗೆ ಕಳೆದ ಒಂಬತ್ತು ತಿಂಗಳಿನಿಂದ ಅಧ್ಯಕ್ಷ ಸ್ಥಾನಕ್ಕಾಗಿ ನಡೆಯುತ್ತಿದ್ದ ಜಿದ್ದಾಜಿದ್ದಿಗೆ ತೆರೆ ಬಿದ್ದಿದೆ. ಮಾಜಿ ಸಚಿವ ಕೆ.ಎನ್. ರಾಜಣ್ಣ ಅಧ್ಯಕ್ಷ ಸ್ಥಾನಕ್ಕೆ ಪ್ರಬಲ ಆಕಾಂಕ್ಷಿಯಾಗಿದ್ದರು. ಬುಧವಾರ ನಡೆದ ಸಭೆಯಲ್ಲಿ ಅಧ್ಯಕ್ಷ ಸ್ಥಾನವನ್ನು ತಲಾ ಎರಡೂವರೆ ವರ್ಷ ಹಂಚಿಕೊಳ್ಳುವ ಬಗ್ಗೆ ಒಮ್ಮತ ಮೂಡಿತ್ತು ಎನ್ನಲಾಗಿತ್ತು. ಆದರೆ ಗುರುವಾರ ನಾಮಪತ್ರ ಸಲ್ಲಿಕೆ ವೇಳೆ ರವಿ ಮಾತ್ರ ನಾಮಪತ್ರ ಸಲ್ಲಿಸಿದ್ದು, ರಾಜಣ್ಣಗೆ ಅವಕಾಶ ಕೈತಪ್ಪಿದೆ.

ರಾಜಣ್ಣ ಅವರನ್ನು ಮನವೊಲಿಸಲು ಸಹಕಾರ ಸಚಿವ ಲಕ್ಷ್ಮಣ ಸವದಿ ಸೇರಿದಂತೆ ಕೆಲವರು ಪ್ರಯತ್ನಿಸಿದ್ದರು ಎನ್ನಲಾಗಿದೆ. ವಿಜಯಪುರದ ಮಾಜಿ ಸಚಿವ ಶಿವಾನಂದ ಪಾಟೀಲ್, ಶಾಸಕ ಶಿವರಾಮ ಹೆಬ್ಬಾರ್ ಹಾಗೂ ಬಿಜೆಪಿ ಬೆಳ್ಳಿ ಪ್ರಕಾಶ್ ಕೂಡ ಅಧ್ಯಕ್ಷ ಸ್ಥಾನಕ್ಕಾಗಿ ಲಾಬಿ ನಡೆಸಿದ್ದರು ಎನ್ನಲಾಗಿದೆ.

**ರಾಜಣ್ಣಗೆ ಮತ್ತೊಂದು ಹಿನ್ನಡೆ**

ಸಚಿವ ಸಂಪುಟದಿಂದ ವಜಾಗೊಂಡ ಬಳಿಕ ಅಪೆಕ್ಸ್ ಬ್ಯಾಂಕ್ ಅಧ್ಯಕ್ಷ ಸ್ಥಾನ ಪಡೆಯಲು ಪ್ರಯತ್ನಿಸಿದ್ದ ರಾಜಣ್ಣ ಅವರಿಗೂ ಇದೀಗ ಹಿನ್ನಡೆಯಾಗಿದೆ. ಈ ಬೆಳವಣಿಗೆಯು ಕಾಂಗ್ರೆಸ್‌ನ ಆಂತರಿಕ ರಾಜಕೀಯದಲ್ಲಿ ಡಿ.ಕೆ. ಶಿವಕುಮಾರ್ ಅವರ ಪ್ರಭಾವ ಹೆಚ್ಚಿರುವುದಕ್ಕೆ ಸಾಕ್ಷಿ ಎಂಬ ಚರ್ಚೆ ಆರಂಭವಾಗಿದೆ.

ಅಪೆಕ್ಸ್ ಬ್ಯಾಂಕ್‌ನಲ್ಲಿ ಒಟ್ಟು 21 ನಿರ್ದೇಶಕ ಸ್ಥಾನಗಳಿದ್ದು, ಹಲವು ಜಿಲ್ಲೆಗಳಲ್ಲಿ ಕಾಂಗ್ರೆಸ್ ಬೆಂಬಲಿತ ನಿರ್ದೇಶಕರಿದ್ದಾರೆ. ಚಿಕ್ಕಮಗಳೂರಿನಿಂದ ಬೆಳ್ಳಿ ಪ್ರಕಾಶ್, ಕೊಡಗಿನಿಂದ ಕೊಡಂದೇರಾ ಪಿ. ಗಣಪತಿ ಬಿಜೆಪಿ ಬೆಂಬಲಿತ ನಿರ್ದೇಶಕರಾಗಿದ್ದರೆ, ಹಾಸನದಿಂದ ಸೂರಜ್ ಜೆಡಿಎಸ್ ನಿರ್ದೇಶಕರಾಗಿದ್ದಾರೆ.

ಇದೇ ವೇಳೆ ಕೆಎಂಎಫ್ ಅಧ್ಯಕ್ಷ ಸ್ಥಾನಕ್ಕೂ ಪೈಪೋಟಿ ತೀವ್ರಗೊಂಡಿದ್ದು, ಡಿ.ಕೆ. ಶಿವಕುಮಾರ್ ಅವರ ಸಹೋದರ ಡಿ.ಕೆ. ಸುರೇಶ್ ಆಕಾಂಕ್ಷಿಯಾಗಿದ್ದಾರೆ ಎನ್ನಲಾಗಿದೆ. ಅಪೆಕ್ಸ್ ಬ್ಯಾಂಕ್ ಚುನಾವಣೆಯ ಫಲಿತಾಂಶ ಕೆಎಂಎಫ್ ಚುನಾವಣೆಯ ಮೇಲೂ ಪರಿಣಾಮ ಬೀರುವ ಸಾಧ್ಯತೆ ಇದೆ.

## 2028ರಲ್ಲಿ ವಾಲ್ಮೀಕಿ ನಿಗಮದ ಹಣ ವಾಪಸ್: ಜೋಶಿ

● ವಿಕ್ರಮ ವಾಹಿನಿ | ಬಳ್ಳಾರಿ

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಇರುವವರೆಗೆ ವಾಲ್ಮೀಕಿ ನಿಗಮದ ಭ್ರಷ್ಟಾಚಾರದ ಹಣ ವಾಪಸ್ ಬರುವುದಿಲ್ಲ. 2028ರಲ್ಲಿ ಬಿಜೆಪಿ ಅಧಿಕಾರಕ್ಕೆ ಬಂದ ಬಳಿಕ ಹಣ ತಿಂದವರಿಂದ ವಸೂಲಿ ಮಾಡಿ ಬಡವರಿಗೆ ತಲುಪಿಸಲಾಗುವುದು ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೇಳಿದರು.

ಬಿಜೆಪಿ ಪಾದಯಾತ್ರೆಯ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ವಾಲ್ಮೀಕಿ ನಿಗಮದ ಹಣದ ದುರ್ಬಳಕೆ ಹಾಗೂ ಎಸ್‌ಸಿಪಿ–ಟಿಎಸ್‌ಪಿ ಅನುದಾನದ ಲೂಟಿಯಾಗಿದೆ ಎಂದು ಆರೋಪಿಸಿದರು. ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳು ಸಮರ್ಪಕವಾಗಿ ಜಾರಿಯಾಗುತ್ತಿಲ್ಲ. ಗೃಹಲಕ್ಷ್ಮಿ, ವಿಧವಾ ವೇತನ, ಸಂಧ್ಯಾ ಸುರಕ್ಷಾ ಸೇರಿದಂತೆ ಹಲವು ಯೋಜನೆಗಳ ಹಣ ಫಲಾನುಭವಿಗಳಿಗೆ ಸರಿಯಾಗಿ ತಲುಪುತ್ತಿಲ್ಲ ಎಂದು ದೂರಿದರು.

ರಾಜ್ಯದಲ್ಲಿ ರಾಜಕೀಯ ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಿ ಸದೃಢ ಸರ್ಕಾರ ತರಲು ಬಿಜೆಪಿ ಹೋರಾಟ ಮುಂದುವರಿಸಲಿದೆ. ಮುಂದಿನ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ ಜನರು ತಕ್ಕ ಉತ್ತರ ನೀಡಲಿದ್ದಾರೆ ಎಂದು ಜೋಶಿ ಹೇಳಿದರು.

# ಬಳ್ಳಾರಿಯಲ್ಲಿ ‘ಬಳ್ಳಾರಿ ಚಲೋ’ ಪಾದಯಾತ್ರೆಗೆ ತೆರೆ

● ವಿಕ್ರಮ ವಾಹಿನಿ | ಬಳ್ಳಾರಿ

ಕಾಂಗ್ರೆಸ್ ಸರ್ಕಾರದ ವಿರುದ್ಧ ರಾಜ್ಯದ ಜನರಲ್ಲಿ ತೀವ್ರ ಆಕ್ರೋಶವಿದ್ದು, ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಮನೆಗೆ ಕಳುಹಿಸಲು ಜನರು ತೀರ್ಮಾನಿಸಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದರು.



ಲಿಂಗಸುಗೂರಿನಿಂದ ಆರಂಭವಾಗಿ ಒಂಬತ್ತು ವಿಧಾನಸಭಾ ಕ್ಷೇತ್ರಗಳ ಮೂಲಕ ಹತ್ತು ದಿನಗಳ ಕಾಲ ನಡೆದ ‘ಬಳ್ಳಾರಿ ಚಲೋ’ ಪಾದಯಾತ್ರೆ ಬಳ್ಳಾರಿಯಲ್ಲಿ ನಡೆದ ಬೃಹತ್ ಸಮಾವೇಶದೊಂದಿಗೆ ಗುರುವಾರ ಸಮಾರೋಪಗೊಂಡಿತು. ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ವಿಜಯೇಂದ್ರ, ಪಾದಯಾತ್ರೆಯ ವೇಳೆ ರೈತರು, ಕೂಲಿ ಕಾರ್ಮಿಕರು, ದಲಿತರು ಹಾಗೂ ಅಲೆಮಾರಿ ಸಮುದಾಯದವರು ತಮ್ಮ ಸಮಸ್ಯೆಗಳನ್ನು ನೇರವಾಗಿ ಹಂಚಿಕೊಂಡಿದ್ದಾರೆ ಎಂದರು.

**ರೂ 187 ಕೋಟಿ ವಾಪಸ್ ಪಡೆಯಲಿ:** ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದಿರುವ ರೂ 187 ಕೋಟಿ ಅವ್ಯವಹಾರದ ಹಣವನ್ನು ವಾಪಸ್ ಪಡೆದು ದಲಿತರ ಅಭಿವೃದ್ಧಿಗೆ ಬಳಸಬೇಕು. ಎಸ್‌ಸಿಪಿ–ಟಿಎಸ್‌ಪಿ ಅನುದಾನದ ದುರ್ಬಳಕೆ ನಿಲ್ಲಿಸಬೇಕು ಎಂದು ಅವರು ಆಗ್ರಹಿಸಿದರು.

ಬಿ.ಎಸ್. ಯಡಿಯೂರಪ್ಪ ನೇತೃತ್ವದ ಸರ್ಕಾರ ಎಸ್‌ಸಿ–ಎಸ್‌ಟಿ ಸಮುದಾಯದ ಮೀಸಲಾತಿ ಹೆಚ್ಚಳಕ್ಕೆ ಕ್ರಮ ಕೈಗೊಂಡಿತ್ತು. ಆದರೆ ಕಾಂಗ್ರೆಸ್ ಸರ್ಕಾರ ಅದಕ್ಕೆ ಕತ್ತರಿ ಹಾಕಿದೆ ಎಂದು ವಿಜಯೇಂದ್ರ ಆರೋಪಿಸಿದರು.

**ಪ್ರತಿ ಕ್ಷೇತ್ರಕ್ಕೆ ರೂ 200 ಕೋಟಿ ಅನುದಾನ:** ರಾಜ್ಯದ 224 ವಿಧಾನಸಭಾ ಕ್ಷೇತ್ರಗಳ ರಸ್ತೆ ಅಭಿವೃದ್ಧಿಗೆ ತಲಾ ರೂ 200 ಕೋಟಿ ಅನುದಾನ ನೀಡಬೇಕು. ರಾಜ್ಯ ಸರ್ಕಾರದ ಆಡಳಿತದ ಕುರಿತು ಶ್ವೇತಪತ್ರ ಹೊರಡಿಸಬೇಕು ಎಂದು ಮುಖ್ಯಮಂತ್ರಿ ಅವರಿಗೆ ಒತ್ತಾಯಿಸಿದರು. ಕಲ್ಯಾಣ ಕರ್ನಾಟಕದ ಅಭಿವೃದ್ಧಿಯನ್ನು ಸರ್ಕಾರ ನಿರ್ಲಕ್ಷಿಸುತ್ತಿದೆ. ಉತ್ತರ ಕರ್ನಾಟಕದ ರೈತರ ಸಮಸ್ಯೆ, ಬರ ಹಾಗೂ ನೀರಾವರಿ ವಿಚಾರಗಳಿಗೆ ಆದ್ಯತೆ ನೀಡುವ ಬದಲು ಬಿಡದಿ ಟೌನ್‌ಶಿಪ್ ಮತ್ತು ಸುರಂಗ ಯೋಜನೆಗಳ ಬಗ್ಗೆ ಹೆಚ್ಚಿನ ಗಮನ ಹರಿಸಲಾಗುತ್ತಿದೆ ಎಂದು ಟೀಕಿಸಿದರು.

**ರೈತರ ಹಿತ ಕಾಪಾಡಲಿ:** ರಾಜ್ಯದ ವಿವಿಧ ಬೆಳೆಗಾರರು ಸಂಕಷ್ಟದಲ್ಲಿದ್ದು, ಅಡಿಕೆ ಬೆಳೆಗಾರರ ಸಮಸ್ಯೆಗಳಿಗೂ ಸರ್ಕಾರ ಸ್ಪಂದಿಸಬೇಕು. ಗುಟ್ಕಾ ನಿಷೇಧದ ಯಾವುದೇ ಪ್ರಸ್ತಾವನೆ ಕೈಗೊಳ್ಳುವ ಮುನ್ನ ಅಡಿಕೆ ಬೆಳೆಗಾರರ ಹಿತವನ್ನು ಪರಿಗಣಿಸಬೇಕು ಎಂದು ವಿಜಯೇಂದ್ರ ಹೇಳಿದರು. ಬರ ಪರಿಹಾರ ವಿಚಾರದಲ್ಲಿ ರಾಜ್ಯ ಸರ್ಕಾರ ಕೇಂದ್ರದತ್ತ ಬೆರಳು ತೋರಿಸುವ ಬದಲು ರಾಜ್ಯದ ಜನರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಬೇಕು. ರೈತರನ್ನು ನಿರ್ಲಕ್ಷಿಸಿದ ಯಾವುದೇ ಸರ್ಕಾರವೂ ಉಳಿಯಲು ಸಾಧ್ಯವಿಲ್ಲ ಎಂದರು.

**‘ಡಿಕೆಶಿ ಸಿಎಂ ಆಗಬೇಕೇ?’:** ಡಾ.ಕೆ. ಶಿವಕುಮಾರ್ ಅವರು ಮುಖ್ಯಮಂತ್ರಿ ಆಗುವುದಕ್ಕೂ ಮುನ್ನ ತಾವು ಉದ್ಯಮಿಯಾಗಿದ್ದಾಗಿ ಹೇಳಿಕೊಂಡಿದ್ದರು. ಇಂತಹ ಮನೋಭಾವ ಹೊಂದಿರುವವರನ್ನು ಮುಖ್ಯಮಂತ್ರಿ ಕುರ್ಚಿಯಲ್ಲಿ ಕೂರಿಸಬೇಕೇ ಎಂದು ವಿಜಯೇಂದ್ರ ಪ್ರಶ್ನಿಸಿದರು.

**25 ವರ್ಷಗಳ ಮೋದಿ ಸೇವೆ ಮಾದರಿ**

ಪ್ರಧಾನಿ ನರೇಂದ್ರ ಮೋದಿ ಅವರು 2001ರಿಂದ ಮುಖ್ಯಮಂತ್ರಿಯಾಗಿ ಹಾಗೂ 2014ರಿಂದ ಪ್ರಧಾನಮಂತ್ರಿಯಾಗಿ ಸುಮಾರು 25 ವರ್ಷಗಳ ಕಾಲ ಸಾರ್ವಜನಿಕ ಸೇವೆಯಲ್ಲಿ ತೊಡಗಿದ್ದಾರೆ. ಅವರ ವಿರುದ್ಧ ಯಾವುದೇ ಭ್ರಷ್ಟಾಚಾರದ ಆರೋಪವಿಲ್ಲ ಎಂದು ವಿಜಯೇಂದ್ರ ಹೇಳಿದರು.

2047ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ರೂಪಿಸುವ ಸಂಕಲ್ಪದೊಂದಿಗೆ ಮೋದಿ ಕಾರ್ಯನಿರ್ವಹಿಸುತ್ತಿದ್ದಾರೆ. ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಅವರ ನೇತೃತ್ವದಲ್ಲಿ ಸೆ.17ರಿಂದ ಒಂದು ತಿಂಗಳ ಕಾಲ ‘ಸೇವಾ ಸಂಕಲ್ಪ’ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು. ಜನಸೇವೆ ಮತ್ತು ರಾಷ್ಟ್ರಸೇವೆಯ ಸಂಕಲ್ಪದೊಂದಿಗೆ ಬಿಜೆಪಿ ಮುಂದುವರಿಯಲಿದೆ ಎಂದು ಅವರು ಹೇಳಿದರು.

## ಕಾಂಗ್ರೆಸ್‌ನ್ನು ಮನೆಗೆ ಕಳಿಸಿ ಬಿಜೆಪಿಗೆ ಅವಕಾಶ ನೀಡಿ

ಕಾಂಗ್ರೆಸ್ ಸರ್ಕಾರವನ್ನು ಅಧಿಕಾರದಿಂದ ಕೆಳಗಿಳಿಸಿ, ರೈತರು, ಬಡವರು ಹಾಗೂ ಯುವಜನರ ಪರವಾದ ಸರ್ಕಾರ ರಚಿಸಲು ಬಿಜೆಪಿಗೆ ಅವಕಾಶ ನೀಡುವಂತೆ ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಜನರಲ್ಲಿ ಮನವಿ ಮಾಡಿದರು.



ಐತಿಹಾಸಿಕ ‘ಬಳ್ಳಾರಿ ಚಲೋ’ ಪಾದಯಾತ್ರೆಯ ಸಮಾರೋಪ ಸಮಾರಂಭದಲ್ಲಿ ಮಾತನಾಡಿದ ಅವರು, ಲಿಂಗಸುಗೂರಿನಿಂದ ಆರಂಭವಾಗಿ ಒಂಬತ್ತು ವಿಧಾನಸಭಾ ಕ್ಷೇತ್ರಗಳ ಮೂಲಕ ಸಾಗಿದ ಹತ್ತು ದಿನಗಳ ಪಾದಯಾತ್ರೆ ಅತ್ಯಂತ ಯಶಸ್ವಿಯಾಗಿದೆ. ಪಾದಯಾತ್ರೆ ನಮ್ಮ ಹೃದಯ ಮತ್ತು ಕಣ್ಣು ತೆರೆಸಿದ್ದು, ಜನರ ನೈಜ ಸಮಸ್ಯೆಗಳನ್ನು ಅರಿಯಲು ಅವಕಾಶ ಮಾಡಿಕೊಟ್ಟಿದೆ ಎಂದರು.

ಮುನ್ಸಿಪಲ್ ಮೈದಾನದಲ್ಲಿ ಬಿಜೆಪಿ ಕಾರ್ಯಕ್ರಮ ನಡೆಸಲು ಕಾಂಗ್ರೆಸ್ ಸರ್ಕಾರ ಅವಕಾಶ ನೀಡಿರಲಿಲ್ಲ. 15 ವರ್ಷಗಳ ಬಳಿಕ ನಮ್ಮ ಹೋರಾಟಕ್ಕೆ ಮಣಿದು ಅವಕಾಶ ನೀಡಿದೆ. ಆದರೆ ನಮ್ಮ ನಿಜವಾದ ಹೋರಾಟ ಇಂದಿನಿಂದ ಆರಂಭವಾಗಿದೆ. ರಾಜ್ಯದಲ್ಲಿ ಎನ್‌ಡಿಎ ಸರ್ಕಾರವನ್ನು ಅಧಿಕಾರಕ್ಕೆ ತರುವವರೆಗೆ ಹೋರಾಟ ಮುಂದುವರಿಯಲಿದೆ. ರಾಜ್ಯದ 224 ವಿಧಾನಸಭಾ ಕ್ಷೇತ್ರಗಳಲ್ಲೂ ಈ ಹೋರಾಟವನ್ನು ಮುಂದುವರಿಸಲಾಗುವುದು ಎಂದು ಹೇಳಿದರು.

**ಉತ್ತರ ಕರ್ನಾಟಕ ನಿರ್ಲಕ್ಷ್ಯ**

ಪಾದಯಾತ್ರೆಯುದ್ದಕ್ಕೂ ರೈತರು, ದೀನದಲಿತರು, ಕುರಿಗಾರರು ಹಾಗೂ ಯುವಜನರು ತಮ್ಮ ಸಂಕಷ್ಟಗಳನ್ನು ಹಂಚಿಕೊಂಡಿದ್ದಾರೆ. ವಿದ್ಯಾರ್ಥಿಗಳೊಂದಿಗೆ ಸಂವಾದ ಸೇರಿದಂತೆ ವಿವಿಧ ಕಾರ್ಯಕ್ರಮಗಳ ಮೂಲಕ ಜನರ ಸಮಸ್ಯೆಗಳನ್ನು ಅರಿಯಲಾಗಿದೆ. ಕಾಂಗ್ರೆಸ್ ಸರ್ಕಾರ ಉತ್ತರ ಕರ್ನಾಟಕ ಮತ್ತು ಕಲ್ಯಾಣ ಕರ್ನಾಟಕದ ಅಭಿವೃದ್ಧಿಯನ್ನು ನಿರ್ಲಕ್ಷಿಸಿ ದುರಾಡಳಿತ ನಡೆಸುತ್ತಿದೆ ಎಂದು ವಿಜಯೇಂದ್ರ ಆರೋಪಿಸಿದರು.

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸರ್ಕಾರದ 100 ದಿನಗಳ ಸಂಭ್ರಮದಲ್ಲಿದ್ದಾರೆ. ಆದರೆ ಬಿಜೆಪಿ ಹತ್ತು ದಿನಗಳಲ್ಲಿ ಜನರ ನಡುವೆ ತೆರಳಿ ಅವರ ಸಂಕಷ್ಟಗಳನ್ನು ಆಲಿಸಿದೆ. ಕಾಂಗ್ರೆಸ್ ಅಲ್ಪಸಂಖ್ಯಾತರನ್ನು ಖುಷಿಪಡಿಸಲು ‘ವಂದೇ ಮಾತರಂ’ ಗೀತೆಯನ್ನು ಮೊಟಕುಗೊಳಿಸುವ ನಿರ್ಧಾರ ಕೈಗೊಂಡಿದೆ ಎಂದು ಅವರು ಆರೋಪಿಸಿದರು.

**ರೂ 187 ಕೋಟಿ ವಾಪಸ್ ತರಲಿ**

ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ರೂ 187 ಕೋಟಿ ಅವ್ಯವಹಾರದ ಹಣವನ್ನು ವಾಪಸ್ ಪಡೆದು ದಲಿತರ ಅಭಿವೃದ್ಧಿಗೆ ಬಳಸಬೇಕು. ಭ್ರಷ್ಟಾಚಾರಕ್ಕೆ ಕಾರಣರಾದವರ ವಿರುದ್ಧ ಕ್ರಮ ಕೈಗೊಳ್ಳಬೇಕು. ಎಸ್‌ಸಿಪಿ–ಟಿಎಸ್‌ಪಿ ಯೋಜನೆಯ ರೂ 45 ಸಾವಿರ ಕೋಟಿ ಅನುದಾನವನ್ನು ಬೇರೆ ಇಲಾಖೆಗೆ ವರ್ಗಾಯಿಸಿರುವುದನ್ನು ಸರಿಪಡಿಸಿ, ಹಣವನ್ನು ಮೂಲ ಉದ್ದೇಶಕ್ಕೆ ಬಳಸಬೇಕು. ಎಸ್‌ಸಿ–ಎಸ್‌ಟಿ ಮೀಸಲಾತಿ ಹೆಚ್ಚಳ ಮಾಡಬೇಕು ಮತ್ತು ದುಡಿಯುವ ಯುವಜನರಿಗೆ ಉದ್ಯೋಗ ಕಲ್ಪಿಸಬೇಕು ಎಂದು ಆಗ್ರಹಿಸಿದರು.

**ನವಲಿ ಯೋಜನೆಗೆ ಆದ್ಯತೆ ನೀಡಿ**

ಸರ್ಕಾರ ಬಿಡದಿ ಟೌನ್‌ಶಿಪ್ ಹಾಗೂ ರೂ 50–55 ಸಾವಿರ ಕೋಟಿ ವೆಚ್ಚದ ಸುರಂಗ ರಸ್ತೆ ಯೋಜನೆಗಳಿಗೆ ಆದ್ಯತೆ ನೀಡುತ್ತಿದೆ. ಆದರೆ ರೈತರ ಪ್ರಮುಖ ಬೇಡಿಕೆಯಾದ ನವಲಿ ಸಮಾನಾಂತರ ಜಲಾಶಯ ಯೋಜನೆಗೆ ಗಮನಹರಿಸುತ್ತಿಲ್ಲ. ಗ್ರಾಮೀಣ ಪ್ರದೇಶಗಳ ರಸ್ತೆಗಳು ಹದಗೆಟ್ಟಿದ್ದು, ಶಾಸಕರ ಕ್ಷೇತ್ರಗಳ ಅಭಿವೃದ್ಧಿಗೆ ಅಗತ್ಯ ಅನುದಾನ ನೀಡುತ್ತಿಲ್ಲ ಎಂದು ಟೀಕಿಸಿದರು. ಪ್ರತಿ ವಿಧಾನಸಭಾ ಕ್ಷೇತ್ರದ ರಸ್ತೆ ಅಭಿವೃದ್ಧಿಗೆ ರೂ 200 ಕೋಟಿ ಅನುದಾನ ಬಿಡುಗಡೆ ಮಾಡಬೇಕು. ಅಡಿಕೆ ಬೆಳೆಗಾರರಿಗೆ ತೊಂದರೆಯಾಗುವ ಯಾವುದೇ ಕ್ರಮ ಕೈಗೊಳ್ಳಬಾರದು. ಗುಟ್ಕಾ ನಿಷೇಧದ ಹೆಸರಿನಲ್ಲಿ ಅಡಿಕೆ ಬೆಳೆಗಾರರಿಗೆ ಅನ್ಯಾಯ ಮಾಡಬಾರದು ಎಂದು ಒತ್ತಾಯಿಸಿದರು.

**ರೈತರನ್ನು ಕಡೆಗಣಿಸಿದರೆ ಸರ್ಕಾರ ಉಳಿಯದು**

ಬರಗಾಲದ ಸಂದರ್ಭದಲ್ಲಿ ಕಾಂಗ್ರೆಸ್ ಸರ್ಕಾರ ರೈತರ ನೆರವಿಗೆ ಸಮರ್ಪಕವಾಗಿ ಬರುತ್ತಿಲ್ಲ. ಯಡಿಯೂರಪ್ಪ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ರೈತರ ಸಂಕಷ್ಟಗಳಿಗೆ ಸ್ಪಂದಿಸಿದ್ದರು. ನೆರೆಯ ಮಹಾರಾಷ್ಟ್ರದ ಬಿಜೆಪಿ ಸರ್ಕಾರ ರೈತರ ಸಾಲ ಮನ್ನಾ ಮಾಡಿದೆ. ರೈತರನ್ನು ನಿರ್ಲಕ್ಷಿಸಿದರೆ ಅವರ ಆಕ್ರೋಶದಿಂದ ಯಾವುದೇ ಸರ್ಕಾರವೂ ಉಳಿಯಲು ಸಾಧ್ಯವಿಲ್ಲ ಎಂದು ಎಚ್ಚರಿಸಿದರು.


**‘ಜನರು ತೀರ್ಮಾನಿಸಿದ್ದಾರೆ’**

ಪ್ರಧಾನಿ ನರೇಂದ್ರ ಮೋದಿ ಅವರು 25 ವರ್ಷಗಳ ಸಾರ್ವಜನಿಕ ಸೇವಾ ಜೀವನ ಪೂರ್ಣಗೊಳಿಸಿ, 2047ರ ವೇಳೆಗೆ ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡುವ ಸಂಕಲ್ಪದೊಂದಿಗೆ ಕಾರ್ಯನಿರ್ವಹಿಸುತ್ತಿದ್ದಾರೆ. ಅವರ ಜನಸೇವೆಯನ್ನು ಮಾದರಿಯಾಗಿಟ್ಟುಕೊಂಡು ಪಕ್ಷದ ವತಿಯಿಂದ ‘ಸೇವಾ ಸಂಕಲ್ಪ’ ಅಭಿಯಾನ ನಡೆಸಲಾಗುವುದು ಎಂದರು.

ಪ್ರಧಾನಿ ಮೋದಿ ಅವರು ಜನಸೇವಕರಾಗಿ ಕಾರ್ಯನಿರ್ವಹಿಸುತ್ತಿದ್ದರೆ, ಡಿ.ಕೆ. ಶಿವಕುಮಾರ್ ಕಪಟ ನಾಟಕ ನಡೆಸುತ್ತಿದ್ದಾರೆ. ಕಾಂಗ್ರೆಸ್ ಸರ್ಕಾರವನ್ನು ಅಧಿಕಾರದಿಂದ ಇಳಿಸಲು ರಾಜ್ಯದ ಜನರು ಈಗಾಗಲೇ ತೀರ್ಮಾನಿಸಿದ್ದಾರೆ ಎಂದು ವಿಜಯೇಂದ್ರ ಹೇಳಿದರು.

ಸಮಾರಂಭದಲ್ಲಿ ಸಂಸದರು, ಮಾಜಿ ಸಚಿವರು, ಶಾಸಕರು, ವಿಧಾನಪರಿಷತ್ ಸದಸ್ಯರು, ರಾಜ್ಯ ಪದಾಧಿಕಾರಿಗಳು, ಜಿಲ್ಲಾ ಅಧ್ಯಕ್ಷರು, ಮಾಜಿ ಶಾಸಕರು, ವಿಧಾನಪರಿಷತ್ ಮಾಜಿ ಸದಸ್ಯರು ಹಾಗೂ ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

## ‘ನಿಗದಿತ ಅವಧಿಯಲ್ಲಿ ಎಸ್‌ಟಿಪಿ ಕಾಮಗಾರಿ ಪೂರ್ಣಗೊಳಿಸಿ’



● ವಿಕ್ರಮ ವಾಹಿನಿ | ಬೆಂಗಳೂರು

ನಗರದ ಪೀಣ್ಯ, ಜಿಗಣಿ ಸೇರಿದಂತೆ ಕೈಗಾರಿಕಾ ಪ್ರದೇಶಗಳಲ್ಲಿ ತ್ಯಾಜ್ಯ ನೀರು ಸಂಸ್ಕರಣಾ ಘಟಕಗಳ (ಎಸ್‌ಟಿಪಿ) ನಿರ್ಮಾಣ ಕಾಮಗಾರಿಗಳನ್ನು ನಿಗದಿತ ಅವಧಿಯೊಳಗೆ ಪೂರ್ಣಗೊಳಿಸುವಂತೆ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವ ರಾಮಲಿಂಗಾರೆಡ್ಡಿ ಅಧಿಕಾರಿಗಳಿಗೆ ಸೂಚಿಸಿದರು.

ಪರಿಸರ ಭವನದಲ್ಲಿ ನಡೆದ ಸಮಾಲೋಚನಾ ಸಭೆಯಲ್ಲಿ ಮಾತನಾಡಿದ ಅವರು, ನಗರದ ಎಲ್ಲ ಖಾಸಗಿ ಹಾಗೂ ಸರ್ಕಾರಿ ಎಸ್‌ಟಿಪಿಗಳು ಮಾಲಿನ್ಯ ನಿಯಂತ್ರಣ ಮಂಡಳಿ ನಿಗದಿಪಡಿಸಿರುವ ಮಾನದಂಡದಂತೆ ಕಾರ್ಯನಿರ್ವಹಿಸುತ್ತಿವೆಯೇ ಎಂಬುದನ್ನು ಪರಿಶೀಲಿಸಬೇಕು. ರಾಜಕಾಲುವೆಗಳಿಗೆ ಹರಿಯುವ ಒಳಚರಂಡಿ ನೀರನ್ನು ಎಸ್‌ಟಿಪಿಗಳಿಗೆ ತಿರುಗಿಸಿ, ಹಾನಿಗೊಳಗಾದ ಕೊಳವೆ ಮಾರ್ಗ ಹಾಗೂ ಮ್ಯಾನ್‌ಹೋಲ್‌ಗಳನ್ನು ದುರಸ್ತಿ ಮಾಡಬೇಕು ಎಂದರು.

ಬೆಂಗಳೂರಿಗೆ ಪ್ರತಿದಿನ 2,825 ಎಂಎಲ್‌ಡಿ ಕಾವೇರಿ ನೀರು ಪೂರೈಕೆಯಾಗುತ್ತಿದ್ದು, 2,580 ಎಂಎಲ್‌ಡಿ ಒಳಚರಂಡಿ ನೀರು ಉತ್ಪತ್ತಿಯಾಗುತ್ತಿದೆ. ಪ್ರಸ್ತುತ ಎಸ್‌ಟಿಪಿಗಳ ಸಂಸ್ಕರಣಾ ಸಾಮರ್ಥ್ಯ 1,364.5 ಎಂಎಲ್‌ಡಿ ಇದ್ದು, 1,215.5 ಎಂಎಲ್‌ಡಿ ಕೊರತೆ ಇದೆ. ನಿರ್ಮಾಣ ಹಂತದಲ್ಲಿರುವ 42 ಎಸ್‌ಟಿಪಿಗಳಿಂದ 1,147 ಎಂಎಲ್‌ಡಿ ಸಾಮರ್ಥ್ಯ ಹೆಚ್ಚಳವಾಗಲಿದೆ ಎಂದು ಸಚಿವರು ತಿಳಿಸಿದರು.

2026ರಿಂದ 2029ರ ಅವಧಿಯಲ್ಲಿ ಹಂತ ಹಂತವಾಗಿ 42 ಹೊಸ ಎಸ್‌ಟಿಪಿಗಳನ್ನು ಪೂರ್ಣಗೊಳಿಸುವ ಗುರಿ ಹೊಂದಲಾಗಿದೆ. ಪರಿಸರ ಮಾನದಂಡ ಪಾಲಿಸದ ಎಸ್‌ಟಿಪಿಗಳನ್ನು 30 ದಿನಗಳೊಳಗೆ ನಿಯಮಾನುಸಾರ ಕಾರ್ಯನಿರ್ವಹಿಸುವಂತೆ ಮಾಡಬೇಕು.

ಸಂಸ್ಕರಣೆಯಾಗದ ಒಳಚರಂಡಿ ನೀರು ಜಲಮೂಲಗಳಿಗೆ ಸೇರುವುದನ್ನು ತಡೆಯುವುದರ ಜತೆಗೆ, ನದಿ ಪಾತ್ರದ ಕೈಗಾರಿಕೆಗಳಿಂದಾಗುವ ಮಾಲಿನ್ಯ ನಿಯಂತ್ರಣಕ್ಕೂ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ರಾಮಲಿಂಗಾರೆಡ್ಡಿ ಹೇಳಿದರು.

www.VIKRAMAVAHINI.com

|| ಕನ್ನಡ ದಿನಪತ್ರಿಕೆ ||

PRGI NO: KARKAN/2018/78481

ವಿಕ್ರಮ ವಾಹಿನಿ

ಸತ್ಯದ ಹಾದಿ । ಜನಪರ ದನಿ । ರಾಷ್ಟ್ರೀಯ ದೃಷ್ಟಿ

## ಅಪರೂಪದ ಕ್ಷಣಗಳಿಗೆ ಸಾಕ್ಷಿಯಾದ 100 ದಿನಗಳ ದೃಢ ಕರ್ನಾಟಕದ ಸಂಕಲ್ಪ ಸಮಾರಂಭ

● ವಿಕ್ರಮ ವಾಹಿನಿ । ಬೆಂಗಳೂರು

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಸರ್ಕಾರ ನೂರು ದಿನಗಳನ್ನು ಪೂರೈಸಿದ ಹಿನ್ನೆಲೆಯಲ್ಲಿ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್ ನಲ್ಲಿ ಗುರುವಾರ ಆಯೋಜಿಸಲಾಗಿದ್ದ 'ದೃಢ ಕರ್ನಾಟಕದ ಸಂಕಲ್ಪ' ಕಾರ್ಯಕ್ರಮ ಅಪರೂಪದ ಕ್ಷಣಗಳಿಗೆ ಸಾಕ್ಷಿಯಾಯಿತು.

ಇದು ಕೇವಲ ನೂರುದಿನಗಳ ಸಂಭ್ರಮವಾಗಿರಲಿಲ್ಲ. ಈ ಅವಧಿಯಲ್ಲಿ ಸರ್ಕಾರ ಇಟ್ಟ ಜನಪರ ಹೆಜ್ಜೆ ಗುರುತುಗಳ ಪುನರ್ ಅವಲೋಕನವಾಗಿತ್ತು. ಸದೃಢ ಕರ್ನಾಟಕ ನಿರ್ಮಾಣದ ಸಂಕಲ್ಪವಾಗಿತ್ತು.

ಸಿಎಂ ಡಿಕೆ ಶಿವಕುಮಾರ್ ಅವರು ವೇದಿಕೆ ಏರುವ ಮುನ್ನ, ಸಮಾರಂಭಕ್ಕೆ ಆಗಮಿಸಿದ್ದ ವಿವಿಧ ಯೋಜನೆಗಳ ಫಲಾನುಭವಿಗಳ ಬಳಿಗೆ ತಾವೇ ತೆರಳಿ ಉಭಯ ಕುಶಲೋಪರಿ ವಿಚಾರಿಸಿ ಎಲ್ಲರ ಮನ ಗೆದ್ದರು.

ಸಿಎಂ ಬ್ಯಾಂಕ್ವೆಟ್ ಹಾಲ್ ಮುಂಭಾಗದಲ್ಲಿ ತೆರೆದಿದ್ದ ಅಕ್ಕಾ ಕೆಫೆ, ಅರಿವು ಕೇಂದ್ರಗಳಿಗೆ ಭೇಟಿ ಕೊಟ್ಟು, ಅಲ್ಲಿನ ಸಿಬ್ಬಂದಿಗಳ ಜೊತೆಗೆ ಮಾತುಕತೆ ನಡೆಸಿದರು.

**ಫಲಾನುಭವಿಗಳಿಂದಲೇ ಉದ್ಘಾಟನೆ**

ನಂತರ ವೇದಿಕೆ ಮುಂಭಾಗದಲ್ಲಿ ಕುಳಿತಿದ್ದ ರಾಜ್ಯದ ಎಲ್ಲಾ ಸಚಿವ ಸಂಪುಟ ಸಚಿವರು, ಶಾಸಕ ಮಿತ್ರರ ಬಳಿಗೆ ತಾವೇ ಖುದ್ದಾಗಿ ಹೋಗಿ ಪ್ರತಿಯೊಬ್ಬರಿಗೂ ಹಸ್ತಲಾಘವ ನೀಡುವ ಮೂಲಕ ಸ್ವಾಗತಕೋರಿದ್ದು ಇಡೀ ಸಮಾರಂಭಕ್ಕೆ ವಿಶೇಷ ಮೆರುಗು ನೀಡಿತು.

ಕಾರ್ಯಕ್ರಮ ಉದ್ಘಾಟನೆ ವೇಳೆ ಗ್ಯಾರಂಟಿ ಫಲಾನುಭವಿಗಳು, ರೈತರು, ವಿದ್ಯಾರ್ಥಿಗಳು, ಪೌರಕಾರ್ಮಿಕರನ್ನು ವೇದಿಕೆಗೆ ಕರೆದು ಅವರೊಂದಿಗೆ ದೀಪಬೆಳಗಿಸಿದರು. ಗೃಹಲಕ್ಷ್ಮೀ ಹಣವನ್ನು ಬಳಸಿ ಸ್ವ ಉದ್ಯೋಗ ಆರಂಭಿಸಿದ ಮಹಿಳೆಯರು ತಾವು ತಯಾರಿಸಿದ್ದ ಖಾದ್ಯವನ್ನು ಸಮಾರಂಭಕ್ಕೆ ತೆಗೆದುಕೊಂಡು ಬಂದಿದ್ದರು. ಮುಖ್ಯಮಂತ್ರಿಗಳು, ಸಚಿವರು, ಶಾಸಕರೆಲ್ಲಾ ಗೃಹಲಕ್ಷ್ಮಿ ಫಲಾನುಭವಿಗಳು ತಯಾರಿಸಿದ ಖಾದ್ಯವನ್ನು ಸವಿಯುವಂತೆ ಮನವಿ ಮಾಡಿದರು.



ಸರ್ಕಾರದ ನೂರುದಿನಗಳ ನೆನಪಿಗಾಗಿ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರು, ಉಪ ಮುಖ್ಯಮಂತ್ರಿ ಡಾ. ಜಿ ಪರಮೇಶ್ವರ, ನಿಕಟಪೂರ್ವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸಮಕ್ಷಮದಲ್ಲಿ ನೂತನ ಜನಪರ ಯೋಜನೆಗಳನ್ನು ಘೋಷಿಸಿ ಅಭಿವೃದ್ಧಿಯ ಮೈಲಿಗಲ್ಲು ನೆಟ್ಟರು.

ಸೇವಾಒನ್, ಮುಖ್ಯಮಂತ್ರಿ ರೈತ ಚೈತನ್ಯ ಯೋಜನೆ, ಶಾಲೆಗಳಿಗೆ ಸಿ ಎಸ್ ಆರ್ ಪೋರ್ಟಲ್, ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್, ಬಿಎಂಟಿಸಿ 2.0 ಆಪ್, ಒನ್ ಕರ್ನಾಟಕ ಮೊಬಿಲಿಟಿ ಆಪ್ ಅವತಾರ್ 2.0, ಮಾಲಿನ್ಯ ನಿಯಂತ್ರಣ ಸಾಧನ (Retrofit emission Control Device RECD) ಅಳವಡಿಕೆ ಯೋಜನೆಗಳಿಗೆ ಸಿಎಂ ಚಾಲನೆ ನೀಡಿ ರಾಜ್ಯದ ಜನರಿಗೆ ಉಡುಗೊರೆ ನೀಡಿದರು.

ರಾಜ್ಯದಲ್ಲಿರುವ ಬಡವರು ಮುಖ್ಯವಾಗಿ ಗ್ರಾಮೀಣ ಭಾಗದ ನಿವೇಶನ ರಹಿತರಿಗಾಗಿ ಸೂರು ಒದಗಿಸಲು 5 ಲಕ್ಷ ನಿವೇಶನ ಹಂಚಿಕೆ ಯೋಜನೆ ಹಾಗೂ ಸೈನಿಕ ಸಮ್ಮಾನ ಯೋಜನೆ ಆದೇಶಕ್ಕೆ ಸಿಎಂ ಸಹಿ ಮಾಡಿದರು. ಈ ಐತಿಹಾಸಿಕ ಕ್ಷಣಗಳಿಗೆ ಇಡೀ ಸಮಾರಂಭ ಸಾಕ್ಷಿಯಾಯಿತು.

**ಫಲಾನುಭವಿಗಳೊಂದಿಗೆ ಭೋಜನ ಸವಿದ ಸಿಎಂ**

ಸಮಾರಂಭ ಪೂರ್ಣಗೊಂಡ ನಂತರ ರಾಜ್ಯದ ವಿವಿಧೆಡೆಯಿಂದ ಆಗಮಿಸಿದ್ದ ಸರ್ಕಾರದ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳೊಂದಿಗೆ ಕುಳಿತು ಮುಖ್ಯಮಂತ್ರಿಗಳು ಬಾಳೆ ಎಲೆ ಭೋಜನ ಸೇವಿಸಿದರು. ಈ ವೇಳೆ, ಪಕ್ಕದಲ್ಲಿ ಕುಳಿತ ರೈತನೊಂದಿಗೆ, 'ಯಾವೂರು, ಏನು ಬೇಳೆ ಹಾಕಿದೆಯಾ, ಮಳೆ ಏನಾದ್ರು ಬಿತ್ತಾ, ಏನು ಭಯ ಬೀಳಬೇಡ, ನಮ್ಮ ಸರ್ಕಾರ ಇದೆ ' ಎಂದು ಊಟದ ಜೊತೆ ಅಭಯ ತುಂಬಿದರು. ನೂರು ದಿನಗಳ ಸಮಾರಂಭದಲ್ಲಿ ಪ್ರಗತಿಯ ರಥ ಎಳೆಯುವ ಒಕ್ಕೊರಲಿನ ಸಂಕಲ್ಪ ಮಾಡಲಾಯಿತು.

> **ನೂರು ದಿನಗಳ ಪೂರೈಸಿದ ಹಿನ್ನೆಲೆಯಲ್ಲಿ ಆಯೋಜಿಸಿದ್ದ 'ದೃಢ ಕರ್ನಾಟಕದ ಸಂಕಲ್ಪ' ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಫಲಾನುಭವಿಗಳು, ರೈತರು, ವಿದ್ಯಾರ್ಥಿಗಳು ಹಾಗೂ ಪೌರಕಾರ್ಮಿಕರೊಂದಿಗೆ ಬೆರೆತು, ಹಲವು ಜನಪರ ಯೋಜನೆಗಳಿಗೆ ಚಾಲನೆ ನೀಡಿದರು. 5 ಲಕ್ಷ ನಿವೇಶನ ಹಂಚಿಕೆ ಸೇರಿದಂತೆ ನೂತನ ಯೋಜನೆಗಳನ್ನು ಘೋಷಿಸಿ, ಸದೃಢ ಕರ್ನಾಟಕ ನಿರ್ಮಾಣದ ಸಂಕಲ್ಪ ತೊಡಲಾಯಿತು.**

## ಸರ್ಕಾರದ ನಿಲುವು ವ್ಯಕ್ತಪಡಿಸಲು ಅಷ್ಟ ದಿಕ್ಪಾಲಕ ಸಚಿವರ ನೇಮಕ

● ವಿಕ್ರಮ ವಾಹಿನಿ । ಬೆಂಗಳೂರು

ಸರ್ಕಾರದ ನಿಲುವುಗಳನ್ನು ವ್ಯಕ್ತಪಡಿಸಲು ಕೇವಲ ಮುಖ್ಯಮಂತ್ರಿಗಳು ಮತ್ತು ಉಪಮುಖ್ಯಮಂತ್ರಿಗಳು ಮಾತ್ರವೇ ಬಾಧ್ಯಸ್ಥರಲ್ಲ. ಅಷ್ಟ ದಿಕ್ಪಾಲಕ ಸಚಿವರೂ ಸರ್ಕಾರದ ನಿಲುವುಗಳನ್ನು ವ್ಯಕ್ತಪಡಿಸಬಹುದು ಎಂದು ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ಸಂದೀಪ್ ಬಿ.ಕೆ., ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಮಾಧ್ಯಮ ಸೇರಿದಂತೆ ವಿವಿಧ ವೇದಿಕೆಗಳಲ್ಲಿ ಸರ್ಕಾರದ ನಿಲುವನ್ನು ವ್ಯಕ್ತಪಡಿಸುವ ಹಾಗೂ ಸರ್ಕಾರದ ಪರವಾಗಿ ಸ್ಪಷ್ಟೀಕರಣ ನೀಡುವ ಕಾರ್ಯ ನಿರ್ವಹಿಸಲು ಕೆಲವು ಸಚಿವರುಗಳನ್ನು ಅಧಿಕೃತ ವಕ್ತಾರರನ್ನಾಗಿ ನೇಮಿಸಲು ಮುಖ್ಯಮಂತ್ರಿಗಳು ಸೂಚಿಸಿದ್ದಾರೆ. ಹೀಗಾಗಿ ಉಪಮುಖ್ಯಮಂತ್ರಿಗಳು, ಕಂದಾಯ ಮತ್ತು ಕ್ರೀಡಾ ಸಚಿವರಾದ ಡಾ.ಜಿ. ಪರಮೇಶ್ವರ್, ಗ್ರೇಟರ್ ಬೆಂಗಳೂರು ಅಭಿವೃದ್ಧಿ ಹಾಗೂ ಸಂಸದೀಯ ವ್ಯವಹಾರಗಳ ಸಚಿವರಾದ ಕೃಷ್ಣ ಭೈರೇಗೌಡ, ಗೃಹ, ಐಟಿಬಿಟಿ ಮತ್ತು ಇ-ಆಡಳಿತ ಸಚಿವರಾದ ಪ್ರಿಯಾಂಕ್ ಖರ್ಗೆ, ಕಾರ್ಮಿಕ ಮತ್ತು ಉದ್ಯೋಗ ಸಚಿವರಾದ ಸಂತೋಷ್ ಲಾಡ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ಅಲ್ಪಸಂಖ್ಯಾತರ ಕಲ್ಯಾಣ, ವಕ್ಫ್ ಹಾಗೂ ಹಜ್ ಸಚಿವರಾದ ಯು.ಟಿ.ಖಾದರ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾದ ಈಶ್ವರ್ ಖಂಡ್ರೆ, ಪೌರಾಡಳಿತ ಸಚಿವರಾದ ಹೆಚ್.ಸಿ.ಬಾಲಕೃಷ್ಣ ಮತ್ತು ಸಹಕಾರ ಸಚಿವರಾದ ಲಕ್ಷ್ಮಣ್ ಸವದಿ ಅವರು ಇನ್ನುಮುಂದೆ ಸರ್ಕಾರದ ನಿಲುವುಗಳನ್ನು ವ್ಯಕ್ತಪಡಿಸಲಿದ್ದಾರೆ.

ಈ ಅಷ್ಟ ದಿಕ್ಪಾಲಕ ಸಚಿವರುಗಳು ಮಾಧ್ಯಮ ಸೇರಿದಂತೆ ವಿವಿಧ ವೇದಿಕೆಗಳಲ್ಲಿ ಸರ್ಕಾರದ ನಿಲುವನ್ನು ವ್ಯಕ್ತಪಡಿಸುವ ಹಾಗೂ ಸರ್ಕಾರದ ಪರವಾಗಿ ಸ್ಪಷ್ಟೀಕರಣ ನೀಡುವ ಕಾರ್ಯ ನಿರ್ವಹಿಸಲು ಅಧಿಕೃತ ವಕ್ತಾರರಾಗಿ ನಿಯೋಜನೆಗೊಂಡಿದ್ದಾರೆ.

## ರೇಣುಕಾಸ್ವಾಮಿ ಕೊಲೆ: ದರ್ಶನ್ ಖುದ್ದು ಹಾಜರಿಗೆ ಬುಧವಾರ ನಿರ್ಧಾರ



● ವಿಕ್ರಮ ವಾಹಿನಿ । ಬೆಂಗಳೂರು

ರೇಣುಕಾಸ್ವಾಮಿ ಕೊಲೆ ಪ್ರಕರಣದ ವಿಚಾರಣೆ ವೇಳೆ ಖುದ್ದು ಹಾಜರಾಗಲು ಅನುಮತಿ ಕೋರಿ ನಟ ದರ್ಶನ್ ಸಲ್ಲಿಸಿರುವ ಅರ್ಜಿ ಕುರಿತು ಹೈಕೋರ್ಟ್ ಬುಧವಾರ ನಿರ್ಧಾರ ಪ್ರಕಟಿಸುವ ಸಾಧ್ಯತೆ ಇದೆ.

ದರ್ಶನ್ ಅವರ ಪತ್ನಿ ವಿಜಯಲಕ್ಷ್ಮೀ ಸಲ್ಲಿಸಿರುವ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ವಿ. ಶ್ರೀಶಾನಂದ ಅವರ ಪೀಠ, ಪಾಟಿಸವಾಲು ಪ್ರಕ್ರಿಯೆಯಲ್ಲಿ ಭಾಗವಹಿಸಲು ದರ್ಶನ್ ಅವರಿಗೆ ಮೂರು ದಿನಗಳ ಖುದ್ದು ಹಾಜರಿಗೆ ಅವಕಾಶ ಕಲ್ಪಿಸುವ ಕುರಿತು ವಿಚಾರಣೆ ನಡೆಸಿತು. ವಿಚಾರಣೆಗೆ ಯಾವ ದಿನ ಹಾಜರಾಗಬೇಕು ಎಂಬುದನ್ನು ಉಭಯ ಪಕ್ಷಗಳು ವಿಚಾರಣಾ ನ್ಯಾಯಾಧೀಶರೊಂದಿಗೆ ಚರ್ಚಿಸಿ ತಿಳಿಸುವಂತೆ ಸೂಚಿಸಿದ ಪೀಠ, ವಿಚಾರಣೆಯನ್ನು ಬುಧವಾರ ಮಧ್ಯಾಹ್ನ 2.30ಕ್ಕೆ ಮುಂದೂಡಿತು.

ವಿಡಿಯೋ ಕಾನ್ಫರೆನ್ಸ್ ಮೂಲಕ ವಿಚಾರಣೆ ನಡೆಸುವಾಗ ತಾಂತ್ರಿಕ ತೊಂದರೆ ಎದುರಾಗುತ್ತಿದ್ದು, ಸಾಕ್ಷಿಗಳ ವಿಚಾರಣೆ ಹಾಗೂ ಪಾಟಿಸವಾಲಿನ ಸಂದರ್ಭದಲ್ಲಿ ವಕೀಲರಿಗೆ ಸೂಕ್ತ ಸೂಚನೆ ನೀಡಲು ದರ್ಶನ್ ಅವರ ಖುದ್ದು ಹಾಜರಿ ಅಗತ್ಯವಾಗಿದೆ ಎಂದು ಅವರ ಪರ ವಕೀಲರು ವಾದಿಸಿದರು.

ಅಗತ್ಯವಿದ್ದರೆ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಲ್ಲೇ ವಿಚಾರಣೆಗೆ ವ್ಯವಸ್ಥೆ ಮಾಡುವ ಅಥವಾ ಮುಚ್ಚಿದ ಕೊಠಡಿಯಲ್ಲಿ ವಿಚಾರಣೆ ನಡೆಸುವ ಸಾಧ್ಯತೆಯನ್ನೂ ಪೀಠ ಪ್ರಸ್ತಾಪಿಸಿತು. ಆರೋಪಿಯ ರಕ್ಷಣೆ ನ್ಯಾಯಾಲಯದ ಹೊಣೆಯಾಗಿದ್ದು, ಪಾಟಿಸವಾಲಿನ ಸಂದರ್ಭದಲ್ಲಿ ಖುದ್ದು ಹಾಜರಾಗಲು ಅವಕಾಶ ನೀಡುವ ಬಗ್ಗೆ ಪರಿಗಣಿಸಲಾಗುವುದು ಎಂದು ನ್ಯಾಯಪೀಠ ತಿಳಿಸಿತು.

ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಒಟ್ಟು 17 ಮಂದಿ ಆರೋಪಿಗಳ ವಿರುದ್ಧ ಪೊಲೀಸರು ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದು, ಪ್ರಕರಣದ ವಿಚಾರಣೆ 2025ರ ಡಿಸೆಂಬರ್‌ನಲ್ಲಿ ಆರಂಭವಾಗಿದೆ. ಇದುವರೆಗೆ ಪ್ರಾಸಿಕ್ಯೂಷನ್ ಪರ 24 ಸಾಕ್ಷಿಗಳ ವಿಚಾರಣೆ ನಡೆದಿದೆ.

ಈ ನಡುವೆ, ಪ್ರಕರಣದ ವಿಚಾರಣೆಯಲ್ಲಿ ದರ್ಶನ್ ಪರ ವಕೀಲರು ಸಾಕ್ಷಿಗಳ ಪಾಟಿಸವಾಲು ಸಂದರ್ಭದಲ್ಲಿ ಆರೋಪಿಯೊಂದಿಗೆ ನೇರ ಸಮಾಲೋಚನೆ ಅಗತ್ಯವಿದೆ ಎಂದು ಒತ್ತಿಹೇಳಿದ್ದಾರೆ.

## "ಎಸ್‌ಐಆರ್: ಗೌರಮ್ಮಗೆ ನೋಟಿಸ್ ನೀಡಿಲ್ಲ"

● ವಿಕ್ರಮ ವಾಹಿನಿ । ಬೆಂಗಳೂರು

ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ತಾಯಿ ಗೌರಮ್ಮ ಅವರಿಗೆ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಡಿ ನೋಟಿಸ್ ನೀಡಲಾಗಿದೆ ಎಂಬುದು ಸತ್ಯಕ್ಕೆ ದೂರವಾದದ್ದು ಎಂದು ಬೆಂಗಳೂರು ದಕ್ಷಿಣ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಯಶವಂತ್ ವಿ. ಗುರುಕಾರ್ ಸ್ಪಷ್ಟಪಡಿಸಿದ್ದಾರೆ.

ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು, ಹೆಸರಿನ ಸಾಮ್ಯತೆಯಿಂದಾಗಿ ಈ ಗೊಂದಲ ಉಂಟಾಗಿದೆ ಎಂದು ತಿಳಿಸಿದ್ದಾರೆ.

ಕನಕಪುರ ವಿಧಾನಸಭಾ ಕ್ಷೇತ್ರದ ಮತಗಟ್ಟೆ ಸಂಖ್ಯೆ 240ರ ಮತದಾರರ ಪಟ್ಟಿಯಲ್ಲಿ 'ಗೌರಮ್ಮ' ಹೆಸರಿನ ಮೂವರು ಮತದಾರರಿದ್ದಾರೆ. ಈ ಪೈಕಿ ಕ್ರಮ ಸಂಖ್ಯೆ 1ರಲ್ಲಿ ದಾಖಲಾಗಿರುವ 'ಗೌರಮ್ಮ ಕೋಂ ಕೆಂಪೇಗೌಡ' ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ತಾಯಿಯಾಗಿದ್ದಾರೆ. ಅವರಿಗೆ ಮತದಾರರ ಪಟ್ಟಿಯ ಪರಿಷ್ಕರಣೆಗೆ ಸಂಬಂಧಿಸಿದಂತೆ ಯಾವುದೇ ನೋಟಿಸ್ ನೀಡಲಾಗಿಲ್ಲ ಎಂದು ಜಿಲ್ಲಾಧಿಕಾರಿ ಸ್ಪಷ್ಟಪಡಿಸಿದ್ದಾರೆ.



ಅದೇ ಹೆಸರಿನ ಕ್ರಮ ಸಂಖ್ಯೆ 2 ಮತ್ತು 3ರಲ್ಲಿ ದಾಖಲಾಗಿರುವ ಇಬ್ಬರು ಮತದಾರರಿಗೆ ಮಾತ್ರ ನೋಟಿಸ್ ನೀಡಲಾಗಿದೆ.

ಇದನ್ನು ತಪ್ಪಾಗಿ ಅರ್ಥೈಸಿಕೊಂಡು ಕೆಲವು ಮಾಧ್ಯಮಗಳಲ್ಲಿ ಮುಖ್ಯಮಂತ್ರಿ ಅವರ ತಾಯಿ ಗೌರಮ್ಮ ಅವರಿಗೆ ನೋಟಿಸ್ ನೀಡಲಾಗಿದೆ ಎಂಬ ಸುದ್ದಿ ಪ್ರಸಾರವಾಗಿದೆ. ವಾಸ್ತವವಾಗಿ ಮುಖ್ಯಮಂತ್ರಿ ಅವರ ತಾಯಿಗೆ ಯಾವುದೇ ನೋಟಿಸ್ ಜಾರಿಯಾಗಿಲ್ಲ ಎಂದು ಯಶವಂತ್ ವಿ. ಗುರುಕಾರ್ ತಿಳಿಸಿದ್ದಾರೆ.

## ಮೊದಲ ವಿವಾಹಕ್ಕೆ ತಡೆ ಇದ್ದಾಗ 2ನೇ ಪತ್ನಿಗೆ ಜೀವನಾಂಶವಿಲ್ಲ!

● ವಿಕ್ರಮ ವಾಹಿನಿ । ಬೆಂಗಳೂರು

ಮೊದಲ ಪತ್ನಿಯೊಂದಿಗಿನ ವಿವಾಹ ವಿಚ್ಛೇದನಕ್ಕೆ ನೀಡಲಾಗಿದ್ದ ಆದೇಶಕ್ಕೆ ಹೈಕೋರ್ಟ್ ತಡೆಯಾಜ್ಞೆ ಜಾರಿಯಲ್ಲಿರುವ ಸಂದರ್ಭದಲ್ಲಿ, ಆ ವ್ಯಕ್ತಿಯನ್ನು ಮದುವೆಯಾದ ಎರಡನೇ ಪತ್ನಿಗೆ ಕಾನೂನುಬದ್ಧ ಪತ್ನಿಯ ಸ್ಥಾನಮಾನ ನೀಡಲಾಗದು. ಹೀಗಾಗಿ ಆಕೆಗೆ ಪತಿಯಿಂದ ಜೀವನಾಂಶ ನೀಡುವಂತೆ ಆದೇಶಿಸಲು ಸಾಧ್ಯವಿಲ್ಲ ಎಂದು ಹೈಕೋರ್ಟ್‌ನ ಧಾರವಾಡ ಪೀಠ ಸ್ಪಷ್ಟಪಡಿಸಿದೆ.

ಎರಡನೇ ಪತ್ನಿಗೆ ಜೀವನಾಂಶ ನೀಡುವಂತೆ ಕೋರಿ ಸಲ್ಲಿಸಿದ್ದ ಅರ್ಜಿಯನ್ನು ವಜಾಗೊಳಿಸಿದ್ದ ಬೆಳಗಾವಿಯ ಕೌಟುಂಬಿಕ ನ್ಯಾಯಾಲಯದ ಆದೇಶವನ್ನು ಪ್ರಶ್ನಿಸಿ ಮಹಿಳೆಯೊಬ್ಬರು ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಕೆ.ಬಿ. ಗೀತಾ ಅವರ ಪೀಠ ವಿಚಾರಣೆ ನಡೆಸಿ, ಕೌಟುಂಬಿಕ ನ್ಯಾಯಾಲಯದ ಆದೇಶವನ್ನು ಎತ್ತಿಹಿಡಿದಿದೆ.

ಅರ್ಜಿದಾರ ಮಹಿಳೆ ಕನ್ನಡ ತತ್ವಶಾಸ್ತ್ರದಲ್ಲಿ ಪಿಎಚ್.ಡಿ ಪದವಿ ಪಡೆದಿದ್ದು, ಕಾಲೇಜಿನಲ್ಲಿ ಉಪನ್ಯಾಸಕಿಯಾಗಿಯೂ ಕಾರ್ಯನಿರ್ವಹಿಸಿದ್ದರು. ಮದುವೆಗೂ ಮುನ್ನ ಪತಿಯ ಮೊದಲ ವಿವಾಹದ ವಿಚ್ಛೇದನ ಆದೇಶವನ್ನು ಪರಿಶೀಲಿಸಿಯೇ ವಿವಾಹವಾಗಿರುವುದಾಗಿ ಆಕೆ ಹೇಳಿಕೊಂಡಿದ್ದರು. ಆದರೆ, ಆ ವಿಚ್ಛೇದನ ಆದೇಶದ ವಿರುದ್ಧ ಹೈಕೋರ್ಟ್‌ನಲ್ಲಿ ಮೇಲ್ಮನವಿ ಬಾಕಿ ಇರುವುದು ಹಾಗೂ ಅದಕ್ಕೆ ತಡೆಯಾಜ್ಞೆ ಜಾರಿಯಲ್ಲಿರುವ ವಿಷಯವನ್ನು ಆಕೆ ಉಲ್ಲೇಖಿಸಿರಲಿಲ್ಲ.

ಹೀಗಾಗಿ ಮೊದಲ ವಿವಾಹದ ವಿಚ್ಛೇದನಕ್ಕೆ ತಡೆಯಾಜ್ಞೆ ಇರುವುದು ಅರ್ಜಿದಾರರಿಗೆ ತಿಳಿದಿರಲಿಲ್ಲ ಎಂದು ಹೇಳಲಾಗದು ಎಂದು ನ್ಯಾಯಪೀಠ ಅಭಿಪ್ರಾಯಪಟ್ಟಿದೆ.

ಸುಪ್ರೀಂ ಕೋರ್ಟ್‌ನ ಹಿಂದಿನ ತೀರ್ಪುಗಳನ್ನು ಉಲ್ಲೇಖಿಸಿದ ನ್ಯಾಯಪೀಠ, ಮೊದಲ ವಿವಾಹ ಜಾರಿಯಲ್ಲಿರುವ ಸಂಗತಿಯನ್ನು ಮರೆಮಾಚಿ ವಂಚನೆಯ ಮೂಲಕ ಎರಡನೇ ವಿವಾಹ ನಡೆದಿದ್ದರೆ ಮಾತ್ರ ಕೆಲವು ಸಂದರ್ಭಗಳಲ್ಲಿ ಎರಡನೇ ಪತ್ನಿಗೆ ಜೀವನಾಂಶದ ಹಕ್ಕು ದೊರೆಯಬಹುದು ಎಂದು ತಿಳಿಸಿದೆ. ಆದರೆ, ಈ ಪ್ರಕರಣದಲ್ಲಿ ಮೊದಲ ವಿವಾಹದ ಬಗ್ಗೆ ಅರ್ಜಿದಾರರಿಗೆ ಸಂಪೂರ್ಣ ಮಾಹಿತಿ ಇತ್ತು ಎಂದು ಪೀಠ ಹೇಳಿದೆ.



> **ಮೊದಲ ವಿವಾಹಕ್ಕೆ ವಿಚ್ಛೇದನ ಆದೇಶಕ್ಕೆ ಹೈಕೋರ್ಟ್ ತಡೆಯಾಜ್ಞೆ ಜಾರಿಯಲ್ಲಿದ್ದಾಗ ನಡೆದ ಎರಡನೇ ವಿವಾಹವನ್ನು ಕಾನೂನುಬದ್ಧವೆಂದು ಪರಿಗಣಿಸಲಾಗದು ಎಂದು ಹೈಕೋರ್ಟ್ ಸ್ಪಷ್ಟಿಸಿದೆ. ಮೊದಲ ಪತ್ನಿಯ ವಿವಾಹದ ಬಗ್ಗೆ ಸಂಪೂರ್ಣ ಮಾಹಿತಿ ಹೊಂದಿದ್ದ ಎರಡನೇ ಪತ್ನಿಗೆ ಜೀವನಾಂಶದ ಹಕ್ಕಿಲ್ಲ ಎಂದು ಹೇಳಿದ ಧಾರವಾಡ ಪೀಠ, ಕೌಟುಂಬಿಕ ನ್ಯಾಯಾಲಯದ ಆದೇಶವನ್ನು ಎತ್ತಿಹಿಡಿದಿದೆ.**

ಅಲ್ಲದೆ, ಹಿಂದೂ ಸಂಪ್ರದಾಯದಂತೆ ವಿವಾಹ ನಡೆದಿರುವುದಾಗಿ ಮಹಿಳೆ ಹೇಳಿಕೊಂಡಿದ್ದರೂ, ಸಪ್ತಪದಿ ಹಾಗೂ ಪವಿತ್ರ ಅಗ್ನಿಸಾಕ್ಷಿಯ ವಿಧಿವಿಧಾನಗಳು ನಡೆದಿಲ್ಲ ಎಂಬುದನ್ನು ಆಕೆಯೇ ಒಪ್ಪಿಕೊಂಡಿರುವುದನ್ನೂ ನ್ಯಾಯಪೀಠ ಪರಿಗಣಿಸಿದೆ. ಹೀಗಾಗಿ ಮೊದಲ ಪತ್ನಿಯೊಂದಿಗಿನ ವಿವಾಹಕ್ಕೆ ತಡೆಯಾಜ್ಞೆ ಜಾರಿಯಲ್ಲಿರುವಾಗ ಅರ್ಜಿದಾರೆಯನ್ನು ಕಾನೂನುಬದ್ಧ ಪತ್ನಿ ಎಂದು ಪರಿಗಣಿಸಲು ಸಾಧ್ಯವಿಲ್ಲ. ಆದ್ದರಿಂದ ಆಕೆಗೆ ಜೀವನಾಂಶ ಪಡೆಯುವ ಹಕ್ಕಿಲ್ಲ ಎಂದು ಸ್ಪಷ್ಟಪಡಿಸಿದೆ.

ಪ್ರತಿವಾದಿ ಪತಿ ಈ ಹಿಂದೆ ಮತ್ತೊಬ್ಬ ಮಹಿಳೆಯನ್ನು ವಿವಾಹವಾಗಿದ್ದು, ಕೌಟುಂಬಿಕ ಕಲಹದ ಹಿನ್ನೆಲೆಯಲ್ಲಿ ವಿಚ್ಛೇದನ ಕೋರಿ ಕೌಟುಂಬಿಕ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದರು. ನ್ಯಾಯಾಲಯ ವಿಚ್ಛೇದನ ಮಂಜೂರು ಮಾಡಿತ್ತು. ಬಳಿಕ ಆ ಆದೇಶವನ್ನು ಪ್ರಶ್ನಿಸಿ ಹೈಕೋರ್ಟ್‌ಗೆ ಮೇಲ್ಮನವಿ ಸಲ್ಲಿಸಲಾಗಿದ್ದು, ವಿಚ್ಛೇದನ ಆದೇಶಕ್ಕೆ ತಡೆಯಾಜ್ಞೆ ನೀಡಲಾಗಿತ್ತು.

ಈ ನಡುವೆ ಪತಿ ತನಗೆ ವಿಚ್ಛೇದನವಾಗಿರುವುದಾಗಿ ತಿಳಿಸಿ, ಅದರ ಆದೇಶದ ಪ್ರತಿಯನ್ನು ಅರ್ಜಿದಾರ ಮಹಿಳೆಗೆ ನೀಡಿದ್ದರು. ಅದನ್ನು ಪರಿಶೀಲಿಸಿದ ಬಳಿಕ ಎರಡೂ ಕುಟುಂಬಗಳ ಒಪ್ಪಿಗೆಯಿಂದ ಅವರ ವಿವಾಹ ನಡೆದಿತ್ತು.

ವಿವಾಹದ ಬಳಿಕ ಕೇವಲ ಎಂಟು ದಿನ ಪತಿಯ ಮನೆಯಲ್ಲಿ ಇದ್ದ ಮಹಿಳೆ, ತನಗೆ ಮನೆಯಿಂದ ಹೊರಗೆ ಹೋಗದಂತೆ ನಿರ್ಬಂಧಿಸಿ ಹಿಂಸೆ ನೀಡಲಾಗಿದೆ ಎಂದು ಆರೋಪಿಸಿ ಜೀವನಾಂಶ ಕೋರಿ ಕೌಟುಂಬಿಕ ನ್ಯಾಯಾಲಯದ ಮೊರೆ ಹೋಗಿದ್ದರು. ಆದರೆ, ಮೊದಲ ವಿವಾಹದ ವಿಚ್ಛೇದನಕ್ಕೆ ತಡೆಯಾಜ್ಞೆ ಇರುವುದನ್ನು ಉಲ್ಲೇಖಿಸಿ ಪತಿ ಅರ್ಜಿಗೆ ಆಕ್ಷೇಪಿಸಿದ್ದರು. ಸಾಕ್ಷ್ಯಾಧಾರ ಮತ್ತು ವಾದ-ಪ್ರತಿವಾದ ಆಲಿಸಿದ ಕೌಟುಂಬಿಕ ನ್ಯಾಯಾಲಯ ಜೀವನಾಂಶದ ಅರ್ಜಿಯನ್ನು ವಜಾಗೊಳಿಸಿತ್ತು. ಇದೀಗ ಹೈಕೋರ್ಟ್ ಕೂಡ ಆ ಆದೇಶವನ್ನು ಎತ್ತಿಹಿಡಿದಿದೆ.

## ಅಜೇಯವಾಗಿ ಫೈನಲ್‌ಗೆ ಟೀಂ ಇಂಡಿಯಾ



● ವಿಕ್ರಮ ವಾಹಿನಿ । ದುಬೈ

2026ರ ಮಹಿಳಾ ಟಿ20 ಏಷ್ಯಾಕಪ್‌ನಲ್ಲಿ ಭಾರತ ಮಹಿಳಾ ತಂಡ ಅಜೇಯವಾಗಿ ಫೈನಲ್‌ಗೆ ಲಗ್ಗೆ ಇಟ್ಟಿದೆ. ದುಬೈ ಅಂತರರಾಷ್ಟ್ರೀಯ ಕ್ರಿಕೆಟ್ ಕ್ರೀಡಾಂಗಣದಲ್ಲಿ ನಡೆದ ಸೆಮಿಫೈನಲ್ ಪಂದ್ಯದಲ್ಲಿ ಬಾಂಗ್ಲಾದೇಶವನ್ನು 40 ರನ್‌ಗಳಿಂದ ಮಣಿಸಿದ ಭಾರತ ಪ್ರಶಸ್ತಿ ಸುತ್ತಿಗೆ ಪ್ರವೇಶಿಸಿತು.

ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಭಾರತ 20 ಓವರ್‌ಗಳಲ್ಲಿ 6 ವಿಕೆಟ್‌ಗೆ 149 ರನ್ ಗಳಿಸಿತು. ಆರಂಭಿಕ ಆಟಗಾರ್ತಿ ಶಫಾಲಿ ವರ್ಮಾ 40 ಎಸೆತಗಳಲ್ಲಿ 64 ರನ್ ಸಿಡಿಸಿ ತಂಡದ ಮೊತ್ತ ಹೆಚ್ಚಿಸುವಲ್ಲಿ ಪ್ರಮುಖ ಪಾತ್ರ ವಹಿಸಿದರು. ಅವರ ಸ್ಫೋಟಕ ಇನ್ನಿಂಗ್ಸ್‌ನಲ್ಲಿ 7 ಬೌಂಡರಿ ಹಾಗೂ 3 ಸಿಕ್ಸರ್‌ಗಳಿದ್ದವು

ಶಫಾಲಿಗೆ ಪ್ರತಿಕಾ ರಾವಲ್ 20 ರನ್‌ಗಳ ಕಾಣಿಕೆ ನೀಡಿದರು. ಬಳಿಕ ರಿಚಾ ಘೋಷ್ 21 ರನ್ ಹಾಗೂ ದೀಪ್ತಿ ಶರ್ಮಾ 13 ರನ್ ಗಳಿಸಿದರು. ನಾಯಕಿ ಹರ್ಮನ್‌ಪ್ರೀತ್ ಕೌರ್ 28 ಎಸೆತಗಳಲ್ಲಿ 24 ರನ್ ಗಳಿಸಿ ಅಜೇಯರಾಗುಳಿದರು.

150 ರನ್‌ಗಳ ಗುರಿ ಬೆನ್ನತ್ತಿದ ಬಾಂಗ್ಲಾದೇಶಕ್ಕೆ ಭಾರತದ ಬೌಲರ್‌ಗಳು ಆರಂಭದಿಂದಲೇ ಒತ್ತಡ ಹೇರಿದರು. ಜುವೈರಿಯಾ ಫಿರ್ದೋಸ್ 14, ದಿಲಾರಾ ಅಖ್ತರ್ 21, ಸೋಭಾನಾ ಮೊಸ್ತರಿ 18 ಹಾಗೂ ನಾಯಕಿ ನಿಗರ್ ಸುಲ್ತಾನಾ 19 ರನ್ ಗಳಿಸಿದರೂ ಯಾರಿಗೂ ದೊಡ್ಡ ಮೊತ್ತ ಗಳಿಸಲು ಸಾಧ್ಯವಾಗಲಿಲ್ಲ.

ಅಂತಿಮವಾಗಿ ಬಾಂಗ್ಲಾದೇಶ 20 ಓವರ್‌ಗಳಲ್ಲಿ 109 ರನ್‌ಗಳಿಗೆ 7 ವಿಕೆಟ್ ಕಳೆದುಕೊಂಡು 40 ರನ್‌ಗಳಿಂದ ಸೋಲೊಪ್ಪಿಕೊಂಡಿತು. ಭಾರತದ ಪರ ದೀಪ್ತಿ ಶರ್ಮಾ 3 ವಿಕೆಟ್ ಕಬಳಿಸಿ ಬೌಲಿಂಗ್‌ನಲ್ಲಿ ಮಿಂಚಿದರು. ಬಾಂಗ್ಲಾದೇಶದ ಅಗ್ರ ಕ್ರಮಾಂಕದ ಆಟಗಾರ್ತಿಯರು ಎರಡಂಕಿ ಮೊತ್ತ ಗಳಿಸಿದರೂ ಅದನ್ನು ದೊಡ್ಡ ಮೊತ್ತವನ್ನಾಗಿ ಪರಿವರ್ತಿಸಲು ವಿಫಲರಾದರು.

ಈ ಗೆಲುವಿನೊಂದಿಗೆ ಭಾರತ ಟೂರ್ನಿಯಲ್ಲಿ ಸತತ ಗೆಲುವು ದಾಖಲಿಸಿ ಅಜೇಯ ತಂಡವಾಗಿ ಫೈನಲ್ ಪ್ರವೇಶಿಸಿದೆ.

## ದೇವನಹಳ್ಳಿಯಲ್ಲಿ ರೂ 156 ಕೋಟಿ ವೆಚ್ಚದ ತಂತ್ರಜ್ಞಾನ ಕೇಂದ್ರ

● ವಿಕ್ರಮ ವಾಹಿನಿ । ಬೆಂಗಳೂರು

ಎಂಎಸ್‌ಎಂಇ ವಲಯಕ್ಕೆ ಸುಧಾರಿತ ತಂತ್ರಜ್ಞಾನ ಹಾಗೂ ಕೌಶಲ್ಯ ತರಬೇತಿ ಒದಗಿಸುವ ಉದ್ದೇಶದಿಂದ ದೇವನಹಳ್ಳಿಯಲ್ಲಿ ರೂ 156 ಕೋಟಿ ವೆಚ್ಚದಲ್ಲಿ 10 ಎಕರೆ ಪ್ರದೇಶದಲ್ಲಿ ಅಭಿವೃದ್ಧಿಪಡಿಸಿರುವ ತಂತ್ರಜ್ಞಾನ ಕೇಂದ್ರವನ್ನು ಕೇಂದ್ರ ಎಂಎಸ್‌ಎಂಇ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಗುರುವಾರ ಉದ್ಘಾಟಿಸಿದರು.

ಎಲೆಕ್ಟ್ರಾನಿಕ್ಸ್ ವ್ಯವಸ್ಥೆ ವಿನ್ಯಾಸ ಮತ್ತು ತಯಾರಿಕೆ (ಇಎಸ್‌ಡಿಎಂ) ಕ್ಷೇತ್ರಕ್ಕೆ ಕೇಂದ್ರವು ಪ್ರಮುಖ ಆದ್ಯತೆ ನೀಡಲಿದ್ದು, ವರ್ಷಕ್ಕೆ ಸುಮಾರು 10 ಸಾವಿರ ಮಂದಿಗೆ ತರಬೇತಿ ನೀಡುವ ಸಾಮರ್ಥ್ಯ ಹೊಂದಿದೆ. ಅತ್ಯಾಧುನಿಕ ಯಂತ್ರಗಳು ಹಾಗೂ ಪ್ರಯೋಗಾಲಯಗಳನ್ನು ಹೊಂದಿರುವ ಕೇಂದ್ರದಲ್ಲಿ ಸರ್ಫೇಸ್-ಮೌಂಟ್ ತಂತ್ರಜ್ಞಾನ, ಅಡಿಟಿವ್ ಮ್ಯಾನುಫ್ಯಾಕ್ಚರಿಂಗ್, ಸಿಎನ್‌ಸಿ 3 ಮತ್ತು 5 ಆಕ್ಸಿಸ್ ಯಂತ್ರಗಳು ಹಾಗೂ ಇಡಿಎಂ ಸೇರಿದಂತೆ ವಿವಿಧ ಸುಧಾರಿತ ತಂತ್ರಜ್ಞಾನಗಳ ಸೌಲಭ್ಯ ಕಲ್ಪಿಸಲಾಗಿದೆ.

ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಶೋಭಾ ಕರಂದ್ಲಾಜೆ, ಕೇಂದ್ರವು ತರಬೇತಿ, ಉತ್ಪಾದನೆ ಹಾಗೂ ಯುವ ಪ್ರತಿಭೆಗಳನ್ನು ಬೆಳೆಸುವ ಪ್ರಮುಖ ವೇದಿಕೆಯಾಗಿ ಕಾರ್ಯನಿರ್ವಹಿಸಲಿದೆ ಎಂದರು. ವಿದ್ಯಾರ್ಥಿಗಳು ಹಾಗೂ ಯುವ ನವೋದ್ಯಮಿಗಳು ಹೊಸ ಉದ್ಯಮಗಳನ್ನು ಆರಂಭಿಸಿ ದೇಶದ ಅಭಿವೃದ್ಧಿಗೆ ಕೊಡುಗೆ ನೀಡಬೇಕು ಎಂದು ಕರೆ ನೀಡಿದರು.



ಕರ್ನಾಟಕದ ಬೆಳಗಾವಿಯಲ್ಲಿ ರೂ 178 ಕೋಟಿ ವೆಚ್ಚದಲ್ಲಿ ಮತ್ತೊಂದು ತಂತ್ರಜ್ಞಾನ ಕೇಂದ್ರ ಸ್ಥಾಪಿಸಲಾಗುತ್ತಿದೆ ಎಂದು ಅವರು ಇದೇ ವೇಳೆ ಘೋಷಿಸಿದರು. ಎಂಎಸ್‌ಎಂಇ ಸಚಿವಾಲಯದ ಕಾರ್ಯದರ್ಶಿ ಭರತ್ ಖೇರಾ, ಹೆಚ್ಚುವರಿ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತ ಡಾ. ರಜನೀಶ್ ಸೇರಿದಂತೆ ಕೇಂದ್ರ ಮತ್ತು ರಾಜ್ಯ ಸರ್ಕಾರದ ಹಿರಿಯ ಅಧಿಕಾರಿಗಳು, ಉದ್ಯಮ ಪ್ರತಿನಿಧಿಗಳು ಉಪಸ್ಥಿತರಿದ್ದರು.

ದೇವನಹಳ್ಳಿ ಕೇಂದ್ರವು ಎಲೆಕ್ಟ್ರಾನಿಕ್ಸ್ ಮತ್ತು ಏರೋಸ್ಪೇಸ್ ಕ್ಷೇತ್ರದ ಎಂಎಸ್‌ಎಂಇಗಳಿಗೆ ವಿನ್ಯಾಸ, ಮಾದರಿ ತಯಾರಿ, ಉತ್ಪಾದನೆ, ಪರೀಕ್ಷೆ, ತರಬೇತಿ ಹಾಗೂ ಸಲಹಾ ಸೇವೆಗಳನ್ನು ಒದಗಿಸುವ ಮೂಲಕ ತಾಂತ್ರಿಕ ಸಾಮರ್ಥ್ಯ ಮತ್ತು ಸ್ಪರ್ಧಾತ್ಮಕತೆಯನ್ನು ಹೆಚ್ಚಿಸಲು ನೆರವಾಗಲಿದೆ ಎಂದು ಅಧಿಕಾರಿಗಳು ತಿಳಿಸಿದರು.

## ಬ್ರಿಟಿಷರ ವಿರುದ್ಧ 'ರಣಬಾಲಿ'ಯಾಗಿ ದೇವರಕೊಂಡ ಅಬ್ಬರ

● ವಿಕ್ರಮ ವಾಹಿನಿ । ಹೈದರಾಬಾದ್

ವಿಜಯ್ ದೇವರಕೊಂಡ ಹಾಗೂ ರಶ್ಮಿಕಾ ಮಂದಣ್ಣ ಅಭಿನಯದ ಬಹುನಿರೀಕ್ಷಿತ 'ರಣಬಾಲಿ' ಚಿತ್ರದ ಟೀಸರ್ ಬಿಡುಗಡೆಯಾಗಿದ್ದು, ವಿಜಯ್ ಅವರ ರಗಡ್ ಹಾಗೂ ಉಗ್ರ ಅವತಾರಕ್ಕೆ ಮೆಚ್ಚುಗೆ ವ್ಯಕ್ತವಾಗಿದೆ.


2 ನಿಮಿಷ 32 ಸೆಕೆಂಡ್‌ಗಳ ಟೀಸರ್‌ನಲ್ಲಿ ವಿಜಯ್ ದೇವರಕೊಂಡ ಅವರು ರಾಯಲಸೀಮೆಯ ಹೋರಾಟಗಾರ ಸಿಂಗನಮಲ ಬೊಬ್ಬಿಲಿ ರಣಬಾಲಿ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. 1876–78ರ ಮದ್ರಾಸ್ ಕ್ಷಾಮದ ಹಿನ್ನೆಲೆಯ ಕಥೆಯಲ್ಲಿ ಬ್ರಿಟಿಷರ ದೌರ್ಜನ್ಯ ಮತ್ತು ಶೋಷಣೆಯ ವಿರುದ್ಧ ಹೋರಾಡುವ ಯೋಧನಾಗಿ ಅವರು ಮಿಂಚಿದ್ದಾರೆ.

ರಶ್ಮಿಕಾ ಮಂದಣ್ಣ ರಣಬಾಲಿಯ ಪತ್ನಿ ಜಯಮ್ಮ ಪಾತ್ರದಲ್ಲಿ ನಟಿಸಿದ್ದು, ವಿಜಯ್-ರಶ್ಮಿಕಾ ಜೋಡಿ ಮೂರನೇ ಬಾರಿಗೆ ತೆರೆ ಹಂಚಿಕೊಳ್ಳುತ್ತಿದೆ. 'ದಿ ಮಮ್ಮಿ' ಖ್ಯಾತಿಯ ಆರ್ನಾಲ್ಡ್ ವೋಸ್ಲೂ ಕ್ರೂರ ಬ್ರಿಟಿಷ್ ಅಧಿಕಾರಿ ಸರ್ ಥಿಯೋಡರ್ ಹೆಕ್ಟರ್ ಪಾತ್ರದಲ್ಲಿದ್ದಾರೆ.

ರಾಹುಲ್ ಸಂಕೃತ್ಯಾನ್ ನಿರ್ದೇಶನದ ಚಿತ್ರವನ್ನು ಮೈತ್ರಿ ಮೂವಿ ಮೇಕರ್ಸ್ ನಿರ್ಮಿಸಿದೆ. ತೆಲುಗು, ತಮಿಳು, ಹಿಂದಿ, ಕನ್ನಡ ಹಾಗೂ ಮಲಯಾಳಂ ಭಾಷೆಗಳಲ್ಲಿ ಅ.16ರಂದು ದಸರಾ ಪ್ರಯುಕ್ತ ಚಿತ್ರ ತೆರೆಕಾಣಲಿದೆ.

ರಾಹುಲ್ ಸಂಕೃತ್ಯಾನ್ ನಿರ್ದೇಶನದ ಚಿತ್ರಕ್ಕೆ ಅಜಯ್-ಅತುಲ್ ಸಂಗೀತ ಹಾಗೂ ನೀರವ್ ಶಾ ಛಾಯಾಗ್ರಹಣವಿದೆ. ಪ್ರಮೋದ್ ತಮ್ಮಿನೇನಿ ಚಿತ್ರಕಥೆ ಬರೆದಿದ್ದು, ಮೈತ್ರಿ ಮೂವಿ ಮೇಕರ್ಸ್ ನಿರ್ಮಿಸಿದೆ. ತೆಲುಗು, ತಮಿಳು, ಹಿಂದಿ, ಕನ್ನಡ ಹಾಗೂ ಮಲಯಾಳಂ ಭಾಷೆಗಳಲ್ಲಿ ಚಿತ್ರ ಬಿಡುಗಡೆಯಾಗಲಿದೆ.

ಮೊದಲು ಸೆ.11ರಂದು ತೆರೆಗೆ ಬರಬೇಕಿದ್ದ ಚಿತ್ರವನ್ನು ಇದೀಗ ದಸರಾ ಹಬ್ಬದ ಪ್ರಯುಕ್ತ ಅ.16, 2026ಕ್ಕೆ ಮುಂದೂಡಲಾಗಿದೆ. ಟೀಸರ್‌ಗೆ ದೊರೆತಿರುವ ಉತ್ತಮ ಪ್ರತಿಕ್ರಿಯೆ ಚಿತ್ರ ಬಿಡುಗಡೆ ಕುರಿತ ನಿರೀಕ್ಷೆಯನ್ನು ಮತ್ತಷ್ಟು ಹೆಚ್ಚಿಸಿದೆ.



Vikrama Vahini Kannada Daily, #204, Forest Layout, Jnanabharathi, Bangalore-560095
PRGI NO: KARKAN/2018/78481 vikramavahini@gmail.com 93535 91145

Printed by B.N. Murali Prasad, Published by Swarna Latha B.N., and Printed at Swarna Graphics, Forest Layout, Jnanabharathi, Bangalore -560059 and Published at Bangalore, Editor: B.N. Murali Prasad., Volume:9, Issue : 161,